ಸಂಪುಟ: 04 ಸಂಚಿಕೆ: 243 ಪುಟಗಳು: 08 ಶನಿವಾರ 16 ನವೆಂಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

ಮುಂಜಾನೆ ಮಾತು
ನಿಮಗಾಗಿ ಏನನ್ನೂ ಬಯಸಬೇಡಿ, ಎಲ್ಲಾವನ್ನೂ ಇತರರಿಗಾಗಿ ಮಾಡಿ, ಭಗವಂತನಲ್ಲೇ ಇರುವುದು ಅವನಲ್ಲೇ ಬಾಳುವುದು, ಚಲಿಸುವುದು ಎಂದರೆ ಇದೇ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಏಡ್ಸ್ ರಕ್ತ ಇಂಜೆಕ್ಟ್ ಭಯ: ಮುನಿರತ್ನ ಮನೆ ಕಡೆ ಹೋಗದ ಜನ!

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಪಾಳಯದಲ್ಲಿ ಭಯಾನಕ ಪ್ಲಾನ್‌ಗಳಿಂದಲೇ ಬೆಚ್ಚಿ ಬೀಳಿಸಿದ್ದ ಮುನಿರತ್ನ ನಾಯ್ಡು. ಇದೀಗ ಆ ಕ್ಷೇತ್ರದಲ್ಲಿ ಇನ್ನೊಂದು ಕಾರಣಕ್ಕೆ ಸುದ್ದಿಯಲ್ಲಿ ಇದ್ದಾರೆ. ಮುನಿರತ್ನ ನಾಯ್ಡು ಬೆಂಗಳೂರಿನ ರಾಜರಾಜೇಶ್ವರಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ. ರಾಜಕೀಯದಲ್ಲಿ ವಿರೋಧಿಗಳನ್ನು ಮಣಿಸುವುದಕ್ಕೆ ಮುನಿರತ್ನ ನಾಯ್ಡು ಮಾಡಿದ ಪ್ಲಾನ್‌ಗಳು ಶಾಕಿಂಗ್ ಆಗಿದ್ದವು. ಮುನಿರತ್ನ ನಾಯ್ಡು ಕರ್ನಾಟಕದಲ್ಲಿ ಹೊಸ ಮಾದರಿಯ ರಾಜಕೀಯ ಷಡ್ಯಂತರವನ್ನೇ ನಡೆಸಿದ್ದರು ಅಂತ ಸುದ್ದಿಯಾಗಿತ್ತು. ಈಗ ಜನ ಕೂಡ ಗಡಗಡ ಅಂತ ನಡುಗುತ್ತಿದ್ದಾರಂತೆ ಅದೇಕೆ ಎನ್ನುವ ವಿವರ ಇಲ್ಲಿದೆ. ಮುನಿರತ್ನ ನಾಯ್ಡುನ ರಾಜಕೀಯವಾಗಿ ಎದುರಿಸಲು ಬಂದವರ ಮೇಲೆ ಇಲ್ಲ ವಿರೋಧಿಗಳ ಮೇಲೆ ಹನಿಟ್ರ್ಯಾಪ್ ಹಾಗೂ ಎಚ್‌ಐವಿ ಸೋಂಕಿತರ ರಕ್ತವನ್ನು ಇಂಜೆಕ್ಟ್ ಮಾಡಲು ಮುಂದಾಗಿದ್ದ. ಅಲ್ಲದೇ ಈ ಪ್ರಕರಣದಲ್ಲಿನ ಕೆಲವು ಆರೋಪಿಗಳು ಏಡ್ಸ್ ರಕ್ತವನ್ನು ಇಂಜೆಕ್ಟ್ ಮಾಡಿರುವುದಾಗಿಯೂ ತಪ್ಪೊಪ್ಪಿಕೊಂಡಿರುವುದು ಸುದ್ದಿಯಾಗಿತ್ತು. ಮುನಿರತ್ನ ನಾಯ್ಡು ಜಾಮೀನಿನ ಮೇಲೆ ಬಿಡುಗಡೆಯಾಗಿದ್ದಾರೆ. ರಾಜರಾಜೇಶ್ವರಿ ನಗರದ ಶಾಸಕರಾಗಿದ್ದಾರೆ.

ಶಾಸಕರೆಂದ ಮೇಲೆ ದಿನವೂ ನೂರಾರು ಜನ ಅವರ ಮನೆಗೆ ಬರ್ತಾರೆ. ಶಾಸಕರ ಮುಂದೆ ಬಂದು ಅವರ ಸಮಸ್ಯೆಗಳ ಬಗ್ಗೆ ಹೇಳಿಕೊಳ್ಳುತ್ತಾರೆ. ಆದರೆ, ರಾಜರಾಜೇಶ್ವರಿ ನಗರದ ಜನ ಮುನಿರತ್ನ ನಾಯ್ಡು ಮನೆಗೆ ಹೋಗುವುದಕ್ಕೆ ಹೆದರಿಕೊಳ್ಳುತ್ತಿದ್ದಾರಂತೆ.

ಕೆ.ಎಸ್. ಈಶ್ವರಪ್ಪ ವಿರುದ್ಧ ಸುಮೋಟೋ ಕೇಸ್ ದಾಖಲು

• ಉದಯವಾಹಿನಿ, ಶಿವಮೊಗ್ಗ

ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ವಿರುದ್ಧ ಶಿವಮೊಗ್ಗದಲ್ಲಿ ಸುಮೋಟೋ ಕೇಸ್ ದಾಖಲಾಗಿದೆ. ಕಾಂಗ್ರೇಸ್ ಹಾಗೂ ಮುಸ್ಲಿಂರ ವಿರುದ್ಧ ರಕ್ತ ಕ್ರಾಂತಿ ಹೇಳಿಕೆ ನೀಡಿದ್ದ ಕೆ.ಎಸ್.ಈಶ್ವರಪ್ಪ ವಿರುದ್ಧ ಶಿವಮೊಗ್ಗದ ಜಯನಗರ ಠಾಣೆಯಲ್ಲಿ ಸುಮೋಟೋ ಕೇಸ್ ದಾಖಲಾಗಿದೆ. ಜಯನಗರ ಪೊಲೀಸ್ ಇನ್ಸ್‌ಪೆಕ್ಟರ್ ಸಿದ್ದೇಗೌಡ ಹೆಚ್.ಎಂ. ರವರು ಸ್ವಯಂ ಪ್ರೇರಿತ ದೂರು ನೀಡಿದ್ದು, ಈಶ್ವರಪ್ಪರ ವಿರುದ್ಧ ಕಲಂ 196(1)(ಜಿ), 299ಕಲಂ ನಂತೆ ಪ್ರಕರಣ ದಾಖಲಾಗಿದೆ. ನ.13ರಂದು ಶಿವಮೊಗ್ಗದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ್ದ ಕೆ.ಎಸ್.ಈಶ್ವರಪ್ಪ, ವಕ್ಫ್ ವಿಚಾರವಾಗಿ ಮುಸ್ಲಿಂರ ವಿರುದ್ಧ ಮಾತನಾಡಿದ್ದರು. ಸಾಧು ಸಂತರ ನೇತೃತ್ವದಲ್ಲಿ ದಂಗೆ ಏಳಬೇಕಾಗುತ್ತದೆ. ಮುಸ್ಲಿಮರಿಗೆ ರಸ್ತೆಯಲ್ಲಿ ಹುಡುಕಿ ಹೊಡೆಯಬೇಕಾಗುತ್ತದೆ ಎಂದು ಕಿಡಿಕಾರಿದ್ದರು. ಪ್ರಚೋದನಕಾರಿ ಹೇಳಿಕೆ ನೀಡಿದ ಹಿನ್ನೆಲೆಯಲ್ಲಿ ಈಶ್ವರಪ್ಪ ವಿರುದ್ಧ ಪ್ರಕರಣ ದಾಖಲಾಗಿದೆ.

ಕಾಂಗ್ರೇಸ್ ಸರ್ಕಾರದಲ್ಲಿ ಒಬ್ಬರು ಏತಿ ಮತ್ತೊಬ್ಬರು ಪ್ರೇತಿ ಎನ್ನುತ್ತಾರೆ

• ಉದಯವಾಹಿನಿ, ಬೆಂಗಳೂರು

ಎತ್ತು ಏರಿಗೆಳೆದರೆ ಕೋಣ ನೀರಿಗೆಳೆಯಿತು ಎಂಬ ಗಾದೆ ಮಾತಿನಂತೆ ಈ ಎಡಬಿಡಂಗಿ ಕಾಂಗ್ರೇಸ್ ಸರ್ಕಾರದಲ್ಲಿ ಒಬ್ಬರು ಏತಿ ಅಂದರೆ ಮತ್ತೊಬ್ಬರು ಪ್ರೇತಿ ಎನ್ನುತ್ತಾರೆ ಎಂದು ವಿಪಕ್ಷ ನಾಯಕ ಆರ್ ಅಶೋಕ್ ಕಾಲೆಳೆದಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಬರೆದುಕೊಂಡಿರುವ ಅವರು, ಬಂಡೀಪುರ ಅಭಯಾರಣ್ಯದಲ್ಲಿ ರಾತ್ರಿ ಸಂಚಾರ ನಿಷೇಧ ತೆರವು ಮಾಡುವ ಬಗ್ಗೆ ಇತ್ತೀಚೆಗಷ್ಟೇ ಒಬ್ಬೊಬ್ಬ ಸಚಿವರು ಒಂದೊಂದು ಹೇಳಿಕೆ ಕೊಟ್ಟು, ನಂತರ ಮುಖ್ಯಮಂತ್ರಿಗಳು ಉಲ್ಟಾ ಹೊಡೆದ ಮೇಲೆ ಇಡೀ ಸರ್ಕಾರವೇ ನಗೆಪಾಟಲಿಗೀಡಾಗಿತ್ತು. ಈಗ ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ನೀರಿನ ಬಿಲ್ ಮೇಲೆ ಹಸಿರು ಸೆಸ್ ಹಾಕುವ ಪ್ರಸ್ತಾಪ ಮಾಡುತ್ತಿದ್ದಂತೆ ಅಂತಹ ಪ್ರಸ್ತಾವನೆಯೇ ಇಲ್ಲ ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ಉಲ್ಟಾ ಹೊಡೆದಿದ್ದಾರೆ. ಒಟ್ಟಿನಲ್ಲಿ ಈ ಕಾಂಗ್ರೇಸ್ ಸರ್ಕಾರದಲ್ಲಿ ಎಲ್ಲಾವೂ ಎಡವಟ್ಟೆ, ಎಲ್ಲಾವೂ ಅಯೋಮಯವೇ ಎಂದು ಲೇವಡಿ ಮಾಡಿದ್ದಾರೆ.

ದರ್ಶನ್‌ಗೆ ಹೈಕೋರ್ಟ್ ಜಾಮೀನು ಆದೇಶ ಪ್ರಶ್ನಿಸಿ ಸುಪ್ರೀಂಗೆ ಮೇಲ್ಮನವಿ

• ಉದಯವಾಹಿನಿ, ಬೆಂಗಳೂರು

ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣದ ಎರಡನೇ ಆರೋಪಿ ನಟ ದರ್ಶನ್ಗೆ ಹೈಕೋರ್ಟ್ ನೀಡಿರುವ ಮಧ್ಯಂತರ ಜಾಮೀನು ಆದೇಶ ಪ್ರಶ್ನಿಸಿ ಸುಪ್ರೀಂಕೋರ್ಟ್‌ನಲ್ಲಿ ಮೇಲ್ಮನವಿ ಅರ್ಜಿ ಸಲ್ಲಿಸಲಾಗುವುದು ಎಂದು ನಗರ ಪೊಲೀಸ್ ಆಯುಕ್ತ ದಯಾನಂದ ಅವರು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಗ್ಗೆ ಮೇಲನವಿ ಸಲ್ಲಿಸಲು ಸರ್ಕಾರ ಅನುಮತಿ ನೀಡಿದೆ ಎಂದು ಅವರು ಹೇಳಿದರು. ಸುಪ್ರೀಂಕೋರ್ಟ್‌ನಲ್ಲಿ ಮೇಲನವಿ ಸಲ್ಲಿಸಲು ಹಲವು ಪ್ರಕ್ರಿಯೆಗಳಿವೆ. ಹಾಗಾಗಿ ಸದ್ಯದಲ್ಲೇ ಮೇಲನವಿ ಸಲ್ಲಿಸಲು ತಯಾರಿ ನಡೆಸಲಾಗುತ್ತಿದೆ ಎಂದರು. ಬೆನ್ನುನೋವಿನ ಚಿಕಿತ್ಸೆಗಾಗಿ ದರ್ಶನ್ಗೆ ಹೈಕೋರ್ಟ್ ಆರು ವಾರ ಕಾಲ ಮಧ್ಯಂತರ ಜಾಮೀನು ಮಂಜೂರು ಮಾಡಿದ್ದು, ಅವರು ನಗರದ ಬಿಜಿಎಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಕರಿಯಣ್ಣ VS ಕುಳ್ಳಣ್ಣ..!

ಎಚ್‌ಡಿಕೆ ವಿರುದ್ಧ ವರ್ಣ ನಿಂದನೆ ಜಮೀರ್ ಸಮರ್ಥನೆ

● 'ಕರಿಯಣ್ಣ' ವಿವಾದ ● ತಾಯಿ ಚಾಮುಂಡೇಶ್ವರಿ ಮುಂದೆ ನಿಂತು ಹೇಳ್ತಿದ್ದೇನೆ, ಜಮೀರ್ ರನ್ನು 'ಕುಳ್ಳ' ಎಂದು ಕರೆದೆ ಇಲ್ಲ: HD ಕುಮಾರಸ್ವಾಮಿ ಸ್ಪಷ್ಟನೆ ● ಚನ್ನಪಟ್ಟಣದ ಜನರ ಆಶೀರ್ವಾದ ಆಗಿದೆ; ಗೆಲ್ಲುತ್ತೇವೆ - ಎಚ್‌ಡಿ ಕುಮಾರಸ್ವಾಮಿ ● ಜಮೀರ್ ಸಹವಾಸ ನನ್ನ ಜೀವನದ ಅತ್ಯಂತ ಕರಾಳ ದಿನಗಳು ಎಂದ ಕುಮಾರಸ್ವಾಮಿ!

ಇವರೆಲ್ಲಾ ಎಲ್ಲಿದ್ದರು ಎಂದು ನನಗೆ ಗೊತ್ತಿಲ್ವಾ

ಕುಳ್ಳ ಎಂದು ಇಡೀ ಜೀವಮಾನದಲ್ಲಿ ಕರೆದಿಲ್ಲ. ಇಂತಹ ಹೇಳಿಕೆಯನ್ನು ಅಮಾಯಕರು ಕೊಟ್ಟರೆ ಜೈಲಿಗೆ ಕಳಿಹಿಸುತ್ತಾರೆ. ಇದನ್ನು ಸಹ ಎಸ್‌ಐಟಿಗೆ ಕೊಡಲಿ. ಯಾವ ಸಮಯದಲ್ಲಿ ಯಾರ ಕಾಲು ಹಿಡಿದಿದ್ದರು, ಇವರೆಲ್ಲಾ ಎಲ್ಲಿದ್ದರು ಎಂದು ನನಗೆ ಗೊತ್ತಿಲ್ವಾ. ಚೆಲುವ ಅಂತ ಕರೆದಿಲ್ವಾ ಅಂತಾರೆ. ಇದು ಅವರ ಕಲ್ಚರ್ ತೋರಿಸುತ್ತದೆ. ನಾನು ಕುಳ್ಳ ಎಂದು ಇಡೀ ಜೀವಮಾನದಲ್ಲಿ ಕರೆದಿಲ್ಲ ಎಂದು ಕುಮಾರಸ್ವಾಮಿ ಹೇಳಿದರು

ಚುನಾವಣೆ ಫಲಿತಾಂಶ ಬಗ್ಗೆ ನಿಖಿಲ್ ಏನಂದ್ರು..?



ಚನ್ನಪಟ್ಟಣ ರಾಜ್ಯದ ಮೂರು ಉಪ ಚುನಾವಣೆಗಳ ಪೈಕಿ ಚನ್ನಪಟ್ಟಣ ಕ್ಷೇತ್ರ ಬಹಳ ಮಹತ್ವ ಪಡೆದುಕೊಂಡಿದ್ದು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಚನ್ನಪಟ್ಟಣ ಫಲಿತಾಂಶದ ಬಗ್ಗೆ ಕುತೂಹಲ ಇದೆ. ಹಾಗಾಗಿ ಈ ಉಪಚುನಾವಣೆ ರಾಜ್ಯದ ಇತಿಹಾಸ ಪುಟದಲ್ಲಿ ಉಳಿಯುತ್ತದೆ ಎಂದು ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅಭಿಪ್ರಾಯಪಟ್ಟಿದ್ದಾರೆ.

• ಉದಯವಾಹಿನಿ, ಬೆಂಗಳೂರು

ವಸತಿ ಮತ್ತು ವಕ್ಫ್ ಸಚಿವ ಜಮೀರ್ ಅಹ್ಮದ್ ಖಾನ್ ಅವರು ತಮ್ಮನ್ನು 'ಕರಿಯಾ' ಎಂದು ಕರೆದಿರುವ ಬಗ್ಗೆ ಮೊದಲ ಬಾರಿ ಪ್ರತಿಕ್ರಿಯಿಸಿದ ಕೇಂದ್ರ ಸಚಿವ ಮತ್ತು ಜೆಡಿಎಸ್ ನಾಯಕ ಎಚ್ ಡಿ ಕುಮಾರಸ್ವಾಮಿ ಅವರು, ಕುಳ್ಳ ಎನ್ನುವ ಸಂಸ್ಕೃತಿ ನನ್ನದಲ್ಲ ಎಂದು ತಿರುಗೇಟು ನೀಡಿದ್ದಾರೆ. ಚನ್ನಪಟ್ಟಣ ಉಪಚುನಾವಣೆಯ ಪ್ರಚಾರದ ಸಂದರ್ಭದಲ್ಲಿ ಸಚಿವ ಜಮೀರ್ ಅಹ್ಮದ್ ಖಾನ್ ಅವರು, ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಅವರನ್ನು ಕರಿಯ ಎಂದು ಕರೆಯುವ ಮೂಲಕ ಕಪ್ಪು ವರ್ಣದ ಜನಾಂಗೀಯ ನಿಂದನೆ ಮಾಡಿದ್ದರು. ಬಳಿಕ ತಮ್ಮ ಹೇಳಿಕೆ ಸಮರ್ಥಿಸಿಕೊಂಡಿದ್ದ ಜಮೀರ್ ಅಹ್ಮದ್ ಖಾನ್, ಪ್ರೀತಿಯಿಂದ ಅವರು ನನ್ನನ್ನು 'ಕುಳ್ಳ' ಎಂದು ಕರೆಯುತ್ತಿದ್ದರು. ನಾನು ಅವರನ್ನು ಕರಿಯಣ್ಣ ಎಂದು ಕರೆಯುತ್ತಿದ್ದೆ. ನನ್ನ ಹೇಳಿಕೆಯಿಂದ ಜೆಡಿಎಸ್ ಕಾರ್ಯಕರ್ತರಿಗೆ ನೋವಾಗಿದ್ದರೆ ನಾನು ಕ್ಷಮೆಯಾಚಿಸುತ್ತೇನೆ ಎಂದು ಜಮೀರ್ ಅಹ್ಮದ್ ಖಾನ್ ಹೇಳಿದ್ದರು. ಜಮೀರ್ ಹೇಳಿಕೆ ಸಾಕಷ್ಟು ಚರ್ಚೆಗೂ ಕಾರಣವಾಗಿತ್ತು. ಈ ಒಂದು ಹೇಳಿಕೆಯಿಂದ ಕಾಂಗ್ರೇಸ್ ಅಭ್ಯರ್ಥಿ ಸೋಲುವ ಸಾಧ್ಯತೆ ಇದೆ ಎನ್ನುವ ವಿಶ್ಲೇಷಣೆಗಳು ನಡೆಯುತ್ತಿವೆ. ಸಚಿವ ಜಮೀರ್ ಹೇಳಿಕೆ ಬಗ್ಗೆ ಇದುವರೆಗೂ ಮೌನವಾಗಿದ್ದ ಕುಮಾರಸ್ವಾಮಿ ಮೈಸೂರಿನಲ್ಲಿ ಮೊದಲ ಬಾರಿಗೆ ಪ್ರತಿಕ್ರಿಯಿಸಿದ್ದಾರೆ. ಕುಳ್ಳ, ಕರಿಯ ಅನ್ನೋಕೆ, ನಾನು ಜಮೀರ್ ರೀತಿಯ ವಾತಾವರಣದಿಂದ ಬಂದಿಲ್ಲ. ಅವರ ಮಾತು ಅವರ ಸಂಸ್ಕೃತಿ ತೋರಿಸುತ್ತೆ. ಅವ್ರಿಗೆ ನಿಜಕ್ಕೂ ಮಾನ ಮರ್ಯಾದೆ ಇದಿಯಾ...? ನಾವು ಈ ಹಿಂದೆ ಜೊತೆಯಾಗಿ ಇದ್ದಿದ್ದು ರಾಜಕೀಯವಾಗಿ ಮಾತ್ರ ಎಂದರು. ಇದೇವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ಗೃಹ ಸಚಿವ ಪರಮೇಶ್ವರ್ ವಿರುದ್ಧವೂ ವಾಗ್ದಾಳಿ ನಡೆಸಿದ ಕುಮಾರಸ್ವಾಮಿ, ಸಿಎಂ, ಡಿಸಿಎಂ, ಗೃಹ ಸಚಿವರು ಈ ವಿಚಾರಕ್ಕೆ ಏನು ಹೇಳಿದ್ದಾರೆ ಎನ್ನುವುದು ನನಗೆ ಗೊತ್ತಿದೆ . ಈ ವಿಚಾರವನ್ನು ಡಿಫೆಂಡ್ ಮಾಡಿಕೊಂಡಿದ್ದಾರೆ. ಎಂಥ ಎಂತಹದ್ದೋ ಪ್ರಕರಣಗಳಲ್ಲಿ ಕೇಸ್ ಹಾಕಿದ್ದಾರೆ. ಇವರಿಗೆ ಮಾನ ಮರ್ಯಾದೆ ಇದ್ದರೆ ಈ ಪ್ರಕರಣಕ್ಕೂ ಎಸ್‌ಐಟಿ ರಚನೆ ಮಾಡಿ ತನಿಖೆ ಮಾಡಲಿ.. ಈ ರೀತಿಯ ಸರ್ಕಾರವನ್ನು ನಾಗರಿಕ ಸರ್ಕಾರ ಅಂತ ನಾವು ಕರಿಬೇಕಾ..? ಎಂದು ಕಿಡಿಕಾರಿದರು.

1 ಜಮೀರ್‌ನ ಕುಳ್ಳ ಎಂದು ಕರೆದಿಲ್ಲ ಎಂದು ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಹೇಳಿಕೆ.

2 ಶಕ್ತಿದೇವತೆ ಚಾಮುಂಡೇಶ್ವರಿಗೆ ವಿಶೇಷ ಪೂಜೆ ಸಲ್ಲಿಸಿದ ಎಚ್‌ಡಿ ಕುಮಾರಸ್ವಾಮಿ.

3 ಚನ್ನಪಟ್ಟಣದಲ್ಲಿ ಜನತೆಯ ಆಶೀರ್ವಾದ ಆಗಿದೆ. ಉತ್ತಮವಾದ ರೀತಿಯಲ್ಲಿ ಗೆಲ್ಲುತ್ತೇವೆ ಎಂದ ಎಚ್‌ಡಿಕೆ.

ಚನ್ನಪಟ್ಟಣದಲ್ಲಿ ಗೆಲ್ಲುತ್ತೇವೆ

ಚನ್ನಪಟ್ಟಣದಲ್ಲಿ ಜನತೆಯ ಆಶೀರ್ವಾದ ಆಗಿದೆ. ಉತ್ತಮವಾದ ರೀತಿಯಲ್ಲಿ ಗೆಲ್ಲುತ್ತೇವೆ. ರಾಜಕೀಯವಾಗಿ ಏನು ನಡೆದಿದೆ ಎಂಬುದನ್ನು ಯೋಗೇಶ್ವರ್ ವಿಮರ್ಶೆ ಮಾಡಿದ್ದಾರೆ. ಜಮೀರ್ ಹೇಳಿಕೆಯಿಂದ ಏನು ವ್ಯತ್ಯಾಸ ಆಗಿಲ್ಲ. ನಾವು ಚನ್ನಪಟ್ಟಣ ಕ್ಷೇತ್ರದಲ್ಲಿ ಗೆಲ್ಲುತ್ತೇವೆ ಎಂದು ಕುಮಾರಸ್ವಾಮಿ ಹೇಳಿದರು.

ಗರ್ವಭಂಗ, ಸೊಕ್ಕು ಮುರಿಯುತ್ತೇನೆ

ಬಸವರಾಜ್ ಹೊರಟ್ಟಿ ಈಗಲೂ ಇದ್ದಾರೆ ಅವರನ್ನೇ ಕೇಳಿ. ಜಮೀರ್ ಅಹಮದ್ ಮಾತು ಅವರ ಸಂಸ್ಕೃತಿಯನ್ನು ತೋರಿಸುತ್ತದೆ. ಸಿಎಂ ಡಿಸಿಎಂ ಅವರ ಮಾತುಗಳನ್ನು ಸಮರ್ಥಿಸಿಕೊಂಡಿದ್ದಾರೆ.ಇದು ನಾಗರೀಕ ಸರ್ಕಾರನ..? ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಗರ್ವಭಂಗ, ಸೊಕ್ಕು ಮುರಿಯುತ್ತೇನೆ ಎಂಬುವುದು ಸಂವಿಧಾನಿಕ ಪದವಲ್ಲ. ಇದರಲ್ಲಿ ತಪ್ಪೇನಿದೆ...? ಎಂದು ಎಚ್ ಡಿ ದೇವೇಗೌಡ ಹೇಳಿಕೆಯನ್ನು ಹೆಚ್ ಡಿ ಕುಮಾರಸ್ವಾಮಿ ಸಮರ್ಥಿಸಿಕೊಂಡರು. ದುಡ್ಡಿನ ಮದದಿಂದ ಈ ರೀತಿ ಕೊಂಡುಕೊಳ್ಳುತ್ತೇನೆ ಎನ್ನುತ್ತಾರೆ ಎಂದು ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ಎಚ್ ಡಿ ಕುಮಾರಸ್ವಾಮಿ ತಿಳಿಸಿದರು.

ಮುಡಾ ಹಗರಣದಲ್ಲಿ ಇಬ್ಬರು ಸಚಿವರು ಶಾಮೀಲು..!

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ನವರ ಕುರ್ಚಿಯನ್ನು ಅಲುಗಾಡಿಸುತ್ತಿರುವ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆ ಪ್ರಕರಣದಲ್ಲಿ ಇಬ್ಬರು ಸಚಿವರು ಪ್ರಭಾವ ಬೀರಿರುವುದು ಬೆಳಕಿಗೆ ಬಂದಿದೆ.

ಕಳೆದ ಒಂದು ತಿಂಗಳಿನಿಂದ ಮುಡಾ ಪ್ರಕರಣದಲ್ಲಿ ಆಯುಕ್ತರು, ಹಿಂದಿನ ಆಯುಕ್ತರು, ಅಧ್ಯಕ್ಷರು ಹಾಗೂ ವಿವಿಧ ಶ್ರೇಣಿಯ ಅಧಿಕಾರಿಗಳನ್ನು ಇ.ಡಿ ತನಿಖೆಗೆ ಒಳಪಡಿಸಿದಾಗ, ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಪುಟದ ಇಬ್ಬರು ಸಚಿವರು ಪ್ರಭಾವ ಬೀರಿ ನಿವೇಶನ ಹಂಚುವಂತೆ ತಮ ಮೇಲೆ ಒತ್ತಡ ಹಾಕಿದ್ದರು ಎಂಬ ಸ್ಫೋಟಕ ಮಾಹಿತಿಯನ್ನು ಹೊರಹಾಕಿದ್ದಾರೆ. ಕಾನೂನು ಉಲ್ಲಂಘಿಸಿ ಹಂಚಿಕೆ ಮಾಡಲು ಸಾಧ್ಯವಿಲ್ಲ ಎಂದು ಹೇಳಿದರೂ ಸಹ ತಮ ಪ್ರಭಾವ ಬಳಸಿಕೊಂಡು ಆಪ್ತರಿಗೆ ನಿವೇಶನಗಳನ್ನು ಮಾಡಲು ನಮಿಂದ ಅಧಿಕಾರ ದುರುಪಯೋಗಪಡಿಸಿ ಕೊಂಡಿ ದ್ದಾರೆಂಬ ಮಾಹಿತಿಯನ್ನು ತನಿಖೆ ವೇಳೆ ಬಹಿರಂಗ ಪಡಿಸಿದ್ದಾರೆ. ಈ ಸಚಿವರು ಯಾರು ಎಂಬುದು ಬಹಿರಂಗ ವಾಗಿಲ್ಲವಾದರೂ ಮೂಲಗಳ ಪ್ರಕಾರ ಸಿದ್ದ ರಾಮಯ್ಯ ಬಣದಲ್ಲಿ ಗುರುತಿಸಿಕೊಂಡಿರುವ ಬೆಂಗಳೂರು ಹಾಗೂ ಮೈಸೂರಿನ ಸಚಿವರೇ ಪ್ರಭಾವ ಬಳಸಿ ನಿವೇಶನವನ್ನು ಹಂಚಲು ಒತ್ತಡ ಹಾಕಿದ್ದರು ಎಂಬುದು ಗೊತ್ತಾಗಿದೆ.

ಶಿಶುಪಾಲನಾ ರಜೆ ಮಂಜೂರು ಮಾಡಿ ಆದೇಶ!

• ಉದಯವಾಹಿನಿ, ಬೆಂಗಳೂರು

ಅನುದಾನಿತ ಪ್ರಾಥಮಿಕ ಮಹಿಳಾ ಶಿಕ್ಷಕಿರಿಗೆ/ನೌಕರರಿಗೆ ಶಿಶುಪಾಲನಾ ರಜೆ ಸೌಲಭ್ಯವನ್ನು ಮಂಜೂರು ಮಾಡಿ ರಾಜ್ಯ ಸರ್ಕಾರವು ಮಹತ್ವದ ಆದೇಶ ಹೊರಡಿಸಿದೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ತಮ್ಮ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ಅನುದಾನಿತ ಪ್ರಾಥಮಿಕ ಶಾಲಾ ಮಹಿಳಾ ಶಿಕ್ಷಕರು/ನೌಕರರಿಗೆ ಶಿಶುಪಾಲನಾ ರಜೆಯನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಕಾರ್ಯಗಳಿಗೆ ತೊಂದರೆಯಾಗದಂತೆ ವಿಸ್ತರಿಸಲು ಹಾಗೂ ರಜೆಯ ಸಮಯದಲ್ಲಿ ಪರ್ಯಾಯ ವ್ಯವಸ್ಥೆಯನ್ನು ಸಂಬಂಧಿಸಿದ ಆಯಾ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯವರೇ ಸ್ವಂತ ಸಂಪನ್ಮೂಲದಿಂದ ಒದಗಿಸಿಕೊಂಡು ವಿಸ್ತರಿಸಲು ಅಗತ್ಯ ಕ್ರಮವಹಿಸುವಂತೆ ನಿರ್ದೇಶಿಸಲಾಗಿದೆ.

ಕರ್ನಾಟಕದಲ್ಲಿ ಬರೋಬ್ಬರಿ 6 ಲಕ್ಷ ಎಕರೆ ವಕ್ಫ್ ಬೋರ್ಡ್‌ಗೆ ಮಾಡಲು ಹೊರಟಿದ್ದಾರೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ವಕ್ಫ್ ವಿವಾದ ತಾರಕಕ್ಕೇರಿರುವ ಬೆನ್ನಲ್ಲೇ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮತ್ತೊಂದು ಗಂಭೀರ ಆರೋಪ ಮಾಡಿದ್ದಾರೆ. ಕರ್ನಾಟಕದಲ್ಲಿ ಸುಮಾರು 6 ಲಕ್ಷ ಎಕರೆ ಆಸ್ತಿಯನ್ನು ವಕ್ಫ್ ಬೋರ್ಡ್ ಗೆ ಮಾಡಲು ಹೊರಟಿದ್ದಾರೆ ಎಂದಿದ್ದಾರೆ.

ವಕ್ಫ್ ಎಂಬುದೇ ದೊಡ್ಡ ಮೋಸ. ಮೊದಲು ವಕ್ಫ್ ಮಂಡಳಿ ರದ್ದಾಗಬೇಕು. ಇದು ರಾಜ್ಯಕ್ಕೆ ಅಂಟಿದ ಶಾಪ.

ಹೀಗಾಗಿ ಇದನ್ನು ನ್ಯಾಯಯುತವಾಗಿ ಬಗೆಹರಿಸಬೇಕು. ಖಬರಸ್ತಾನ ಹೆಸರಿನಲ್ಲಿ ಕಂದಾಯ ಇಲಾಖೆಯ 2,700 ಎಕರೆ ಕೊಡಲು ಹೊರಟಿದ್ದಾರೆ. ವಕ್ಫ್‌ಗೆ ಎಷ್ಟು ಜಾಗ ಕೊಡಬೇಕು ಎಂದು ಅವರು ತೀರ್ಮಾನ ಮಾಡಿದ್ದಾರೆ. ಸುಮಾರು 6

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಅದೀಗ ಬ್ರಹ್ಮಜ್ಞಾನ

ಮೊನ್ನೆ ಜಮಖಂಡಿ ತಾಲ್ಲೂಕಿನ ಹಿಪ್ಪರಗಿಯ ಸಿದ್ಧಾರೂಢ ಮಠದಲ್ಲಿ ಸಿದ್ಧಯ್ಯ ಪ್ಪನವರ ಪುಣ್ಯಾರಾಧನೆಯಲ್ಲಿ ಪಾಲ್ಗೊಂಡೆ. ಚೆನ್ನಬಸವಣ್ಣನ ವಚನದ ಮೇಲೆ ಉಪನ್ಯಾಸ. ಆವಲ್ಲಿ ಸರ್ವ ಪ್ರಪಂಚ ನಿವೃತ್ತಿಯಾಗಿಹುದು ಅದೀಗ ಬ್ರಹ್ಮಜ್ಞಾನ. ಇಲ್ಲಿ ನಾಮ ರೂಪಾತ್ಮಕ ವ್ಯಾವಹಾರಿಕ ಬಾಹ್ಯ ಪ್ರವೃತ್ತಿ ಪ್ರಪಂಚ ಪ್ರವೃತ್ತಿ. ಪಡೆಯಬೇಕೆಂದು ಪಡೆಯಲು ಪ್ರವೃತ್ತಿ. ಜಗದಗಲ ಮುಗಿಲಗಲ ಮಿಗೆಯಗಲ ಪರಮಾತ್ಮನೇ ತಾನೆಂದು ತಿಳಿದ ಬಳಿಕ ತಾನೇ ಎಲ್ಲವೂ ಆಗಿರುವುದರಿಂದ ಪಡೆಯುವಂಥದ್ದು ಇಲ್ಲವಾಗಿ ಪ್ರವೃತ್ತಿ ನಿವೃತ್ತಿಯಾಗುವುದು. ಆವಲ್ಲಿ ಕೇವಲ ನಿಶ್ಚಿಂತವಾಗಿಹುದು ಅದೀಗ ಬ್ರಹ್ಮಜ್ಞಾನ. ಕೊರತೆಯಾದಾಗ ಆಬಗ್ಗೆ ಚಿಂತೆ. ತನಗಿಂತ ಬೇರೆ ಇನ್ನಿಲ್ಲವೆಂಬುದನ್ನು ಅರಿತ ಬಳಿಕ ಕೊರತೆ ತೋರದಾಗಿ ನಿಶ್ಚಿಂತ. ಆವಲ್ಲಿ ತಾನೆಂಬ ತೋರಿಕೆ ಹುಟ್ಟದಿಹುದು ಅದೀಗ ಬ್ರಹ್ಮಜ್ಞಾನ. ಸಮುದ್ರ ಸೇರಿ ಕರಗಿ ಒಂದಾದ ಉಪ್ಪು ತನ್ನ ಪ್ರತ್ಯೇಕತೆಯ ತೋರದು. ಜೀವನು ಶಿವನಲ್ಲಿ ಬೆರೆತು ಐಕ್ಯನಾದ ಬಳಿಕ ಆ ಜೀವನಲ್ಲಿ ತಾನೆಂಬ ಭಾವ ಉಳಿಯದು. ಆವಲ್ಲಿ ಕೂಡಲಚೆನ್ನಸಂಗಯ್ಯನಲ್ಲದೇ ಪೆರತೊಂದನರಿಯದಿಹುದು ಅದೀಗ ಬ್ರಹ್ಮಜ್ಞಾನ. ಕೂಡಲ ಚೆನ್ನಸಂಗಯ್ಯ ಪರಮಾತ್ಮ. ಪರಮಾತ್ಮನಲ್ಲಿ ಬೆರೆತವನು ಪರಮಾತ್ಮನಾಗಿಯೇ ಉಳಿಯುವನು. ಅಲ್ಲಿ ಪರಮಾತ್ಮನಲ್ಲದೇ ಬೇರೇನೂ ತೋರದು ತಿಳಿಯದು. ಉಪನಿಷತ್ತುಗಳು ಪ್ರತಿಪಾದಿಸುವ ಬ್ರಹ್ಮಜ್ಞಾನದ ಸ್ವರೂಪವನ್ನು ಇಲ್ಲಿ ನಿರೂಪಿಸಿದೆ. ಭಿದ್ಯತೇ ಹೃದಯಗ್ರಂಥಿಃ ಛಿದ್ಯಂತೇ ಸರ್ವಸಂಶಯಾಃ ಇತ್ಯಾದಿ ಮಂತ್ರ ಸ್ಮರಣೀಯ. ವಚನಕಾರರು ವೇದವಿರೋಧಿಗಳು ಎನ್ನುವವರು ಇಂಥ ವಚನಗಳತ್ತ ಗಮನ ಹರಿಸಲಿ.

ನೌಕರರಿಗೆ ಅನ್ಯಾಯ, ಸರ್ಕಾರದ ವಿರುದ್ಧ ರಾಜು ಕಾಗೆ ಅಪಸ್ವರ

ಅಧಿಕಾರ ಹಿಡಿಯುವಾಗ ರೈತ ಪರ ಮಾಡುವ ಪಕ್ಷಗಳು, ರಾಜಕಾರಣಗಳು ಅಧಿಕಾರಕ್ಕೆ ಬಂದ ಮೇಲೆ ರೈತರನ್ನು ಮರೆಯುತ್ತಾರೆ

• ಉದಯವಾಹಿನಿ, ಬೆಂಗಳೂರು

ಶಕ್ತಿ ಯೋಜನೆಯ ಪರಿಷ್ಕರಣೆ ಮಾಡಲಾಗುತ್ತದೆ, ನಿಲ್ಲಿಸಲಾಗುತ್ತದೆ ಎಂದು ಚರ್ಚೆ ಜೋರಾಗಿತ್ತು. ಇದರ ಮಧ್ಯೆ ರಾಜ್ಯ ಸರ್ಕಾರಿ ನೌಕರರು, ಸಾರಿಗೆ ನೌಕರರಿಗೆ ಆಗುತ್ತಿರುವ ಅನ್ಯಾಯದ ಕುರಿತು ಆಡಳಿತ ಪಕ್ಷ ಕಾಂಗ್ರೇಸ್‌ನ ಶಾಸಕ ರಾಜು ಕಾಗೆ ಅವರು ಸರ್ಕಾರದ ವಿರುದ್ಧ ಬೇಸರ ವ್ಯಕ್ತಪಡಿಸಿದ್ದಾರೆ.

ಈ ಹಿಂದೆ ರಾಜ್ಯ ಕಾಂಗ್ರೇಸ್ ಸರ್ಕಾರವು ಅಧಿ ಕಾರಕ್ಕೆ ಬಂದ ಬಳಿಕ ಕರ್ನಾಟಕದಲ್ಲಿ ಯಾವುದೇ ರೈತಪರ ಯೋಜನೆಗಳು ಜಾರಿಯಾಗಿಲ್ಲ. ಅಧಿಕಾರ ಹಿಡಿಯುವಾಗ ರೈತ ಪರ ಮಾಡುವ ಪಕ್ಷಗಳು, ರಾಜಕಾರಣಗಳು ಅಧಿಕಾರಕ್ಕೆ ಬಂದ ಮೇಲೆ ರೈತರನ್ನು ಮರೆಯುತ್ತಾರೆ.

ಸದ್ಯ ಕಾಂಗ್ರೇಸ್ ಬಂದ ಮೇಲೂ ಹಾಗೆಯೇ ಆಗಿದೆ ಎಂದು ಸ್ವಪಕ್ಷ ಆಡಳಿತದ ವಿರುದ್ಧವೇ ಕಿಡಿ ಕಾರಿದ್ದರು. ಬೇಸರ ಹೊಸ ಹಾರಕಿದ್ದಾರು.

ಉದಯವಾಹಿನಿ ಚಿತ್ರ

405 ಕೋಟಿ ರೂ. ಬಾಕಿ ಹಣ ಬರಬೇಕಿದೆ

ಶುಕ್ರವಾರ ಹುಬ್ಬಳ್ಳಿಯಲ್ಲಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಹ ಅವರು ಕೆಲವು ವಿಚಾರಗಳನ್ನು ಪ್ರಸ್ತಾಪಿಸಿ ದ್ದಾರೆ. ಮಹಿಳೆ ಯರಿಗೆ ಉಚಿತ ಬಸ್ ಸೌಲಭ್ಯ ಕಲ್ಪಿ ಸುವ ಈ ಶಕ್ತಿ ಯೋಜನೆ ಬಹಳ ಪುಣ್ಯದ ಕೆಲಸವಾಗಿದೆ.

ಆದರೆ ಈ ಯೋಜನೆಗೆ ಸಾಕಷ್ಟು ಜನರು ಶಾಪವನ್ನು ಹಾಕತ್ತಿದ್ದಾರೆ ಅಂತಲೂ ತಿಳಿಸಿದ್ದಾರೆ. ಸರ್ಕಾರಿ ನೌಕರರಿಗೆ ಸಾಮಾಜಿಕ ನ್ಯಾಯ ಸಿಗಬೇಕಿದೆ. ಸರ್ಕಾರಿ ನೌಕರರು ಎಸಿ ಫ್ಯಾನ್ ಕೆಳಗೆ ಕೂತು

ಸಾರಿಗೆ ಇಲಾಖೆ ವ್ಯಾಪ್ತಿಗೆ ಹೊಸ ಹೊಸ ಬಸ್ ಸೇರ್ಪಡೆಗೊಳಿಸಲು ಕಾರಣವಾದ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರು ಕಾರಣವಾಗಿದ್ದಾರೆ. ಅವರು ಸೋಲಿಲ್ಲದ ಸರದಾರ ಎಂದು ಸಂಸ್ಥಾಪನಾ ದಿನಾಚರಣೆಯಲ್ಲಿ ಕಾರ್ಮಿಕ ಸಚಿವ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಹಾಡಿ ಹೊಗಳಿದರು.

ಕೆಲಸ ಮಾಡುತ್ತಾರೆ. ಈ ಪೈಕಿ ಯಾರು ಹೆಚ್ಚು ಕೆಲಸ ಮಾಡುತ್ತಾರೋ ಅವರಿಗೆ ಕಡಿಮೆ ವೇತನ ಸಿಗುತ್ತಿದೆ. ಯಾರೂ ಕಡಿಮೆ ಕೆಲಸ ಮಾಡುತ್ತಾರೋ ಅವರಿಗೆ ಹೆಚ್ಚು ಸಂಬಳ ಸಿಗುತ್ತಿದೆ ಎಂದ ಅವರು ಸರ್ಕಾರಿ ನೌಕರರಿಗೆ ಅನ್ಯಾಯವಾಗುತ್ತಿದೆ ಎಂದು ಬಹಿರಂಗವಾಗಿ ತಿಳಿಸಿದರು. ನಾನು ಸಹ ಬಡವರ ಮನೆಯಲ್ಲಿ ಹುಟ್ಟಿ ಬೆಳೆದವನು. ಸರ್ಕಾರಿ ನೌಕರರಿಗೆ ಆಗುತ್ತಿರುವ ಅನ್ಯಾಯದ ವ್ಯವಸ್ಥೆ

ಸಾರಿಗೆ ಸಚಿವರಲ್ಲಿ ಮನವಿ

ವಿರೋಧಿಗಳು ಮೊದಲಿನಿಂದಲೂ ಯೋಜನೆ ಬಗ್ಗೆ ಅಪಸ್ವರ ಎತ್ತುತ್ತಲೇ ಇದ್ದಾರೆ. ಆದರ ಸರ್ಕಾರ ಬಂದಾಗಿಂದ ಈ ಯೋಜನೆ ಅತ್ಯಂತ ಯಶಸ್ವಿಯಾಗಿದೆ. ಧಾರವಾಡ ಜಿಲ್ಲೆಗಳಿಗೆ ಇನ್ನಷ್ಟು ಅಗತ್ಯ ಬಸ್‌ಗಳನ್ನು ಒದಗಿಸಬೇಕು ಎಂದು ಅವರು ಕಾರ್ಯಕ್ರಮದಲ್ಲಿ ಸಾರಿಗೆ ಸಚಿವರಲ್ಲಿ ಮನವಿ ಮಾಡಿದರು.

ಬದಲಾಗಬೇಕಿದೆ. ನಮ್ಮಲ್ಲಿ ಇರುವ ನೌಕರರು ಯಾರೂ ಶ್ರೀಮಂತರ ಅಲ್ಲ. ಎಲ್ಲಿ ನೌಕರಿ ಸಿಕ್ಕಿಲ್ಲ. ಹಾಗಾಗಿ ಇಲ್ಲಿಗೆ ಬಂದಿದ್ದಾರೆ ಎಂ ದು ವಾಯುವ್ಯ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ನೌಕ ರರನ್ನು ಉದ್ದೇಶಿಸಿ ಅವರು ಮಾತನಾಡಿದರು.

ಇದೆಲ್ಲ ಮನಗಂಡು ರಾಜ್ಯ ಸರ್ಕಾರ ಕೂಡಲೇ 1000 ಕೋಟಿ ಅನುದಾನ ನೀಡಬೇಕು. ನೀವು ವಿಶೇಷ ಅನುದಾನ ಬಿಡುಗಡೆ ಮಾಡದಿದ್ದರೆ, ನಾವೆಲ್ಲರು ಬದುಕುವುದಿಲ್ಲ ಎಂದು ಅವರು ನೌಕರರ ಪರ ಧ್ವನಿಯದರು. ಗ್ಯಾಚೂಟಿ ಹಣ ಪೆಂಡಿಂಗ್. ನಮ್ಮದು ನುಡಿದಂತೆ ನಡೆದ ಸರ್ಕಾರ ಎಂದು ಗುಜರಾತ್‌ಗೆ ಹೋಲಿಕೆಗೆ ಮಾಡಿ ಅವರು ಹೇಳಿದರು. ಕಾಂಗ್ರೇಸ್ ಸರ್ಕಾರ ಐದು ಗ್ಯಾರಂಟಿ ಯೋಜನೆಯಲ್ಲಿ ಈ ಶಕ್ತಿ ಯೋಜನೆಗೆ ಅತ್ಯಂತ ಪ್ರಮುಖವಾದದ್ದಾಗಿದೆ. ಹೆಣ್ಣಕ್ಕಳಿಗೆ ಬಸ್‌ನಲ್ಲಿ ಉಚಿತ ಬಸ್ ಪ್ರಯಾಣದ ಅವಕಾಶ ನೀಡಲಾಗಿದೆ. ಅದಕ್ಕೆ ಸಿಎಂ ಸಿದ್ದರಾಮಯ್ಯ ಹಾಗೂ ಸಚಿವ ರಾಮಲಿಂಗಾರೆಡ್ಡಿ ಅವರು ಕಾರಣ.

ಇನ್ನೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ ಪ್ರಯಾಣ/ಟಿಕೆಟ್ ದರ ಹೆಚ್ಚಳ ಮಾಡಲಾಗಿದ್ದಕ್ಕೆ ಜನರು ಶಾಪ ಹಾಕುತ್ತಿದ್ದಾರೆ. ಜನರ ಸೇವೆಗೆ ಸಾರಿಗೆ ಸಂಸ್ಥೆಗಳು ಇವೆ. ನಮಗೆ 405 ಕೋಟಿ ರೂಪಾಯಿ ಬಾಕಿ ಹಣ ಬರಬೇಕಿದೆ. ದೀಪಾವಳಿ ಹಬ್ಬದ ಸಮಯದಲ್ಲಿ ದುಡ್ಡು ಇರಲಿಲ್ಲ. ಇದೆಲ್ಲ ಕಂಡು ಬಹಳ ನೋವಾಯ್ತು ಎಂದು ತಿಳಿಸಿದ್ದಾರೆ.

ಸಿದ್ದುರ ಮುಂದಿನ ಗ್ಯಾರಂಟಿ ಮನೆ ಮನೆಗೆ ಬಾರ್ ಭಾಗ್ಯವೇ?

• ಉದಯವಾಹಿನಿ, ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರ ಹೆಸರೆತ್ತಲೂ ನೈತಿಕತೆ ಇಲ್ಲದ ಕಳಂಕಿತ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮುಂದಿನ ಗ್ಯಾರಂಟಿ 'ಮನೆ ಮನೆಗೆ ಬಾರ್ ಭಾಗ್ಯವೇ ಎಂದು ಬಿಜೆಪಿ ಉಡುಪಿ ಜಿಲ್ಲಾಧ್ಯಕ್ಷ ಕಿಶೋರ್ ಕುಮಾರ್ ಕುಂದಾಪುರ ಪ್ರಶ್ನಿಸಿದ್ದಾರೆ.

ಯಾವುದೇ ಕಪ್ಪು ಚುಕ್ಕೆ ಇಲ್ಲದೇ ಜನಪರ ಆಡಳಿತದ ಮೂಲಕ ದೇಶವನ್ನು ವಿಶ್ವದ ಮುಂಚೂಣಿ ಸ್ಥಾನಕ್ಕೇರಿಸಲು ಶ್ರಮಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಅವರ ಹೆಸರೆತ್ತಲೂ ನೈತಿಕತೆ ಇಲ್ಲದ ಕಳಂಕಿತ ಮುಖ್ಯಮಂತ್ರಿ ಸಿದ್ದರಾಮಯ್ಯ ಹಗರಣಗಳ ಸರಮಾಲೆಯನ್ನೇ ಧರಿಸಿರುವ ಕಾಂಗ್ರೇಸ್ ಸರ್ಕಾರದ ವಿರುದ್ಧ ಕಿಶೋರ್ ಕುಮಾರ್ ಕುಂದಾಪುರ ವಾಗ್ದಾಳಿ ನಡೆಸಿದ್ದಾರೆ. ಕಾಂಗ್ರೇಸ್ ನೇತೃತ್ವದ ರಾಜ್ಯ ಸರಕಾರದ 700 ಕೋಟಿ ರೂಪಾಯಿ ಮೌಲ್ಯದ ಅಬಕಾರಿ ಹಗರಣದ ಮಧ್ಯೆಯೇ ಉಡುಪಿ ಜಿಲ್ಲೆಯ ಕಾರ್ಕಳ ತಾಲ್ಲೂಕಿನ ಕಾಂಗ್ರೇಸ್ ಮುಖಂಡ, ಬೋಳ ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ, ಬೋಳ ಸೊಸೈಟಿಯ ನಿರ್ದೇಶಕ ಹಾಗೂ ಕಾಂಗ್ರೇಸ್ ನಾಯಕ ಮುನಿಯಾಲು ಉದಯಕುಮಾರ್ ಶೆಟ್ಟಿ ಅವರ ಪರಮಾಪ್ತ ಎನಿಸಿಕೊಂಡಿರುವ ಬೋಳದ ಅವಿನಾಶ್ ಮಲ್ಲಿ ಮನೆಯಲ್ಲಿ ರೂ.70 ಲಕ್ಷಕ್ಕೂ ಅಧಿಕ ಮೌಲ್ಯದ 200ಕ್ಕೂ ಅಧಿಕ ವಿಸ್ಕಿ ಬಾಟಲಿಗಳ ಸಂಗ್ರಹ ಪತ್ತೆಯಾಗಿರುವುದು ಆತಂಕ ಮೂಡಿಸಿದೆ.

ಅಬಕಾರಿ ಉಪ ಆಯುಕ್ತೆ ಬಿಂದು ಅವರ ನೇತೃತ್ವದಲ್ಲಿ ಅವಿನಾಶ್ ಮಲ್ಲಿ ಮನೆಗೆ ದಾಳಿ ನಡೆಸಿರುವ ಅಧಿಕಾರಿಗಳು ದೊಡ್ಡ ಪ್ರಮಾಣದಲ್ಲಿ ಬ್ರಾಂಡೆಡ್ ಮದ್ಯದ ಬಾಟಲಿಗಳನ್ನು ವಶ ಪಡಿಸಿಕೊಂಡಿರುವ ಪ್ರಕರಣ ರಾಜ್ಯ ಕಾಂಗ್ರೇಸ್ ಸರಕಾರದ ಸಾಚಾತನದ ಮುಖವಾಡವನ್ನು ಕಳಚಿದೆ.

ಅಕ್ರಮ ಗಣಿಗಾರಿಕೆ: ಸಿಬಿಐ ನಿರಾಕರಿಸಿದ ಪ್ರಕರಣಗಳು ಎಸ್‌ಐಟಿ ತನಿಖೆಗೆ

• ಉದಯವಾಹಿನಿ, ಬೆಂಗಳೂರು

ಸಿಬಿಐ ತನಿಖೆಗೆ ವಹಿಸಿದ 09 ಅಕ್ರಮ ಗಣಿಗಾರಿಕೆ ಪ್ರಕರಣಗಳಲ್ಲಿ 06 ಪ್ರಕರಣಗಳಲ್ಲಿ ತನ್ನಿಂದ ತನಿಖೆ ಸಾಧ್ಯವಿಲ್ಲವೆಂದು ಸಿ.ಬಿ.ಐ ತಿಳಿಸಿರುವ 06 ಪ್ರಕರಣಗಳನ್ನು ಅಕ್ರಮ ಗಣಿಗಾರಿಕೆ ಕುರಿತು ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡಕ್ಕೆ ವಹಿಸಲು ರಾಜ್ಯ ಸರ್ಕಾರ ಗಂಭೀರ ಚಿಂತನೆ ನಡೆಸಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ ಪಾಟೀಲ ಇಂದಿಲ್ಲಿ ತಿಳಿಸಿದರು. ಸಚಿವ ಸಂಪುಟ ಸಭೆಯಲ್ಲಿ ಈ ಕುರಿ ತು ಚರ್ಚೆ ನಡೆದು ಗೋವಾದ ಮರ್ಮಗೋವಾ ಮತ್ತು ಪಣಜಿ, ತಮಿಳುನಾಡಿನ ಎನ್ನೋರ್. ಚೆನ್ನೈ, ಕರ್ನಾಟಕದ ನವ ಮಂಗಳೂರು ಮತ್ತು ಕಾರವಾರ ಬಂದರುಗಳಲ್ಲಿ ಹಾಗೂ ಆಂಧ್ರ ಪ್ರದೇಶದ ಕೃಷ್ಣಪಟ್ಟಣಂ, ಕಾಕಿನಾಡ



ಚರ್ಚಿಸಿ, ನಿರ್ಣಯ

ಮುಂದಿನ ಸಚಿವ ಸಂಪುಟ ಸಭೆಗೆ ಈ ಪ್ರಕರಣಗಳ ತನಿಖೆ ಕುರಿತ ವಿವರಗಳನ್ನು ಮಂಡಿಸಬೇಕೆಂದು ಮಾನ್ಯ ಸಿಎಂಗಳು, ಮುಖ್ಯ ಕಾರ್ಯದರ್ಶಿಯವರಿಗೆ ಸೂಚಿಸಿದರು. ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತು ಚರ್ಚಿಸಿ, ನಿರ್ಣಯಿಸಲಾಗುವುದು.

ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿದ ಅಕ್ರಮ ಗಣಿಗಾರಿಕೆ ಕಷ್ಟವುಂಟು ಮಾಡಿದ ಸಿ ವರ್ಗದ 10 ಗಣಿ ಗುತ್ತಿಗೆದಾರರ ಪ್ರಕರಣಗಳನ್ನು ಸಹ ಈಗಿನ ಎಸ್.ಐ.ಟಿ ತನಿಖೆಗೆ ವಹಿಸಲು ನಿರ್ಣಯಿಸಲಾಗಿದೆ ಎಂದು ಸಚಿವರು ವಿವರಿಸಿದರು.

ಮತ್ತು ವಿಶಾಖಪಟ್ಟಣಂ ಬಂದರುಗಳಲ್ಲಿ ಅಕ್ರಮ ಅದಿರು ಸಾಗಾಣಿಕೆ ಪ್ರಕರಣಗಳನ್ನು ಸಿ.ಬಿ.ಐ ವಾಪಸ್ಸು ಕಳುಹಿಸಿರುವ ಹಿನ್ನೆಲೆಯಲ್ಲಿ ಆ ಪ್ರಕರಣಗಳ ಬಗ್ಗೆ ವಿಶೇಷ ತನಿಖಾ ತಂಡದಿಂದ ತನಿಖೆ ಮಾಡಿಸಲು ನಿರ್ಣಯಿಸಲಾಗಿದೆ ಎಂದು ಸಚಿವರು ಸುದ್ದಿಗಾರರಿಗೆ ವಿವರಿಸಿದರು. ಅಕ್ರಮ ಗಣಿಗಾರಿಕೆ ಎಲ್ಲಾ ಪ್ರಕರಣಗಳನ್ನು ಸೂಕ್ತವಾದ ತನಿಖೆಗೆ ಒಳಪಡಿ ಸುವುದು ಅಗತ್ಯವಾಗಿದೆ.

ಬ್ರ್ಯಾಂಡ್ ಬೆಂಗಳೂರು ಹೆಸರಲ್ಲಿ ಕಾಂಗ್ರೇಸ್ ಸರ್ಕಾರ ಲೂಟಿ

• ಉದಯವಾಹಿನಿ, ಬೆಂಗಳೂರು

ಗುಂಡಿಬಿದ್ದ ರಸ್ತೆಗಳಿಗೆ ತೇಪೆ ಕೂಡ ಹಾಕಿಸದ ಬೆಂಗಳೂರು ಉಸ್ತುವಾರಿ ಸಚಿವ ಡಿಕೆ ಶಿವಕುಮಾರ್ ಬಿಟ್ಟಿ ಪ್ರಚಾರ ಪಡೆಯುತ್ತಿರುವುದು ಬಿಟ್ಟರೆ, ಬೆಂಗಳೂರಿಗರಿಗೆ ಯಮಗುಂಡಿಗಳಿಂದ ಇನ್ನೂ ಮುಕ್ತಿ ಕೊಡಿಸಿಲ್ಲ ಎಂದು ಜೆಡಿಎಸ್ ಆರೋಪ ಮಾಡಿದೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಬರೆದುಕೊಂಡಿರುವ ಜೆಡಿಎಸ್, ರಾಜಧಾನಿಯ ಯಾವುದೇ ರಸ್ತೆಗಳಿಗೂ ಹೋದರೂ ನೂರಾರು ಗುಂಡಿಗಳು ಅನಾಹುತಕ್ಕೆ ಆಹ್ವಾನಿಸುತ್ತಿದೆ. ವಾಹನ ಸವಾರರು ಜೀವ ಕೈಯಲ್ಲಿಡಿದು ಓಡಾಡಬೇಕಾದ ನರಕವನ್ನು ಸಿದ್ದರಾಮಯ್ಯ ಸರ್ಕಾರ ತಂದಿಟ್ಟಿದೆ. ಬ್ರ್ಯಾಂಡ್ ಬೆಂಗಳೂರು ಹೆಸರಲ್ಲಿ ಮೇಯುತ್ತಿರುವ ಕಲೆಕ್ಷನ್ ಗಿರಾಕಿ ಪರ್ಸಂಟೇಜ್ ಲೆಕ್ಕದಲ್ಲಿ ಲೂಟಿಹೊಡೆಯುತ್ತಿದ್ದು, 659 ಕೋಟಿ ಹಣದಲ್ಲಿ ಜೇಬಿಗಿಳಿಸಿಕೊಂಡಿದ್ದು ಎಷ್ಟು? ತೇಪೆ ಹಚ್ಚಲು ಕಾಂಗ್ರೇಸ್ ಸರ್ಕಾರಕ್ಕೆ ಯೋಗ್ಯತೆ ಇಲ್ಲವೇ..? ಬೆಂಗಳೂರಿನ ರಸ್ತೆಗಳ ಡಾಂಬರೀಕರಣ ಮಾಡುವುದು ಇರಲಿ, ತೇಪೆ ಹಾಕಲು ಬೊಕ್ಕಸದಲ್ಲಿ ಹಣ ವಿಲ್ಲವೇ? ಕಮಿಷನ್ ಕಾಂಗ್ರೇಸ್ ಸರ್ಕಾರಕ್ಕೆ ಬ್ರ್ಯಾಂಡ್ ಬೆಂಗಳೂರು ಎಂಬುದು 2028ರ ಚುನಾವಣೆಗೆ ಹಣ ದೋಚುವ ಯೋಜನೆಯಾಗಿಬಿಟ್ಟಿದೆ.

ಇಡಿ ವಿಚಾರಣೆ ವೇಳೆ ಮತ್ತಿಬ್ಬರು ಸಚಿವರ ಹೆಸರು ಬಹಿರಂಗ

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣ ವಿಚಾರವಾಗಿ ಇಡಿ ತನಿಖೆ ಚುರುಕುಗೊಂಡಿದ್ದು, ಅಧಿಕಾರಗಳ ವಿಚಾರಣೆಯ ವೇಳೆ ಮತ್ತಿಬ್ಬರು ಸಚಿವರ ಹೆಸರುಗಳು ಬಯಲಿಗೆ ಬಂದಿವೆ ಎನ್ನಲಾಗುತ್ತಿದೆ. ಮುಡಾದಲ್ಲಿ ಸಾವಿರಾರು ಕೋಟಿ ರೂ. ಅಕ್ರಮ ನಡೆದಿದೆ ಎಂಬ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಇಡಿ ತೀವ್ರ ವಿಚಾರಣೆ ನಡೆಸುತ್ತಿದೆ.

ಸಿಎಂ ಸಿದ್ದರಾಮಯ್ಯ ಆಪ್ತರನ್ನು ಇಡಿ ತನಿಖೆಗೊಳಪಡಿಸಿದೆ. ಸಿಎಂ ಸಿದ್ದರಾಮಯ್ಯಗೂ ಸದ್ಯದಲ್ಲೇ ವಿಚಾರಣೆಗೆ ಸಮನ್ಸ್ ನೀಡುವ ಸಾಧ್ಯತೆಯಿದೆ ಎನ್ನಲಾಗುತ್ತಿದೆ. ಈ ನಡುವೆ ಇಡಿ ವಿಚಾರಣೆಯಲ್ಲಿ ಅಧಿಕಾರಿಗಳು ಮತ್ತಿಬ್ಬರು ಸಚಿವರ ಹೆಸರು ಬಾಯ್ಬಿಟ್ಟಿದ್ದಾರೆ ಎಂದು ಖಾಸಗಿ ವಾಹಿನಿಯೊಂದು ವರದಿ ಮಾಡಿದೆ. 50:50 ಅನುಪಾತದ ಸೈಟು ಹಂಚಿಕೆ ವಿಚಾರದಲ್ಲಿ ಮತ್ತಿಬ್ಬರು ಸಚಿವರು ಪ್ರಭಾವ ಬೀರಿದ್ದಾರೆ ಎಂದು ಅಧಿಕಾರಿಗಳೇ ಬಾಯ್ಬಿಟ್ಟಿದ್ದಾರಂತೆ.

ಇದೀಗ ಇಡಿ ಅಧಿಕಾರಿಗಳು ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದು, ಮುಡಾ ಅಧಿಕಾರಿಗಳು ಹೇಳಿದಂತೆ ಪ್ರಭಾವೀ ಸಚಿವರಿಬ್ಬರ ಪಾತ್ರದ ಬಗ್ಗೆ ದಾಖಲೆಗಳು ಸಿಕ್ಕರೆ ಅವರನ್ನೂ ವಿಚಾರಣೆಗೆ ಕರೆಸಿಕೊಳ್ಳುವ ಸಾಧ್ಯತೆಯಿದೆ. ಆದರೆ ಈ ಇಬ್ಬರು ಸಚಿವರು ಯಾರು ಎಂಬುದು ಬಹಿರಂಗವಾಗಿಲ್ಲ.

ಬಿಪಿಎಲ್ ಕಾರ್ಡ್ ರದ್ದಾಗಿದೆಯೇ ಎಂದು ಚೆಕ್ ಮಾಡುವುದು ಹೇಗೆ

• ಉದಯವಾಹಿನಿ, ಬೆಂಗಳೂರು

ಇತ್ತೀಚೆಗೆ ರಾಜ್ಯ ಸರ್ಕಾರ ಅನರ್ಹ ಬಿಪಿಎಲ್ ಕಾರ್ಡ್ ಗಳನ್ನು ರದ್ದುಗೊಳಿಸುವ ಪ್ರಕ್ರಿಯೆ ನಡೆಸುತ್ತಿದೆ. ಕೆಲವು ಮಾನದಂಡಗಳನ್ನು ಅನುಸರಿಸದೇ ಇರುವ ಬಿಪಿಎಲ್ ಕಾರ್ಡ್ ಗಳನ್ನು ರದ್ದುಗೊಳಿಸಲಾಗುತ್ತಿದೆ. ಒಂದು ವೇಳೆ ನಿಮ್ಮದು ಬಿಪಿಎಲ್ ಕಾರ್ಡ್ ಆಗಿದ್ದು ರದ್ದಾಗಿದೆಯೇ ಎಂದು ಆನ್ ಲೈನ್ ನಲ್ಲಿ ಚೆಕ್ ಮಾಡುವುದು ಹೇಗೆ ಇಲ್ಲಿ ನೋಡಿ. ರೇಷನ್ ಕಾರ್ಡ್ ಗೆ ಸಂಬಂಧಪಟ್ಟ ಯಾವುದೇ ಕೆಲಸಗಳಿಗಾಗಿ ಕರ್ನಾಟಕ ಆಹಾರ ಇಲಾಖೆಯ ಅಧಿಕೃತ ವೆಬ್ ಸೈಟ್ ಕ್ಲಿಕ್ ಮಾಡಬೇಕು. https://ahara.kar.nic.in/ ಎಂಬ ವೆಬ್ ಸೈಟ್ ನಲ್ಲಿ ನಿಮ್ಮ ರೇಷನ್ ಕಾರ್ಡ್ ಸ್ಥಿತಿಗತಿಯನ್ನು ಸುಲಭವಾಗಿ ತಿಳಿದುಕೊಳ್ಳಬಹುದು. ಅದರ ಸಂಪೂರ್ಣ ಪ್ರಕ್ರಿಯೆಯ ವಿವರಗಳು ಇಲ್ಲಿದೆ ನೋಡಿ.

1: ಆಹಾರ ಇಲಾಖೆಯ ಅಧಿಕೃತ ವೆಬ್ ಸೈಟ್ ಕ್ಲಿಕ್ ಮಾಡಿ
2: ಈಗ ಮೇಲಿನ ಸಾಲಿನಲ್ಲಿರುವ ಇ-ಸೇವೆಗಳು ಆಯ್ಕೆಯನ್ನು ಒತ್ತಿ
3: ಈಗ ಎಡಬದಿಯಲ್ಲಿರುವ ಇ-ಸ್ಥಿತಿ ಎನ್ನುವ ಬಟನ್ ಒತ್ತಿ
**4: ಈಗ ನಿಮ್ಮ ಜಿಲ್ಲೆ ಯಾವ ವಿಭ

ಶಾಸಕರ ಖರೀದಿ ವಿಷಯಕ್ಕೂ ಒಂದು ಎಸ್‌ಐಟಿ ರಚನೆ ಮಾಡಲಿ

ಸಿದ್ದರಾಮಯ್ಯ ಸರ್ಕಾರಕ್ಕೆ ಕಂಟಕ; ಕಾಂಗ್ರೇಸ್ ಶಾಸಕರಿಗೆ ತಲಾ 50 ಕೋಟಿ ಆಫರ್: ಹೆಚ್ ಡಿ ಕುಮಾರಸ್ವಾಮಿ ಏನಂದ್ರು?

• ಉದಯವಾಹಿನಿ, ಮೈಸೂರು

ಉದಯವಾಹಿನಿ ಚಿತ್ರ

50 ಶಾಸಕರಿಗೆ ತಲಾ 50 ಕೋಟಿ

ತಮ್ಮ ಸರಕಾರ ಬೀಳಿಸಲು ಕಾಂಗ್ರೇಸ್ ಶಾಸಕರಿಗೆ ತಲಾ 50 ಕೋಟಿ ಆಫರ್ ಮಾಡಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಅವರ ಆರೋಪದ ಬಗ್ಗೆ ಖಾರವಾಗಿ ಪ್ರತಿಕ್ರಿಯಿಸಿದ ಕೇಂದ್ರ ಸಚಿವ ಕುಮಾರಸ್ವಾಮಿ ಅವರು, ಸಿಎಂ ಹೇಳಿಕೆ ಹಾಸ್ಯಾಸ್ಪದವಾಗಿದೆ. 50 ಶಾಸಕರಿಗೆ ತಲಾ 50 ಕೋಟಿ ಎಂದು ಅಷ್ಟು ನಿಖರವಾಗಿ ಹೇಳುತ್ತಿದ್ದಾರೆ. ತಾಯಿ ಚಾಮುಂಡೇಶ್ವರಿ ದರ್ಶನ ಪಡೆದ ನಂತರ ಹಾಗೂ ಬಿರ್ಸಾ ಮುಂಡಾ ಜಯಂತಿ, ಜನಜಾತಿಯ ದಿವಸ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಬಳಿಕ ಅವರು ಎರಡೂ ಕಡೆ ಮೈಸೂರಿನಲ್ಲಿ ಮಾಧ್ಯಮಗಳ ಜತೆ ಮಾತನಾಡಿ, ಕಾಂಗ್ರೇಸ್ ಸರಕಾರ ಪ್ರತಿಯೊಂದಕ್ಕೂ ಎಸ್‌ಐಟಿ ರಚನೆ ಮಾಡಿ ತನಿಖೆ ಮಾಡಿಸುತ್ತಿದ್ದಾರೆ. ಶಾಸಕರ ಖರೀದಿ ವಿಷಯಕ್ಕೂ ಒಂದು ಎಸ್ ಐಟಿ ರಚನೆ ಮಾಡಲಿ ಎಂದು ಅವರು ಲೇವಡಿ ಮಾಡಿದರು.

ಚನ್ನಪಟ್ಟಣದಲ್ಲಿ ಎನ್ ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರು ಜಯಶಾಲಿ ಆಗುತ್ತಾರೆ. ಕಾಂಗ್ರೇಸ್ ಪಕ್ಷದಲ್ಲಿ ಏನೇನು ಆಗಿದೆ ಎಂದು ಸ್ವತಃ ಯೋ ಗೇಶ್ವರ್ ಅವರೇ ಹೇಳಿದ್ದಾರೆ. ಅದರ ಬಗ್ಗೆ ನಾನೇನು ವಿಮರ್ಶೆ ಮಾಡುವುದಿಲ್ಲ. ಜಮೀರ್ ಹೇಳಿಕೆಯಿಂದ ಏನಾಗಿದೆ ಎನ್ನುವುದು ಫಲಿತಾಂಶ ಬರುವ ದಿನ ಗೊತ್ತಾಗುತ್ತದೆ. ನಿಖಿಲ್ ಕುಮಾರಸ್ವಾಮಿ ಅವರನ್ನು ಗೆಲ್ಲಿಸುವ ಮೂಲಕ ಸಿದ್ದರಾಮಯ್ಯ ಅವರ ಸೊಕ್ಕು ಮುರಿಯಬೇಕು ಎಂದು ದೇವೇಗೌಡರು ಹೇಳಿ ರುವುದು ಮಾನಹಾನಿ ಹೇಳಿಕೆಯೇ ಅವರ ವಿರುದ್ಧವೂ ಲಘುವಾಗಿ ಹೇಳಿಕೆ ಕೊಡುತ್ತಿದ್ದಾರೆ ಎಂದು ಅವರು ಕಿಡಿಕಾರಿದರು.

> ಕರಿಯ, ಕುಳ್ಳ ಎಂದು ಇನ್ನೊಬ್ಬರಿಂದ ಮಾತನಾಡಿಸಿಕೊಳ್ಳುವ ಸಂಸ್ಕೃತಿಯಿಂದ ನಾನು ಬಂದಿಲ್ಲ. ಆ ವ್ಯಕ್ತಿ ಯನ್ನು ನಾನೆಂದೂ ಕುಳ್ಳ ಎಂದು ಕರೆದಿಲ್ಲ. ಹಣದ ಮದದಿಂದ ಖರೀದಿ ಮಾಡುವ ಹೇಳಿಕೆ ನೀಡಿದ್ದಾರೆ. ಆತನ ಜತೆ ಸ್ನೇಹ ಇದ್ದದ್ದು ಕೇವಲ ರಾಜಕೀಯವಾಗಿ ಅಷ್ಟೆ
> -ಎಚ್.ಡಿ. ಕುಮಾರಸ್ವಾಮಿ
> ಕೇಂದ್ರ ಸಚಿವ

ಪ್ರತಿ ವಿಷಯಕ್ಕೂ ಪ್ರತಿಪಕ್ಷ ನಾಯಕರ ಕಾರ್ಯಕರ್ತರ ವಿರುದ್ಧ ವಿನಾಕಾರಣ ಕೇಸುಗಳನ್ನು ಹಾಕಲಾಗುತ್ತಿದೆ. ರಾಜ್ಯಪಾಲರ ಕಚೇರಿಯನ್ನೇ ಶೋಧ ಮಾಡುತ್ತೇನೆ ಎಂದು ಹೊರಟಿದ್ದ ಪೊಲೀಸ್ ಅಧಿಕಾರಿಯನ್ನು ಪ್ರಶ್ನಿಸಿದ್ದಕ್ಕೆ ನನ್ನ ಮೇಲೆ ಎಫ್ ಐಆರ್ ದಾಖಲು ಮಾಡಲಾಗಿದೆ. ಅದರ ಬಗ್ಗೆ ಹೇಳಿಕೆ ನೀಡಿದ ನಿಖಿಲ್ ಕುಮಾರಸ್ವಾಮಿ ಮೇಲೆ ಹಾಗೂ ಮುಖ್ಯ ಕಾರ್ಯದರ್ಶಿಗೆ ದೂರು ನೀಡಿದ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು ವಿರುದ್ಧವೂ ಎಫ್‌ಐಆರ್ ಹಾಕಲಾಗಿದೆ. ನಮ್ಮ ಕಾರ್ಯಕರ್ತರು ಜಾಲತಾಣಗಳಲ್ಲಿ ಯಾರೋ ಹೇಳಿದ್ದನ್ನು ಫಾರ್ವರ್ಡ್ ಮಾಡಿದರು ಎಂದು ಕೇಸ್ ಹಾಕುತ್ತಿದ್ದಾರೆ ಎಂದು ಕೇಂದ್ರ ಸಚಿವರು ಹೇಳಿದರು. ಸಂವಿಧಾನದ ಮೇಲೆ ಪ್ರಮಾಣ ವಚನ ಸ್ವೀಕರಿಸಿರುವ ಸಚಿವರೊಬ್ಬರು ನನ್ನ ಬಗ್ಗೆ ಅತ್ಯಂತ ಕೀಳಾಗಿ ವರ್ಣಭೇದ ಮಾಡಿ, ಜನಾಂಗೀಯ ನಿಂದನೆ ಮಾಡಿ, ದೇವೆಗೌಡರ ಖಾನ್ ದಾನ್ ಖರೀದಿ ಮಾಡುತ್ತೇನೆ ಎಂದರೆ ಸರಕಾರ ಸುಮ್ಮನಿದೆ. ರಾಜ್ಯದಲ್ಲಿ ಕಾಂಗ್ರೇಸ್ ಪಕ್ಷದವರಿಗೆ ಒಂದು ಕಾನೂನು, ಜೆಡಿಎಸ್ ನವರಿಗೆ ಇನ್ನೊಂದು ಕಾನೂನು ಜಾರಿಯಲ್ಲಿ ಇದೆಯೇ? ಎಂದು ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಅವರು ಕಿಡಿಕಾರಿದರು.

ಇದು ನಾಗರಿಕ ಸರ್ಕಾರನಾ? : ಕೇಂದ್ರ ಸಚಿವ

ಕರಿಯಾ, ಕುಳ್ಳ ಎಂದು ಮಾತಾಡಿಸಿ ಕೊಳ್ಳುವ ಸಂಸ್ಕೃತಿಯಿಂದ ಬಂದವ ನಾನಲ್ಲ. ಅವರ ಮಾತುಗಳು ಅವರ ಸಂಸ್ಕೃತಿ ತೋರಿಸುತ್ತದೆ. ಸಿಎಂ ಹಾಗೂ ಡಿಸಿಎಂ ಈ ಮಾತುಗಳನ್ನ ಸಮರ್ಥಿಸಿಕೊಂಡಿದ್ದಾರೆ. ಇದು ನಾಗರಿಕ ಸರ್ಕಾರನಾ ಇಂಥ ಮಾತು ಹೇಳಿದವರು ಮೇಲೆ ಎಷ್ಟು ಕೇಸ್ ಹಾಕಿ ಜೈಲಿಗೆ ಹಾಕಿಲ್ಲ ಈ ಸರ್ಕಾರ? ಈಗ ಯಾಕೆ ಸುಮ್ಮನೆ ಇದೆ ಸಿಎಂಗೆ ದೇವೇಗೌಡರು ಗರ್ವಭಂಗ ಮಾಡ್ತೀನಿ, ಸೊಕ್ಕು ಮುರಿತೀನಿ ಅನ್ನೋದು ಮಾನನಷ್ಟ ಹೇಳಿಕೆನಾ? ನಾನು ಯಾವತ್ತೂ ಅವರನ್ನು ಕುಳ್ಳ ಎಂದು ಕರೆದಿಲ್ಲ. ನಮ್ಮ ಸ್ನೇಹ ಇದ್ದದ್ದು ರಾಜಕೀಯವಾಗಿ ಅಷ್ಟೆ, ದುಡ್ಡಿನ ಮದದಿಂದ ಈ ರೀತಿ ಮಾತಾಡುತ್ತಿದ್ದಾರೆ ಎಂದು ಟಾಂಗ್ ಕೊಟ್ಟರು.

ರೈತರ ಜಮೀನಿನಲ್ಲಿ ವಕ್ಫ್ ಮೊಹರು: ಉಳುಮೆ ಮಾಡಲು ಹೊರಟ ರೈತರಿಗೆ ಲಾಠಿ ಏಟು

• ಉದಯವಾಹಿನಿ, ಚಿಕ್ಕಬಳ್ಳಾಪುರ

ಉದಯವಾಹಿನಿ ಚಿತ್ರ

ಯಾವುದೇ ಕಾರಣಕ್ಕೂ ರೈತರ ಜಮೀನನ್ನು ವಕ್ಫ್ ಹೋಗಲು ಬಿಡಲ್ಲ ಎಂದು ಖುದ್ದು ಸಿಎಂ ಸಿದ್ದರಾಮಯ್ಯನವರೇ ಒಂದು ಕಡೆ ಹೇಳುತ್ತಿದ್ದರೆ ಇತ್ತ ಸದ್ದಿಲ್ಲದೇ ವಕ್ಫ್ ಹೆಸರಿನಲ್ಲಿ ರೈತರ ಮೇಲೆ ದಬ್ಬಾಳಿಕೆ ನಡೆಯುತ್ತಿದೆ. ಚಿಂತಾಮಣಿ ತಾಲ್ಲೂಕಿನ ತಿಮ್ಮಸಂದ್ರ ತಾಲ್ಲೂಕಿನ ರೈತರ ಜಮೀನಿನ ಪಹಣಿಯಲ್ಲಿ ವಕ್ಫ್ ಎಂದು ನಮೂದಾಗಿದ್ದು, ಉಳುಮೆ ಮಾಡಲು ಹೋದ ರೈತರಿಗೆ ಪೊಲೀಸರು ಲಾಠಿ ರುಚಿ ತೋರಿಸಿದ್ದಾರೆ.

ತಮ್ಮ ಜಮೀನಿನಲ್ಲಿ ವಕ್ಫ್ ಹೆಸರು ನಮೂದಾಗಿರುವುದರ ವಿರುದ್ಧ ರೈತರು ಆಕ್ರೋಶ ವ್ಯಕ್ತಪಡಿಸಿದ್ದು ಪ್ರತಿಭಟನೆ ನಡೆಸಿದ್ದಾರೆ. ಉಳುಮೆ ಮಾಡಲು ಮುಂದಾದ ರೈತರ ಮೇಲೆ ಲಾಠಿ ಪ್ರಹಾರ ನಡೆಸಿದ ಪೊಲೀಸರು ಅವರ ಟ್ರ್ಯಾಕ್ಟರ್ ಗಳನ್ನು ವಶಪಡಿಸಿಕೊಂಡು ಕೇಸ್ ದಾಖಲಿಸಿದ್ದಾರೆ.

ತಿಮ್ಮಸಂದ್ರ ಗ್ರಾಮದ 10 ಕ್ಕೂ ಹೆಚ್ಚು ರೈತರ ಜಮೀನಿನ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿದೆ. ಇದರಿಂದ ಆಕ್ರೋಶಗೊಂಡ ರೈತರು ಪೊಲೀಸರು, ಅಧಿಕಾರಿಗಳು ಮತ್ತು ಜಮೀಯಾ ಮಸೀದಿ ಸದಸ್ಯರ ಜೊತೆ ವಾಗ್ವಾದ ನಡೆಸಿದ್ದಾರೆ.

ಜಾಮಿಯಾ ಮಸೀದಿಯ ಸದಸ್ಯರು ರೈತರ ವಿರುದ್ಧ ದೂರು ನೀಡಿದ್ದಾರೆ. ಈ ಸಂಬಂಧ ರೈತರ ಮೇಲೆ ಪೊಲೀಸರು ಭಾರತೀಯ ದಂಡ ಸಂಹಿತೆ ಕಾನೂನು ಸೆಕ್ಷನ್ 324(4), 329(3) ರ ಅಡಿಯಲ್ಲಿ ಕೇಸ್ ದಾಖಲಿಸಿದ್ದಾರೆ. ವಿವಾದಿತ ಸ್ಥಳದಲ್ಲಿ ಉಳುಮೆ ಮಾಡಲು ಹೊರಟಿದ್ದಕ್ಕೆ ಕೇಸ್ ದಾಖಲಾಗಿದೆ.

ಭದ್ರತೆಗೆ ಕೆಎಸ್‌ಆರ್‌ಟಿಸಿ ಚಾಲಕರ ಆಗ್ರಹ

ತುಮಕೂರು: ವೇತನ, ಭತ್ಯೆ ಹೆಚ್ಚಳ, ಭದ್ರತೆ ಸೇರಿ ಇತರೆ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕೆಎಸ್‌ಆರ್‌ಟಿಸಿ ಹೊರಗುತ್ತಿಗೆ ಚಾಲಕರು ನಗರದ ಅಂತರಸನಹಳ್ಳಿಯ ಡಿಪೊ ಬಳಿ ಶುಕ್ರವಾರ ಪ್ರತಿಭಟನೆ ನಡೆಸಿದರು. 'ಚಾಲಕರಾಗಿ ಹೊರಗುತ್ತಿಗೆಯಡಿ ಕೆಲಸ ಮಾಡುತ್ತಿರುವವರಿಗೆ ಯಾವುದೇ ಸೌಲಭ್ಯ ಕಲ್ಪಿಸಿಲ್ಲ. ಒಂದು ದಿನ ರಜೆ ಹಾಕಿದರೆ ವೇತನ ಕಡಿತದ ಜತೆಗೆ 250 ದಂಡ ವಿಧಿಸಲಾಗುತ್ತಿದೆ. ಅಪಘಾತವಾದರೆ ಗುತ್ತಿಗೆ ಏಜೆನ್ಸಿ, ಸಂಸ್ಥೆ ಯಾವುದೇ ಜವಾಬ್ದಾರಿ ತೆಗೆದುಕೊಳ್ಳುವುದಿಲ್ಲ. ಚಾಲಕರ ಮೇಲೆ ಹೊಣೆ ಹೊರಿಸಲಾಗುತ್ತಿದೆ. ಸಂಬಳದಲ್ಲಿ ಕಡಿತ ಮಾಡಲಾಗುತ್ತದೆ' ಎಂದು ಆರೋಪಿಸಿದರು.

ನಮ್ಮನ್ನು ಜೀತ ಪದ್ಧತಿಗೆ ತಳ್ಳಿದ್ದಾರೆ. ಕೆಎಸ್‌ಆರ್‌ಟಿಸಿ ಅಧಿಕಾರಿಗಳನ್ನು ಕೇಳಿದರೆ ನಮಗೆ ಯಾವುದೇ ಸಂಬಂಧವಿಲ್ಲ ಎನ್ನುತ್ತಾರೆ. ಹೊರಗುತ್ತಿಗೆಯಡಿ ಬಂದವರಿಗೆ ಕನಿಷ್ಠ ಸೌಕರ್ಯ ನೀಡುತ್ತಿಲ್ಲ. ಹೆಸರಿಗೆ ಮಾತ್ರ ಕೆಎಸ್‌ಆರ್‌ಟಿಸಿ ವಾಹನ, ಜೀವದ ಮೇಲೆ ಭಯ ಬಿಟ್ಟು ಕೆಲಸ ಮಾಡಬೇಕು. ದಿನಕ್ಕೆ 13 ಗಂಟೆ ಕೆಲಸ ಮಾಡಿದರೂ ಕನಿಷ್ಠ ವೇತನ ನೀಡುತ್ತಿಲ್ಲ' ಎಂದು ಚಾಲಕ ಅಭಿಷೇಕ್ ಅಸಮಾಧಾನ ವ್ಯಕ್ತಪಡಿಸಿದರು.

ಪುರಸಭೆ ನಡೆ ಸಾರ್ವಜನಿಕರ ಕಡೆ ಕಾರ್ಯಕ್ರಮಕ್ಕೆ ಚಾಲನೆ

• ಉದಯವಾಹಿನಿ, ಮಳವಳ್ಳಿ

ಉದಯವಾಹಿನಿ ಚಿತ್ರ

ಸಾರ್ವಜನಿಕರು ತಮ್ಮ ಕೆಲಸ ಕಾರ್ಯಗಳಿಗೆ ಪುರಸಭೆಗೆ ಅಲೆದಾಟವನ್ನು ತಪ್ಪಿಸುವ ಉದ್ದೇಶದಿಂದ ಆರಂಭಿಸಿರುವ 'ಪುರಸಭೆ ನಡೆ ಸಾರ್ವಜನಿಕರ ಕಡೆಗೆ' ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು' ಎಂದು ಪುರಸಭೆ ಅಧ್ಯಕ್ಷ ಪುಟ್ಟಸ್ವಾಮಿ ಕರೆ ನೀಡಿದರು.

ಪಟ್ಟಣದ 18ನೇ ವಾರ್ಡ್‌ನ ರಾಮಮಂದಿರದಲ್ಲಿ ಪೂಜೆ ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ರತಿ ವಾರ್ಡ್‌ನಲ್ಲೂ ಮೂರು ದಿನ ಕಾರ್ಯಕ್ರಮ ನಡೆಯಲಿದ್ದು, ಜನರು ಮನೆ ಬಾಗಿಲಲ್ಲೇ ತಮ್ಮ ಕುಂದುಕೊರತೆಗಳನ್ನು ನಿವಾರಿಸಿಕೊಳ್ಳಬಹುದಾಗಿದೆ. ಸ್ಥಳದಲ್ಲಿಯೇ ಇ-ಸ್ವತ್ತು, ನಕಲು, ಜನನ- ಪ್ರಮಾಣ ಪತ್ರ ನೀಡುವಿಕೆ, ಆಸ್ತಿ ತೆರಿಗೆ, ನೀರಿನ ಶುಲ್ಕ, ಉದ್ದಿಮೆ ಪರವಾನಗಿ, ಜಾಹೀರಾತು ಶುಲ್ಕಗಳನ್ನು ಪಾವತಿಗೆ ಅವಕಾಶ ನೀಡಲಾಗಿದೆ' ಎಂದು ಹೇಳಿದರು.

ಸ್ಥಳದಲ್ಲಿಯೇ ನಿಯಮಾನುಸಾರ ಅಗತ್ಯ ದಾಖಲೆಗಳನ್ನು ಪಡೆದು ಅವಶ್ಯಕ ಪ್ರಮಾಣ ಪತ್ರಗಳನ್ನು ನೀಡಲು ಎಲ್ಲಾ ವಿಭಾಗದ ಅಧಿಕಾರಿಗಳ ಸಮೇತ ಜನರ ಬಳಿಗೆ ಹೋಗಲಾಗುತ್ತಿದೆ. ಬೆಳಿಗ್ಗೆ 10.30ರಿಂದ ಮಧ್ಯಾಹ್ನ 1.30ರವರೆಗೆ ವಾರ್ಡ್‌ಗಳಲ್ಲಿಯೇ ಅಧಿಕಾರಿಗಳು ಕೆಲಸ ನಿರ್ವಹಿಸುತ್ತಾರೆ. ಮಧ್ಯಾಹ್ನದ ನಂತರ ಪುರಸಭೆಯಲ್ಲಿ ಕೆಲಸ ಮುಂದುವರಿಸುತ್ತಾರೆ' ಎಂದು ಸ್ಪಷ್ಟಪಡಿಸಿದರು.

> ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವ ಉದ್ದೇಶದಿಂದ ವಿನೂತನವಾಗಿ ಕಾರ್ಯಕ್ರಮ ಆಯೋಜಿಸಲಾಗಿದೆ. ಸಮರ್ಪಕ ತೆರಿಗೆ ಸಂಗ್ರಹದೊಂದಿಗೆ ಪಟ್ಟಣದ ಅಭಿವೃದ್ಧಿಗೆ ಮುಂದಾಗುತ್ತಿದ್ದೇವೆ
> - ಎನ್.ಬಸವರಾಜು, ಉಪಾಧ್ಯಕ್ಷ

ಗುಣಮಟ್ಟದ ಉತ್ಪಾದನೆಗೆ ನಿರ್ವಹಣೆ ಮುಖ್ಯ

• ಉದಯವಾಹಿನಿ, ಗೋಣಿಕೊಪ್ಪಲು

ಉದಯವಾಹಿನಿ ಚಿತ್ರ

ಸುಸ್ಥಿರ ಕಾಫಿ ಉತ್ಪಾದನೆಗಾಗಿ ಅನುಸರಿಸಬೇಕಾದ ಕ್ರಮದ ಬಗ್ಗೆ ಗೋಣಿಕೊಪ್ಪಲು ಕಾಫಿ ಮಂಡಳಿ ಹಾಗೂ ಸಕ್ಡೆನ್ ಕಾಫಿ ಇಂಡಿಯಾ ಲಿಮಿಟೆಡ್ ಸಹಯೋಗದಲ್ಲಿ ನಿಟ್ಟೂರು ಗ್ರಾಮ ಪಂಚಾಯತ್ ಸಭಾಂಗಣದಲ್ಲಿ ಬೆಳೆಗಾರರಿಗೆ ತರಬೇತಿ ನೀಡಲಾಯಿತು. ಕಾಫಿ ಮಂಡಳಿ ವಿಸ್ತರಣಾ ವಿಭಾಗದ ಉಪ ನಿರ್ದೇಶಕಿ ಡಾ.ಕೆ. ಶ್ರೀದೇವಿ ಕಾರ್ಯಗಾರ ಉದ್ಘಾಟಿಸಿ ಮಾತನಾಡಿ, ಸುಸ್ಥಿರ ಕಾಫಿ ಉತ್ಪಾದನೆಗಾಗಿ ಉತ್ತಮ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು. ಇದರ ಜತೆಗೆ ತಂತ್ರಜ್ಞಾನವನ್ನು ಬಳಸಿಕೊಂಡು ಗುಣಮಟ್ಟದ ಕಾಫಿ ಉತ್ಪಾದನೆಗೆ ಮುಂದಾಗಬೇಕು ಎಂದು ತಿಳಿಸಿದರು.

ಕಾಫಿಯಲ್ಲಿ ಸಸ್ಯಮೂಲ ಸಂವರ್ಧನೆ ಮತ್ತು ಕಾಫಿ ಕಸಿ ಮಾಡುವ ಬಗ್ಗೆ ಡಾ. ನಾಗರಾಜ ಗೋಕಾವಿ ಅವರು ಬೆಳೆಗಾರರಿಗೆ ಮಾಹಿತಿ ನೀಡಿದರು. ಕಾಫಿ ಮಂಡಳಿಯ ಕಿರಿಯ ಸಂಪರ್ಕಾಧಿಕಾರಿ ಮುಖಾರೀಬ್ ಮಾತನಾಡಿ, ಕಾಫಿ ಗಿಡವನ್ನು ನೆಟ್ಟ ನಂತರದ ಗಿಡಗಳ ಆರೈಕೆ, ನೀರಾವರಿ ನಿರ್ವಹಣೆ, ಬೇಸಾಯದ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

> ಕಾಫಿ ಮಂಡಳಿಯ ವಿಜ್ಞಾನಿ ಡಾ. ಎಸ್.ಎ.ನದಾಫ್, ಬೆಳೆಗಳಿಗೆ ನೀಡುವ ಸಮಗ್ರ ಪೋಷಕಾಂಶ, ಅವುಗಳ ನಿರ್ವಹಣೆಗೆ ಬಗ್ಗೆ ಉತ್ತಮ ಮಾಹಿತಿ ಪಡೆದುಕೊಳ್ಳುವುದು ಅವಶ್ಯ ಎಂದು ಹೇಳಿದರು. ರಸಗೊಬ್ಬರಗಳನ್ನು ಕಾಫಿ ಗಿಡಗಳಿಗೆ ಮಣ್ಣಿನ ಮತ್ತು ಎಲೆಗಳ ಮೇಲೆ ಸಿಂಪಡಣೆ ಮಾಡುವ ಮೂಲಕ ಪೋಷಕಾಂಶಗಳನ್ನೂ ಪೂರೈಸಬಹುದೆಂದು ತಿಳಿಸಿದರು.

ಮತದಾನ ಮುಗಿದ ಬಳಿಕವೂ ಮಗನ ಗೆಲುವಿಗೆ ಎಚ್.ಡಿ. ಕುಮಾರಸ್ವಾಮಿ ಶ್ರಮ

• ಉದಯವಾಹಿನಿ, ಮೈಸೂರು

ಚನ್ನಪಟ್ಟಣ ಉಪಚುನಾವಣೆಯಲ್ಲಿ ಎನ್ ಡಿಎ ಅಭ್ಯರ್ಥಿ ಯಾಗಿ ಸ್ಪರ್ಧಿಸಿದ್ದ ಪುತ್ರ ನಿಖಿಲ್ ಕುಮಾರಸ್ವಾಮಿ ಗೆಲುವಿಗಾಗಿ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಮತದಾನ ಮುಗಿದ ಬಳಿಕವೂ ಶ್ರಮವಹಿಸುತ್ತಿದ್ದಾರೆ. ಮಗನ ನಾಮಪತ್ರ ಸಲ್ಲಿಕೆ ಮೊದಲು ಎಚ್ ಡಿಕೆ ದಂಪತಿ ಸಮೇತ ದೇವರ ಮೊರೆ ಹೋಗಿದ್ದರು.

ನಿಖಿಲ್ ಪರ ಮತಯಾಚನೆ ಆರಂಭಕ್ಕೂ ಮುನ್ನವೂ ಹಾಸನಾಂಬೆಯ ದರ್ಶನ ಪಡೆದು ಪೂಜೆ ಸಲ್ಲಿಸಿದ್ದರು. ಮೊನ್ನೆ ಮತದಾನದ ದಿನ ನಿಖಿಲ್ ಕುಮಾರಸ್ವಾಮಿ ಆಂಜನೇಯನ ದರ್ಶನ ಪಡೆದಿದ್ದರು. ಶುಕ್ರವಾರ ಎಚ್ ಡಿ ಕುಮಾರಸ್ವಾಮಿ ಪುತ್ರನ ಗೆಲುವಿಗಾಗಿ ಪ್ರಾರ್ಥನೆ ಸಲ್ಲಿಸಲು ನಾಡದೇವತೆ ಚಾಮುಂಡೇಶ್ವರಿ ಸನ್ನಿಧಾನಕ್ಕೆ ಬಂದಿದ್ದಾರೆ. ಇಂದು ಬೆಳಿಗ್ಗೆಯೇ ಚಾಮುಂಡಿ ಬೆಟ್ಟಕ್ಕೆ ಬಂದ ಕುಮಾರಸ್ವಾಮಿ ಮಗನ ಗೆಲುವಿಗಾಗಿ ಪ್ರಾರ್ಥಿಸಿ ನಾಡದೇವತೆಗೆ ವಿಶೇಷ ಪೂಜೆ ಸಲ್ಲಿಸಿ ತೆರಳಿದ್ದಾರೆ. ನವಂಬರ್ 23 ಕ್ಕೆ ಉಪಚುನಾವಣೆ ಫಲಿತಾಂಶ ಬರಲಿದೆ.

ಎರಡು ಬಾರಿ ಚುನಾವಣೆ ಸ್ಪರ್ಧಿಸಿ ಸೋತಿದ್ದ ನಿಖಿಲ್ ಈ ಬಾರಿಯಾದರೂ ಗೆಲ್ಲಬಹುದು ಎಂಬ ನಿರೀಕ್ಷೆಯಲ್ಲಿದ್ದಾರೆ. ಅಷ್ಟೇ ಅಲ್ಲದೆ, ಕುಮಾರಸ್ವಾಮಿಗೆ ಈ ಗೆಲುವು ಪ್ರತಿಷ್ಠೆಯ ಕಣವಾಗಿದೆ. ಹೀಗಾಗಿ ಮಗನ ಗೆಲುವಿಗಾಗಿ ಈಗ ದೇವರ ಮೊರೆ ಹೋಗುತ್ತಿದ್ದಾರೆ.

ಕೊಡಗಿನ ಎಲ್ಲಾ ರಸ್ತೆಗುಂಡಿಗಳನ್ನು ಮುಚ್ಚಿ

• ಉದಯವಾಹಿನಿ, ಮಡಿಕೇರಿ

ಬಿಜೆಪಿ ಕೊಡಗು ಜಿಲ್ಲೆಯಲ್ಲಿ ಮಾಡಿದ ಅಭಿವೃದ್ಧಿ ಕೆಲಸಗಳನ್ನು ಚರ್ಚಿಸಲು ಸದಾ ಸಿದ್ಧ' ಎಂದು ಹೇಳಿದ ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ರವಿ ಕಾಳಪ್ಪ, 'ಸಾಧ್ಯವಿದ್ದರೆ ಕೊಡಗು ಜಿಲ್ಲೆಯ ಎಲ್ಲಾ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚಿ ತೋರಿಸಿ' ಎಂದು ಕಾಂಗ್ರೇಸ್‌ಗೆ ಸವಾಲೆಸೆದರು.

ಹಿಂದಿನ ಸಂಸದ ಪ್ರತಾಪಸಿಂಹ, ಹಿಂದಿನ ಇಬ್ಬರು ಬಿಜೆಪಿ ಶಾಸಕರು ಮಾಡಿರುವ ಅಭಿವೃದ್ಧಿ ಕೆಲಸಗಳು ಒಂದೆರಡಲ್ಲ. ಅವುಗಳನ್ನು ಹೇಳುತ್ತಾ ಹೋದರೆ ಸಾಕಷ್ಟು ಸಮಯವೇ ಬೇಕಾಗುತ್ತದೆ. ಅದನ್ನೆಲ್ಲ ಚರ್ಚಿಸಲು ಕಾಂಗ್ರೇಸ್‌ನವರು ಬಹಿರಂಗ ಚರ್ಚೆಗೆ ಬರಲಿ ಎಂದು ಅವರು ಇಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಆಹ್ವಾನ ನೀಡಿದರು. ಈಚೆಗೆ ಕೊಡಗು ಜಿಲ್ಲಾ ಕಾಂಗ್ರೇಸ್ ನಡೆಸಿದ ಸುದ್ದಿಗೋಷ್ಠಿಯಲ್ಲಿ ಸತ್ಯಾಂಶವಿಲ್ಲ, ಕೇವಲ ಬಿಜೆಪಿಯನ್ನು ಟೀಕಿಸುವುದಕ್ಕೆಂದೇ ಅವರು ಸುದ್ದಿಗೋಷ್ಠಿ ಮಾಡಿದಂತಿದೆ' ಎಂದು ಟೀಕಿಸಿದ ಅವರು, 'ಯಾವಾಗಲೂ ಸತ್ಯವನ್ನು ಮಾತನಾಡಬೇಕು. ಕನಿಷ್ಠ ನಾವು ಆಡುವ ಮಾತುಗಳು ಸತ್ಯಕ್ಕೆ ಸ್ವಲ್ಪವಾದರೂ ಹತ್ತಿರದಲ್ಲಿರಬೇಕು' ಎಂದು ಪ್ರತಿಪಾದಿಸಿದರು. ವಕ್ಫ್ ವಿಚಾರವನ್ನು ಬಿಜೆಪಿ ರಾಜಕೀಯ ಅಸ್ತ್ರವಾಗಿ ಬಳಸುತ್ತಿದೆ ಎಂದು ಕಾಂಗ್ರೇಸ್ ಹೇಳಿದೆ. ಇದರಲ್ಲಿ ಎಳ್ಳಷ್ಟೂ ಸತ್ಯಾಂಶ ಇಲ್ಲ. ಬಿಜೆಪಿ ರೈತರ ಪರವಾಗಿ ಧ್ವನಿ ಎತ್ತಿದೆ ಎಂದು ಸಮರ್ಥಿಸಿಕೊಂಡರು.

ಬಿಜೆಪಿ ಹಿಂದೆಯೂ ವಕ್ಫ್ ಆಸ್ತಿ ತೆರವು ಸಂಬಂಧ ನೋಟಿಸ್ ನೀಡಿದೆ ಎಂದು ಅವರು ಹೇಳಿದ್ದಾರೆ. ಆದರೆ, ಬಿಜೆಪಿ ಆಗ ಕೊಟ್ಟಿದ್ದು ನಿಜವಾಗಿಯೂ ಒತ್ತುವರಿ ಮಾಡಿಕೊಂಡವರಿಗೆ ಹೊರತು ರೈತರಿಗಲ್ಲ ಎಂದು ತಿರುಗೇಟು ನೀಡಿದರು.

> ಈಗ ಕಾಂಗ್ರೇಸ್ ತ

ಅಂತರಾಳದಿಂದ... EDITORIAL

ಬುಲ್ಡೋಜರ್ ನ್ಯಾಯಕ್ಕೆ ಲಗಾಮು
ಕೋರ್ಟ್ ತೀರ್ಪಿನ ಪಾಲನೆ ಮುಖ್ಯ

ಉದಯವಾಹಿನಿ ಚಿತ್ರ

ದೇಶದ ಕೆಲವು ರಾಜ್ಯಗಳಲ್ಲಿ ವ್ಯಾಪಕವಾಗಿ ಬಳಕೆಗೆ ಬಂದಿದ್ದ 'ಬುಲ್ಡೋಜರ್ ನ್ಯಾಯ'ದ ವಿಚಾರವಾಗಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪು ಹಾಗೂ ಅದು ರೂಪಿಸಿರುವ ನಿಯಮಗಳು ಸಂವಿಧಾನದ ಅತ್ಯುತ್ತಮ ಆಶಯಗಳನ್ನು, ಕಾನೂನಿಗೆ ಅನುಗುಣವಾದ ಆಡಳಿತ ಎಂಬ ತತ್ವವನ್ನು ಎತ್ತಿಹಿಡಿಯುವಂತೆ ಇವೆ. ಸಂವಿಧಾನದ ಆಶಯಗಳನ್ನು, ಕಾನೂನಿಗೆ ಅನುಗುಣವಾದ ಆಡಳಿತ ಎಂಬ ತಾತ್ವಿಕತೆಯನ್ನು ಪಾಲಿಸುವಂತೆ ಸರ್ಕಾರಗಳಿಗೆ ತಿಳಿಹೇಳುವ ಕೆಲಸವನ್ನು ಸುಪ್ರೀಂ ಕೋರ್ಟ್ ತೀರ್ಪು ಮಾಡಿದೆ. ಕೆಲವು ಅಪರಾಧ ಪ್ರಕರಣಗಳಲ್ಲಿ ಆರೋಪಿ ಸ್ಥಾನದಲ್ಲಿ ಇರುವ ವ್ಯಕ್ತಿಗಳಿಗೆ ಸೇರಿದ ಕಟ್ಟಡಗಳು ಅತಿಕ್ರಮಣ ಮಾಡಿಕೊಂಡ ಜಾಗದಲ್ಲಿ ಇವೆ ಎಂಬ ನೆಪ ಒಡ್ಡಿ, ಆ ಕಟ್ಟಡಗಳನ್ನು ಧ್ವಂಸಗೊಳಿಸುವ ಕೆಲಸ ಮಾಡುತ್ತಿದ್ದ ಕೆಲವು ರಾಜ್ಯ ಸರ್ಕಾರಗಳನ್ನು ಸುಪ್ರೀಂ ಕೋರ್ಟ್‌ನ ಈ ತೀರ್ಪು 'ದೋಷಿ' ಎಂದು ಸ್ಪಷ್ಟವಾಗಿ ಕರೆದಂತಿದೆ. ಕಾನೂನಿನ ಪ್ರಕ್ರಿಯೆಗಳನ್ನು ಪಾಲಿಸದೆ ವ್ಯಕ್ತಿಯೊಬ್ಬನಿಗೆ ಶಿಕ್ಷೆ ವಿಧಿಸುವ ಅಧಿಕಾರವು ಪ್ರಭುತ್ವಕ್ಕೆ ಇಲ್ಲ ಎಂಬುದನ್ನು ಕೋರ್ಟ್ ಸ್ಪಷ್ಟಪಡಿಸಿದೆ. ಸಂವಿಧಾನದ 142ನೇ ವಿಧಿಯ ಅಡಿಯಲ್ಲಿ ತನಗೆ ಇರುವ ವಿಶೇಷವಾದ ಅಧಿಕಾರವನ್ನು ಬಳಸಿ ಮಾರ್ಗಸೂಚಿಗಳನ್ನು ರೂಪಿಸಿರುವ ಸುಪ್ರೀಂ ಕೋರ್ಟ್, ಈ ಮಾರ್ಗಸೂಚಿಗಳನ್ನು ಪಾಲನೆ ಮಾಡದ ಅಧಿಕಾರಿಗಳು ಕಾನೂನು ಕ್ರಮಕ್ಕೆ ಗುರಿಯಾಗಬೇಕಾಗುತ್ತದೆ ಎಂಬ ಎಚ್ಚರಿಕೆ ನೀಡಿದೆ. ಈ ಮೂಲಕ, ಈ ಮಾರ್ಗಸೂಚಿಗಳಿಗೆ ಬಲ ತಂದುಕೊಡುವ ಕೆಲಸವನ್ನೂ ಮಾಡಿದೆ. ಕಟ್ಟಡಗಳನ್ನು ಧ್ವಂಸಗೊಳಿಸುವ ಮೊದಲು ಸಂಬಂಧಪಟ್ಟ ವ್ಯಕ್ತಿಗೆ ನೋಟಿಸ್ ನೀಡಬೇಕು, ಮೇಲ್ಮನವಿ ಸಲ್ಲಿಸಲು ಅವಕಾಶ ಇರಬೇಕು ಎಂದು ಕೂಡ ಹೇಳಿದೆ. ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸುವ ಅಧಿಕಾರಿಗಳು, ಧ್ವಂಸಗೊಂಡ ಕಟ್ಟಡವನ್ನು ತಮ್ಮದೇ ಖರ್ಚಿನಲ್ಲಿ ಮರುನಿರ್ಮಿಸಿ ಕೊಡುವ ಹೊಣೆ ಹೊರಬೇಕಾಗುತ್ತದೆ ಎಂದು ಸುಪ್ರೀಂ ಕೋರ್ಟ್ ಎಚ್ಚರಿಕೆ ನೀಡಿದೆ.

> **ಅಲ್ಪಸಂಖ್ಯಾತರ ಕುರಿತಾಗಿನ ಪೂರ್ವಗ್ರಹಗಳು ಹಾಗೂ 'ದಿಢೀರ್ ನ್ಯಾಯ'ಕ್ಕಾಗಿನ ಆಗ್ರಹಗಳ ನಡುವೆ ಈ ಬಗೆಯ ಕ್ರಮಗಳು ವ್ಯಾಪಕವಾಗಿ ಬಳಕೆಯಾಗಿದ್ದವು. ಆದರೆ, ಈ ಕ್ರಮಗಳು ಪ್ರಜೆಗಳ ಜೀವಿಸುವ ಸ್ವಾತಂತ್ರ್ಯವನ್ನೇ ಕಿತ್ತುಕೊಂಡಿದ್ದವು.**

ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನ ಸಾರಾಂಶ ಬಹಳ ಸ್ಪಷ್ಟವಾಗಿದೆ. ಕಾನೂನಿಗೆ ಅನುಗುಣವಾದ ಆಡಳಿತಕ್ಕೆ ಆದ್ಯತೆ ನೀಡುವುದು, ಸಂವಿಧಾನದ ವಿವಿಧ ಅಂಗಗಳ ನಡುವೆ ಹಂಚಿಕೆಯಾಗಿರುವ ಅಧಿಕಾರಕ್ಕೆ ಗೌರವ ಕೊಡುವುದು, ಆರೋಪ ಸಾಬೀತಾಗುವವರೆಗೂ ಆರೋಪಿಯು ನಿರ್ದೋಷಿ ಎಂಬ ತತ್ವಕ್ಕೆ ಬೆಲೆ ಕೊಡುವುದು ಹಾಗೂ ಸಾಮೂಹಿಕ ಶಿಕ್ಷೆ ಕೊಡುವುದು ತಪ್ಪು ಎಂಬುದು ತೀರ್ಪಿನ ಸಾರಾಂಶ. ಸಹಜ ನ್ಯಾಯ ಪ್ರಕ್ರಿಯೆಯ ಮೂಲಭೂತ ಅಂಶಗಳಿವು. ಧಾರ್ಮಿಕ ಅಲ್ಪಸಂಖ್ಯಾತರ ವಿರುದ್ಧ, ಅದರಲ್ಲೂ ಮುಖ್ಯವಾಗಿ ಮುಸ್ಲಿಮರ ವಿರುದ್ಧ, ದುರ್ಬಲ ಸಮುದಾಯಗಳ ವಿರುದ್ಧ ರಾಜಕೀಯ ಅಸ್ತ್ರವಾಗಿ ಬುಲ್ಡೋಜರ್‌ಗಳನ್ನು ಬಳಕೆ ಮಾಡಲಾಗುತ್ತಿದೆ. ದುರುದ್ದೇಶದಿಂದ, 'ದಿಢೀರ್ ನ್ಯಾಯ'ದ ಸಾಧನವಾಗಿ ಬುಲ್ಡೋಜರ್‌ಗಳ ಬಳಕೆ ಆಗುತ್ತಿದೆ. 'ಅಧಿಕಾರಿಗಳು ಸಹಜ ನ್ಯಾಯದ ಮೂಲಭೂತ ತತ್ವಗಳನ್ನು ಪಾಲಿಸದೇ ಇದ್ದಾಗ, ಬುಲ್ಡೋಜರ್‌ಗಳು ಕಟ್ಟಡವನ್ನು ಧ್ವಂಸಗೊಳಿಸುವ ಭೀತಿಯ ದೃಶ್ಯಗಳು ಅರಾಜಕ ಸ್ಥಿತಿಯನ್ನು ನೆನಪಿಸುತ್ತವೆ' ಎಂದು ಕೋರ್ಟ್ ಬೇಸರದಿಂದ ಹೇಳಿದೆ. ಆದರೆ, ನ್ಯಾಯವನ್ನು ಈ ರೀತಿ ವಿಕೃತಗೊಳಿಸಿದ್ದಕ್ಕೆ ಸರ್ಕಾರಗಳು ತಮ್ಮ ಬೆನ್ನು ತಾವೇ ತಟ್ಟಿಕೊಳ್ಳುವ ಕೆಲಸವನ್ನು ಈ ಹಿಂದೆ ಮಾಡಿವೆ, ಕೋರ್ಟ್‌ಗಳು ಈ ಹಿಂದೆಯೂ ಈ ವಿಚಾರವಾಗಿ ಆಡಿದ ಕಟು ಮಾತುಗಳು ಹಾಗೂ ಟೀಕೆಗಳು ಸರ್ಕಾರಗಳಲ್ಲಿ ಅಳುಕು ಮೂಡಿಸಿದಂತೆ ಕಾಣುತ್ತಿಲ್ಲ. 'ಬುಲ್ಡೋಜರ್ ನ್ಯಾಯ'ದ ಮೂಲ ಇರುವುದು ಉತ್ತರಪ್ರದೇಶದಲ್ಲಿ. ಮಧ್ಯಪ್ರದೇಶ, ಉತ್ತರಾಖಂಡ, ಗುಜರಾತ್, ರಾಜಸ್ಥಾನ ರಾಜ್ಯ ಸರ್ಕಾರಗಳು ಇದೇ ಬಗೆಯ ಕ್ರಮಕ್ಕೆ ಮುಂದಾಗಿದ್ದವು. ಈಗ ಸುಪ್ರೀಂ ಕೋರ್ಟ್ ಬಹಳ ಉತ್ತಮವಾದ ತೀರ್ಪೊಂದನ್ನು ನೀಡಿದೆ.

ಆದರೆ ತೀರ್ಪು ಎಷ್ಟು ಉತ್ತಮವಾಗಿ ಅನುಷ್ಠಾನಕ್ಕೆ ಬರುತ್ತದೆ ಎಂಬುದು ಬಹಳ ಮುಖ್ಯವಾಗುತ್ತದೆ. ದ್ವೇಷ ಭಾಷಣ ಹಾಗೂ ಗೋರಕ್ಷಣೆಯ ಹೆಸರಿನಲ್ಲಿ ಕಾನೂನನ್ನು ಕೈಗೆತ್ತಿಕೊಳ್ಳುವ ಪ್ರವೃತ್ತಿಯನ್ನು ಹತ್ತಿಕ್ಕಲು ಈ ಹಿಂದೆ ಹೊರಡಿಸಿದ್ದ ಮಾರ್ಗಸೂಚಿಗಳನ್ನು ರಾಜ್ಯ ಸರ್ಕಾರಗಳು ಮತ್ತು ಕಾನೂನು ಜಾರಿ ಸಂಸ್ಥೆಗಳು ಸರಿಯಾಗಿ ಅನುಷ್ಠಾನಕ್ಕೆ ತರಲಿಲ್ಲ. ಕೋರ್ಟ್ ಕೆಲವು ವಾರಗಳ ಹಿಂದೆ ಪ್ರಾಥಮಿಕ ಸೂಚನೆಗಳನ್ನು ನೀಡಿದ್ದ ನಂತರದಲ್ಲಿಯೂ ಬುಲ್ಡೋಜರ್ ಬಳಸಿ ಕಟ್ಟಡ ಧ್ವಂಸಗೊಳಿಸಿದ ಪ್ರಕರಣಗಳು ವರದಿಯಾಗಿವೆ. ಈಗ ಸುಪ್ರೀಂ ಕೋರ್ಟ್ ನೀಡಿರುವ ಸೂಚನೆಗಳಲ್ಲಿ ಒಂದಿಷ್ಟು ಲೋಪಗಳನ್ನು ಹುಡುಕಿ, ಮಾರ್ಗಸೂಚಿಗಳ ಉದ್ದೇಶವನ್ನು ವಿಫಲಗೊಳಿಸುವ ಯತ್ನಗಳೂ ನಡೆಯಬಹುದು. ಕಾನೂನಿನ ಅಡಿಯಲ್ಲಿ ನೋಟಿಸ್ ನೀಡುವುದು, ಮೇಲ್ಮನವಿ ಸಲ್ಲಿಸುವುದು ಹಾಗೂ ಸೂಕ್ತ ಪರಿಹಾರ ಪಡೆದುಕೊಳ್ಳುವುದಕ್ಕೆ ಮಾರ್ಗಸೂಚಿಗಳು ಅವಕಾಶ ಕಲ್ಪಿಸುತ್ತವೆಯಾದರೂ ತೊಂದರೆಗೆ ಒಳಗಾದವರಿಗೆ ಅವುಗಳ ಪ್ರಯೋಜನ ಪೂರ್ಣಪ್ರಮಾಣದಲ್ಲಿ ದೊರೆಯಬೇಕು. ಈ ಹಿಂದೆ 'ಬುಲ್ಡೋಜರ್ ನ್ಯಾಯ'ದ ಕಾರಣದಿಂದಾಗಿ ತಮ್ಮ ಮನೆಗಳನ್ನು ಕಳೆದು ಕೊಂಡವರಿಗೆ ಈಗ ಪರಿಹಾರ ಸಿಗುತ್ತದೆಯೇ ಎಂಬ ಪ್ರಶ್ನೆಯೂ ಈ ಸಂದರ್ಭದಲ್ಲಿ ಮುಖ್ಯವಾಗುತ್ತದೆ.

• ಹಿಂದಿನ ಸಂಚಿಕೆಯಿಂದ **24ನೆಯ ಅಧ್ಯಾಯ**

ಕುಮಾರಸ್ವಾಮಿಯನ್ನು ಕಂಡು ಷಟ್ಪತ್ತಿಕೆಗಳೂ ಒಂದೇ ಸಾರಿ ಸ್ವನ್ಯಗಳನ್ನು ಕೊಡಲು ಆ ಆರುಮಂದಿಯ ಸ್ತನ್ಯಗಳನ್ನೂ ಆರು ಮುಖಗಳಿಂದ ಪಾನಮಾಡಿದಕಾರಣ ಷಣ್ಮುಖ ನೆನಿಸಿಕೊಂಡನು. ಅವನು ಅತ್ಯಂತ ಸುಕುಮಾರನಾಗಿ ಮಹಾಬಲವುಳ್ಳವನಾಗಿ ತನ್ನ ಪರಾಕ್ರಮದಿಂದ ಸಮಸ್ತ ರಾಕ್ಷಸರನ್ನೂ ಜಯಿಸಿದನು. ಆದರಿಂದ ದೇವತೆಗಳು ಷಣ್ಮುಖನನ್ನು ತಮ್ಮ ಸೇನಾಧಿಪತಿ ಯನ್ನಾಗಿ ಮಾಡಿಕೊಂಡರು. ಶ್ರೀರಾಮ, ಇದು ಗಂಗಾದೇವಿಯ ವೃತ್ತಾಂತ. ಷಣ್ಮುಖನ ಉತ್ಪತ್ತಿಯನ್ನು ಕುರಿತ ಈ ಕಥಾಪ್ರಸಂಗವು ಮಹಾಪವಿತ್ರವಾದದ್ದು. ಈ ಕಥಾಪ್ರಸಂಗವನ್ನು ಕೇಳುವ ಪುಣ್ಯಾತ್ಮನು ಆಯುಷ್ಮಂತನಾಗಿ ಮಕ್ಕಳು ಮೊಮ್ಮಕ್ಕಳ ಸಹಿತವಾಗಿ ಈ ಲೊಪದಲ್ಲಿ 62 ಶ್ರೀಚಾಮರಾಜೋಕ್ತಿ ವಿಲಾಸವೆಂಬ ಕನ್ನಡ ರಾಮಾಯಣ ಅನೇಕ ಭೋಗಗಳನ್ನು ಅನುಭವಿಸಿ ಕಡೆಯಲ್ಲಿ ಷಣ್ಮುಖಸ್ವಾಮಿಯ ಸಾಲೋಕ್ಯವನ್ನು ಪಡೆಯುವನು.

ಸಗರಚಕ್ರವರ್ತಿಯ ವೃತ್ತಾಂತ : 6 ರಘುನಾಥನೆ, ಪೂರ್ವದಲ್ಲಿ ಅಯೋಧ್ಯಾ ಪಟ್ಟಣದಲ್ಲಿ ಐಶ್ವರ್ಯಸಂಪನ್ನನಾಗಿ ಅತ್ಯಂತ ಧರ್ಮಪಾಲಕನಾದ ಸಗರನೆಂಬ ರಾಜನಿದ್ದನು. ಆತನು ಇಬ್ಬರು ಸ್ತ್ರೀಯರನ್ನು ಮದುವೆ ಯಾದನು. ವಿದರ್ಭದೇಶದ ರಾಜನ ಮಗಳಾದ ಕೇಶಿನೀ ಎಂಬವಳು ಹಿರಿಯ ಹೆಂಡತಿ ಅವಳು ಮಹಾಬುದ್ಧಿಶಾಲಿನಿಯೂ ಮಹಾಸತ್ಯವಾದಿನಿಯೂ ಆಗಿದ್ದಳು. ಅರಿಷ್ಟನೇಮಿಯೆಂಬ ರಾಜನ ಮಗಳಾದ ಸುಮತಿ ಎಂಬವಳು ಮನೋಹರವಾದ ರೂಪಲಾವಣ್ಯಗಳುಳ್ಳವಳಾಗಿ ಆತನಿಗೆ ಎರಡನೆಯ ಹೆಂಡತಿಯಾಗಿದ್ದಳು. ಸೆಗರಚಕ್ರವರ್ತಿಯು ಆ ಇಬ್ಬರು ಸ್ತ್ರೀಯರಲ್ಲಿಯೂ ಸಂತಾನವಿಲ್ಲದ್ದೆರಿಂದ, ಆ ಸ್ತ್ರೀಯರ ಸಹಿತ ಪುತ್ರಸಂತಾನಕ್ಕೋಸ್ಕರ ಹಿಮವಚ್ಛರ್ವತಕ್ಕೆ ಹೋಗಿ ಭೃಗುಮುನೀಶ್ವರನ ಆಶ್ರಮದಲ್ಲಿ ನೂರು ವರ್ಷಗಳ ಪರ್ಯಂತ ತಪಸ್ಸನ್ನು ಮಾಡಿದನು. ಶತವರ್ಷ ಪೂರ್ಣವಾದ ಬಳಿಕ ಆತನ ತಪಸ್ಸಿಗೆ ಸಂತೋಷಪಟ್ಟು ಭೃಗುಮುನೀಶ್ವರನು ಸಗರಚಕ್ರವರ್ತಿಯನ್ನು ಕುರಿತು ಎಲೈ ಚಕ್ರವರ್ತಿಯ, ನಿನಗೆ ಮಹಾಶ್ರೇಯಸ್ಕರವಾದ ಪುತ್ರಲಾಭವುಂಟಾಗುವುದು. ಲೋಕದಲ್ಲಿ ನಿನಗೆ ಅಧಿಕವಾದ ಕೀರ್ತಿಯುಂಟಾಗುವದು. ನಿನ್ನೆ ಸ್ತ್ರೀಯರಲ್ಲಿ ಒಬ್ಬಳು ವಂಶೋದ್ಧಾರಕನಾದ ಒಬ್ಬ ಮಗನನ್ನು ಪಡೆಯುವಳು. ಮತ್ತೊಬ್ಬಳು ಅರವತ್ತು ಸಾವಿರ ಮಂದಿ ಮಕ್ಕಳನ್ನು ಪಡೆಯುವಳು ' ಎಂದು ಹೇಳಿದನು ಆಗ ಸಗರಚಕ್ರವರ್ತಿಯ ಸ್ತ್ರೀಯರು ಭೃಗುಮುನೀಶ್ವರನನ್ನು ಪ್ರಾರ್ಥಿಸಿ ಆತನ ಅಭಿಮುಖವಾಗಿ ನಮ್ಮಿಬ್ಬರಲ್ಲಿ ಯಾರಿಗೆ ಒಬ್ಬ ಕುಮಾರನು ಜನಿಸುವನು ಯಾರಿಗೆ ಬಹುಮಂದಿ ಮಕ್ಕಳು ಜನಿಸುವರು ' ಎಂದು ಕೇಳಿದರು. ಭೃಗುಮುನೀಶ್ವರನು ''ಎಲೈ ಸ್ತ್ರೀಯರೆ, ನಿಮ್ಮೊಳಗೆ ಯಾರಿಗೆ ಒಬ್ಬ ಮಗನಾಗಬೇಕೆಂದೂ ಯಾರಿಗೆ ಬಹುಮಂದಿ ಮಕ್ಕಳಾಗಬೇಕೆಂದೂ ಇಚ್ಛೆ ಇರುವುದೋ ತಿಳಿಸಿ ಎಂದನು. ಆ ಮಾತನ್ನು ಕೇಳಿ ಕೇಶಿನಿಯು ತನಗೆ ವಂಶೋದ್ಧಾರಕನಾದ ಒಬ್ಬ ಮಗನು ಸಾಕೆಂದು ಬೇಡಿಕೊಂಡಳು. ಗರುಡನ ಒಡಹುಟ್ಟಿದವಳಾದ ಸುಮತಿಯು ತನಗೆ ಅರವತ್ತು ಸಾವಿರ ಮಂದಿ ಮಕ್ಕಳಾಗಬೇಕೆಂದು ಬೇಡಿಕೊಂಡಳು. ಆಮೇಲೆ ಸಗರನು ಭೃಗುಮುನೀಶ್ವರನಿಗೆ ಅಭಿವಂದಿಸಿ ತನ್ನ ಇಬ್ಬರು ಸ್ತ್ರೀಯರನ್ನು ಕೂಡಿಕೊಂಡು ತನ್ನ ಪಟ್ಟಣಕ್ಕೆ ಬಂದು ಕೆಲವುಕಾಲ ಕಳೆದ ನಂತರ ಕೇಶಿನಿಯು ಅಸಮಂಜನೆಂಬ ಒಬ್ಬ ಕುಮಾರನನ್ನು ಪಡೆದಳು.

ಮುಂದುವರಿಯುವುದು...

ಮುಖ್ಯ ಆಯುಕ್ತರ ನಡೆ ವಲಯದ ಕಡೆ
ಮಹದೇವಪುರ ವಲಯದಲ್ಲಿ ಒತ್ತುವರಿಯಾಗಿರುವುದನ್ನು ಗುರುತಿಸಿ ತೆರವುಗೊಳಿಸಿ: ತುಷಾರ್ ಗಿರಿನಾಥ್

• **ಉದಯವಾಹಿನಿ, ಮಹದೇವಪುರ**

ಮಹದೇವಪುರ ವಲಯ ವ್ಯಾಪ್ತಿಯಲ್ಲಿ ಕೆರೆ, ರಾಜಕಾಲುವೆ ಹಾಗೂ ಸೈಡ್ ಡ್ರೈನ್ ಒತ್ತುವರಿಯಾಗಿರುವುದನ್ನು ಗುರುತಿಸಿ ತೆರವುಗೊಳಿಸಲು ಮುಖ್ಯ ಆಯುಕ್ತರಾದ ತುಷಾರ್ ಗಿರಿ ನಾಥ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಮಹದೇವಪುರ ವಲಯದಲ್ಲಿ ''ಮುಖ್ಯ ಆಯುಕ್ತರ ನಡೆ ವಲಯದ ಕಡೆ'' ಕಾರ್ಯಕ್ರಮದಡಿ ಇಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ವೆಂಗಯ್ಯನ ಕೆರೆಯಲ್ಲಿ ಒತ್ತುವರಿ ಭಾಗವನ್ನು ಗುರುತಿಸಿ ತೆರವು ಕಾರ್ಯಾಚರಣೆ ನಡೆಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೆ.ಆರ್ ಪುರಂ ವ್ಯಾಪ್ತಿಯ ವೆಂಗಯ್ಯನ ಕೆರೆಯನ್ನು 8 ಕೋಟಿ ರೂ. ವೆಚ್ಚದಲ್ಲಿ ಹೂಳೆತ್ತುವ ಕಾರ್ಯ, ಕೆರೆಯ ಸುತ್ತಲೂ ಫೆನ್ಸಿಂಗ್ ಅಳವಡಿಸುವ, ಬಂಡ್ ಬಲಪಡಿಸುವ, ವಾಯು ವಿಹಾರ ಮಾರ್ಗ, ಇನ್ ಲೆಟ್ ದುರಸ್ತಿ ಕಾರ್ಯ, ಡೈವರ್ಷನ್ ಲೈನ್ ಸೇರಿದಂತೆ ಇನ್ನಿತರೆ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಕೆರೆಗೆ ಸೀವೇಜ್ ನೀರು ಬರದಂತೆ ಪಾಲಿಕೆ ವತಿಯಿಂದ 15 ಎಂ.ಎಲ್.ಡಿ ತ್ಯಾಜ್ಯ ನೀರು ಸಂಸ್ಕರಣಾ ಘಟಕ ಘಟಕ ಸ್ಥಾಪಿಸಲಾಗುತ್ತಿದ್ದು, ಜಲಮಂಡಳಿ ವತಿಯಿಂದ ಈಗಾಗಲೇ 10 ಎಂ.ಎಲ್.ಡಿ ಸ್ಥಾಪಿಸಲಾಗಿದೆ ಎಂದು ಅಧಿಕಾರಿ ಮಾಹಿತಿ ನೀಡಿದರು.

ಉದಯವಾಹಿನಿ ಚಿತ್ರ

> **ರಸ್ತೆ ದುರಸ್ತಿ ಕಾರ್ಯವನ್ನು ನಿಗದಿತ ಸಮಯದೊಳಗಾಗಿ ಪೂರ್ಣಗೊಳಿಸಬೇಕು. ಜೊತೆಗೆ ಇಕೋ ಸ್ಪೇಸ್ ಕಡೆಯಿಂದ ಬರುವ ಕಾಲುವೆ ಹಾಗೂ ಸಕ್ರಾ ಆಸ್ಪತ್ರೆ ಕಡೆಯಿಂದ ಬರುವ ಕಾಲುವೆ ಒತ್ತುವರಿಯಾಗಿದ್ದಲ್ಲಿ ತೆರವು ಕಾರ್ಯಾಚರಣೆ ನಡೆಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.**

ಸರ್ವೀಸ್ ರಸ್ತೆ ದುರಸ್ಥಿ ಕಾರ್ಯ ತ್ವರಿತವಾಗಿ ಪೂರ್ಣಗೊಳಿಸಿ: ಹೊರ ವರ್ತುಲ ರಸ್ತೆ ಮಾರತಹಳ್ಳಿ ಬಳಿಯ ಸರ್ವೀಸ್ ರಸ್ತೆಯಲ್ಲಿ ಪಾದಚಾರಿ ಮಾರ್ಗ ಹಾಗೂ ಮೀಡಿಯನ್ ಡ್ರೈನ್ ಕಾಮಗಾರಿಯನ್ನು ಪರಿಶೀಲಿಸಿ, ಸೈಡ್ ಡ್ರೈನ್ ನಲ್ಲಿ ಹೂಳೆತ್ತಿ, ಹೊಸದಾಗಿ ಸ್ಲ್ಯಾಬ್ ಹಳವಡಿಸಿ, ಗ್ರೇಟಿಂಗ್ಸ್ ಅಳವಡಿಸಿ ರಸ್ತೆ ಮೇಲೆ ಬೀಳುವ ನೀರು ಸೈಡ್ ಡ್ರೈನ್ ಗೆ ಸರಾಗವಾಗಿ ಹರಿದು ಹೋಗುವಂತೆ ಮಾಡಬೇಕು. ಬಾಕಿಯಿರುವ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸೂಚನೆ ನೀಡಿದರು.

ಸರಿಯಾಗಿ ಕಾರ್ಯನಿರ್ವಹಿಸದ ಅಧಿಕಾರಿಗಳ ಮೇಲೆ ಕ್ರಮವಹಿಸಿ: ವೈಟ್ ಫೀಲ್ಡ್ ಉಪ ವಿಭಾಗ ಸಹಾಯಕ ಕಂದಯ ಅಧಿಕಾರಿ ಕಛೇರಿಗೆ ಭೇಟಿ ನೀಡಿ, ನಾಗರೀಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸಹಾಯ ಕೇಂದ್ರ, ಮಾಹಿತಿಯ ನಾಮಫಲಕ ಅಳವಡಿಸಬೇಕು. ಮಹದೇವಪುರ ವಲಯ ವ್ಯಾಪ್ತಿಯಲ್ಲಿ ಸುಸ್ತಿದಾರರು ಹಾಗೂ ಪರಿಷ್ಕರಣೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಬಾಕಿ ಆಸ್ತಿ ತೆರಿಗೆ ಸಂಗ್ರಹಿಸುವ ವಿಚಾರದಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ಮೇಲೆ ಕ್ರಮವಹಿಸಲು ವಲಯ ಆಯುಕ್ತರಿಗೆ ಸೂಚನೆ ನೀಡಿದರು.

ಕಲ್ವರ್ಟ್ ಡ್ರೈನ್ ಪರಿಶೀಲನೆ: ಐಟಿಪಿಎಲ್ ರಸ್ತೆ ಝೂರಿ ಹೋಟೆಲ್ ಬಳಿ ಕಲ್ವರ್ಟ್ ಡ್ರೈನ್ ಪರಿಶೀಲನೆ ನಡೆಸಿ ಕಾಲುವೆಯಲ್ಲಿ ಹೂಳೆತ್ತಿ ಸ್ವಚ್ಛತೆ ಕಾಪಾಡಬೇಕು. ಸದರಿ ಸ್ಥಳದಲ್ಲಿ ಜಲಾವೃತವಾಗುವುದನ್ನು ತಪ್ಪಿಸುವ ಸಲುವಾಗಿ ಶಾಶ್ವತ ಪರಿಹಾರವನ್ನು ಹುಡುಕಿ ಇರುವ ಸಮಸ್ಯೆಯನ್ನು ಬಗೆಹರಿಸಲು ರಾಜಕಾಲುವೆ ವಿಭಾಗದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪರಿಶೀಲನೆಯ ವೇಳೆ ವಲಯ ಆಯುಕ್ತರಾದ ರಮೇಶ್, ಮುಖ್ಯ ಅಭಿಯಂತರರಾದ ಲೋಕೇಶ್, ಉಪ ಆಯುಕ್ತರಾದ ಶಶಿಕುಮಾರ್ ಸೇರಿದಂತೆ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

> **ಒತ್ತುವರಿ ಆಗಿರುವುದನ್ನು ತೆರವುಗೊಳಿಸಿ: ಮುಖ್ಯ ಆಯುಕ್ತ**
>
> **ಸಕ್ರಾ ಆಸ್ಪತ್ರೆ ರಸ್ತೆಯಲ್ಲಿ ಮಳೆಗಾಲದ ವೇಳೆ ಜಲಾವೃತವಾಗುವುದನ್ನು ತಪ್ಪಿಸುವ ಸಲುವಾಗಿ, 750 ಮೀಟರ್ ರಸ್ತೆಯಲ್ಲಿ ದುರಸ್ತಿ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ. ಅದರಂತೆ ರಸ್ತೆ ಭಾಗದಲ್ಲಿ ಹಾದುಹೋಗುವ ರಾಜಕಾಲುವೆಯ ಎರಡೂ ಬದಿಯ ಸುಮಾರು 120 ಮೀಟರ್ ವ್ಯಾಪ್ತಿಯಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡಿ ಉಳಿದ ಕಡೆ ಡಾಂಬರೀಕರಣ ಮಾಡಲಾಗುತ್ತಿದೆ ಎಂದು ಅಧಿಕಾರಿ ಮಾಹಿತಿ ನೀಡಿದರು.**

ದಿನಕ್ಕೊಂದು ಮುಕ್ತಕ -26

• **ಹೆಚ್.ಎಸ್. ಪ್ರತಿಮಾ**
• **ಉದಯವಾಹಿನಿ, ವಿಶೇಷ**

ನಿಟ್ಟುಸಿರು ಬಿಡೆ ಸಮಯವಿಲ್ಲೆಂದು ಹೇಳುವರು ಕಟ್ಟುವರು ಮನೆಯನ್ನು ಬಲು ಎತ್ತರ
ನಿಟ್ಟಿಸುತಿರುವುದು ಪೃಥ್ವಿ ಉಳಿಗಾಲವಿಲ್ಲೆಂದು
ಗಟ್ಟಿಯಾಗಿಸು ಧರೆಯ ಲಕ್ಷ್ಮಿದೇವಿ.....

ಭಾವಾರ್ಥ: ನಿಟ್ಟುಸಿರನ್ನು ಬಿಡುತ ಸಮಯವೇ ಇಲ್ಲ ಎಂದು ಕಾರ್ಯವನ್ನು ಮಾಡುತ್ತಿರುವ ಮಾನವನ್ನು ಮನೆಯನ್ನು ಕಟ್ಟುವಾಗ ಪರಿಸರವನ್ನು ಹಾಳು ಮಾಡಿ ಪ್ರಕೃತಿಯಲ್ಲಿರುವ ಮರ ಗಿಡಗಳನ್ನು ಕಡೆದು ಮನೆಯನ್ನು ಕಟ್ಟುವುದರಲ್ಲಿ ಮಗ್ನರಾಗುತ್ತಾನೆ. ಮನುಷ್ಯನಾಗಿ ಹುಟ್ಟಿದವನು ಬಹಳ ಸ್ವಾರ್ಥಿಯಾದರೆ ಬಹಳ ಕೆಟ್ಟ ಪರಿಣಾಮಗಳನ್ನು ನೋಡಬೇಕಾಗುತ್ತದೆ. ಹಾಗೆಯೇ ಪರಿಸರವನ್ನು, ಪ್ರಕೃತಿಯನ್ನು ಹಾಳು ಮಾಡುತ್ತಾ ಬಲು ಎತ್ತರವಾಗಿಯೇ ಮನೆಯನ್ನು ಕಟ್ಟಿ ಮೆರೆಯುತ್ತಾನೆ. ಪೃಥ್ವಿಗೆ ಉಳಿಗ

ಕಮಲದ ಭದ್ರಕೋಟೆಯಲ್ಲಿ ಈ ಬಾರಿಯಾದರೂ 'ಕೈ' ಬಾವುಟ ಹಾರಾಡುತ್ತಾ?

● ಮತದಾನ ಮುಗಿಯುತ್ತಿದ್ದಂತೆ ಕ್ಷೇತ್ರದ ಪ್ರತಿಯೊಂದು ಗ್ರಾಮಗಳಲ್ಲಿ ಫಲಿತಾಂಶದ ಬಗ್ಗೆಯೇ ಮಾತುಕತೆ

• ಉದಯವಾಹಿನಿ ಹಾವೇರಿ

ಸೋಲು ಗೆಲುವಿನ ಲೆಕ್ಕಾಚಾರ ಶುರು

ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಮತದಾನ ಪ್ರಕ್ರಿಯೆ ಮುಕ್ತಾಯಗೊಳ್ಳುತ್ತಿದ್ದಂತೆ, ಕ್ಷೇತ್ರದಲ್ಲಿ ಅಭ್ಯರ್ಥಿಗಳ ಸೋಲು - ಗೆಲುವಿನ ಲೆಕ್ಕಾಚಾರ ಶುರುವಾಗಿದೆ. 'ಕಮಲದ ಭದ್ರಕೋಟೆಯಲ್ಲಿ ಈ ಬಾರಿಯಾದರೂ 'ಕೈ' ಬಾವುಟ ಹಾರಾಡುತ್ತಾ ಅಥವಾ ಅಪ್ಪನ ಕ್ಷೇತ್ರವನ್ನು ಮಗ ಉಳಿಸಿಕೊಳ್ಳುತ್ತಾರಾ ಎಂಬ ಚರ್ಚೆಗಳು ನಡೆಯುತ್ತಿವೆ.

ಬುಧವಾರ ಬೆಳಿಗ್ಗೆಯಿಂದ ರಾತ್ರಿಯವರೆಗೂ ಮತದಾನ ಪ್ರಕ್ರಿಯೆ ನಡೆದಿದ್ದು, 1.91 ಲಕ್ಷ ಮಂದಿ ತಮ್ಮ ಹಕ್ಕು ಚಲಾಯಿಸಿದ್ದಾರೆ. ಶೇ. 80.72ರಷ್ಟು ಮತದಾನ ಪ್ರಮಾಣ ದಾಖಲಾಗಿದ್ದು, ಮತದಾರರ ಅಂತಿಮ ತೀರ್ಪು ಏನು ಎಂಬುದು ನವೆಂಬರ್ 23ರಂದು ನಡೆಯುವ ಎಣಿಕೆಯಿಂದ ಗೊತ್ತಾಗಬೇಕಿದೆ.

ಮತದಾನ ಮುಗಿಯುತ್ತಿದ್ದಂತೆ ಕ್ಷೇತ್ರದ ಪ್ರತಿಯೊಂದು ಗ್ರಾಮಗಳಲ್ಲಿ ಫಲಿತಾಂಶದ ಬಗ್ಗೆಯೇ ಮಾತುಕತೆ ನಡೆಯುತ್ತಿದೆ. ಅಕ್ಕ-ಪಕ್ಕದ ತಾಲ್ಲೂಕು ಹಾಗೂ ರಾಜ್ಯದ ಇತರೆ ಜಿಲ್ಲೆಗಳ ಜನರು, ಶಿಗ್ಗಾಂವಿ ಕ್ಷೇತ್ರದ ಜನರಿಗೆ ಕರೆ ಮಾಡಿ ವಿಚಾರಿಸುತ್ತಿದ್ದಾರೆ. 'ಯಾರು ಗೆಲ್ಲುತ್ತಾರೆ' ಎಂದು ಪ್ರಶ್ನಿಸುತ್ತಿದ್ದಾರೆ. ಹೀಗಾಗಿ, ಕ್ಷೇತ್ರದಲ್ಲಿ ಚುನಾವಣೆಯ ಫಲಿತಾಂಶದ ಬಗ್ಗೆಯೇ ಸುದ್ದಿಗಳು ಹರಿದಾಡುತ್ತಿವೆ.

ಬಿಜೆಪಿ ಹಾಗೂ ಕಾಂಗ್ರೇಸ್ ಅಭ್ಯರ್ಥಿ ನಡುವೆ ನೇರ ಹಣಾಹಣಿ ಇದೆ. ಮತದಾನದ ಪ್ರಮಾಣ ಗಮನಿಸಿದರೆ, ಕನಿಷ್ಠ 4 ಸಾವಿರ ಹಾಗೂ ಗರಿಷ್ಠ 8 ಸಾವಿರ ಮತಗಳ ಅಂತರದಲ್ಲಿ ಅಭ್ಯರ್ಥಿ ಗೆಲ್ಲಬಹುದು' ಎಂಬುದು ಮತದಾರರ ಲೆಕ್ಕಾಚಾರ.

ಮತಗಟ್ಟೆವಾರು ಲೆಕ್ಕಾಚಾರ: ಕ್ಷೇತ್ರದ 241 ಮತಗಟ್ಟೆಯಲ್ಲಿ ದಾಖಲಾಗಿರುವ ಮತದಾನದ ಪ್ರಮಾಣವನ್ನು ಸಂಗ್ರಹಿಸಿರುವ ಬಿಜೆಪಿ ಹಾಗೂ ಕಾಂಗ್ರೇಸ್, ಪರಿಶೀಲನೆ ನಡೆಸುತ್ತಿದೆ. ಮತಗಟ್ಟೆ ವ್ಯಾಪ್ತಿಯಲ್ಲಿ ವಾಸವಿರುವ ಮತದಾರರ ಜಾತಿ ಹಾಗೂ ಇತರೆ ಅಂಶಗಳನ್ನು ಆಧರಿಸಿ ಮತಗಳ ಲೆಕ್ಕಾಚಾರ ನಡೆದಿದೆ. ಶಿಗ್ಗಾಂವಿ ತಾಲ್ಲೂಕಿನ ತಡಸ ಹಾಗೂ ದುಂಡಶಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬಿಜೆಪಿಗೆ ಹೆಚ್ಚಿನ ಮತಗಳಿವೆ. ಹುಲಗೂರು ವ್ಯಾಪ್ತಿಯಲ್ಲಿ ಕಾಂಗ್ರೇಸ್ ಮತಗಳು ಹೆಚ್ಚಿವೆ. ಸವಣೂರು ತಾಲ್ಲೂಕಿನಲ್ಲಿ ಕಾರಡಗಿಯಲ್ಲಿ ಮೊದಲಿನಿಂದಲೂ ಕಾಂಗ್ರೇಸ್ ಗಾಳಿ ಬೀಸುತ್ತಿದೆ. ಹುರುಳಿಕುಪ್ಪಿ ಜಿಲ್ಲಾ ಪಂಚಾಯಿತಿ ಕ್ಷೇತ್ರದಲ್ಲಿ ಬಿಜೆಪಿಗೆ ಅವಕಾಶಗಳು ಹೆಚ್ಚಿವೆ. ಬಂಕಾಪುರ, ಶಿಗ್ಗಾಂವಿ ಹಾಗೂ ಸವಣೂರು ಪುರಸಭೆ ವ್ಯಾಪ್ತಿಯಲ್ಲಿ ಬಿಜೆಪಿ ಪ್ರಭಾವವಿದೆ ಎಂಬ ಚರ್ಚೆಗಳು ನಡೆಯುತ್ತಿವೆ. ಸಚಿವರು, ತಮ್ಮ ಜಾತಿಯ ಜನರಿರುವ ಪ್ರದೇಶಗಳಲ್ಲಿ ಸುತ್ತಾಡಿ 'ಕೈ' ಬಲಪಡಿಸಿದ್ದಾರೆಂದು ಜನರು ಮಾತನಾಡಿಕೊಳ್ಳುತ್ತಿದ್ದಾರೆ.

ಪಠಾಣ ಅವರು ನೆಪಕ್ಕಷ್ಟೇ ಅಭ್ಯರ್ಥಿಯಾಗಿದ್ದರು. ಅವರ ಗೆಲುವಿನ ಸಂಪೂರ್ಣ ಜವಾಬ್ದಾರಿಯನ್ನು ರಾಜ್ಯ ಸರ್ಕಾರವೇ ವಹಿಸಿಕೊಂಡಿತ್ತು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು (ಮತದಾನದ ಮುನ್ನಾದಿನವೇ ಮಹಿಳೆಯರ ಖಾತೆಗೆ 2,000 ಜಮೆ) ಕ್ಷೇತ್ರದಲ್ಲಿ ಕಾಂಗ್ರೇಸ್ ಕೈ ಹಿಡಿಯುವ ಲಕ್ಷಣಗಳಿವೆ. ಜೊತೆಗೆ, ಕ್ಷೇತ್ರದಲ್ಲಿ ಬದಲಾವಣೆ ಗಾಳಿಯೂ ಬೀಸುತ್ತಿರುವುದು ಕಾಂಗ್ರೇಸ್‌ಗೆ ಲಾಭ ತರುವ ಅಭಿಪ್ರಾಯವಿದೆ.

> ಬಂಡಾಯದ ನಡುವೆಯೂ ಮುಖಂಡರ ಮನವೊಲಿಸುವಲ್ಲಿ ಬಸವರಾಜ ಬೊಮ್ಮಾಯಿ ಯಶಸ್ವಿಯಾಗಿದ್ದಾರೆ. ಬಂಕಾಪುರದಲ್ಲಿ ಮುಸ್ಲಿಂ ಸಮುದಾಯದವರ ಸಭೆ ನಡೆಸಿದ್ದ ಅವರು, 'ನಿಮ್ಮೊಂದಿಗೆ ನಾನಿದ್ದೇನೆ. ಮಗನನ್ನು ಗೆಲ್ಲಿಸಿ' ಎಂದು ಕೋರಿದ್ದರು.


ಉದಯವಾಹಿನಿ ಚಿತ್ರ

> ಭರತ್ ಗೆಲುವಿಗೆ ಹೆಚ್ಚು ಅವಕಾಶ: ತಂದೆಯ ಅಭಿವೃದ್ಧಿ ಕೆಲಸಗಳು ಹಾಗೂ ವೈಯಕ್ತಿಕ ವರ್ಚಸ್ಸಿನಿಂದಾಗಿ ಈ ಬಾರಿ ಭರತ್ ಬೊಮ್ಮಾಯಿ ಅವರಿಗೆ ಗೆಲುವಿನ ಅವಕಾಶಗಳು ಹೆಚ್ಚಿವೆ. ನಾಲ್ಕು ಬಾರಿ ಶಾಸಕರಾಗಿದ್ದ ಬಸವರಾಜ ಬೊಮ್ಮಾಯಿ, ಕ್ಷೇತ್ರದ ಪ್ರಮುಖ ಮುಖಂಡರ ಮನೆ ಮನೆ ಭೇಟಿ ನೀಡಿ ಮತಯಾಚನೆ ಮಾಡಿದ್ದಾರೆ.

ಶಿಗ್ಗಾಂವಿ ಕ್ಷೇತ್ರದಲ್ಲಿ ಬದಲಾವಣೆ

ಹಾವೇರಿ ದೇವಗಿರಿಯ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿರುವ ಮತಯಂತ್ರಗಳ ಭದ್ರತಾ ಕೊಠಡಿ ಬಳಿ ಬಿಎಸ್‌ಎಫ್ ಯೋಧರು ಗುರುವಾರ ಭದ್ರತೆ ಒದಗಿಸಿದರು-ಅರುಣಕುಮಾರ ಪೂಜಾರ, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷಬಸವರಾಜ ಬೊಮ್ಮಾಯಿ ಅವರ ಅಭಿವೃದ್ಧಿ ಕೆಲಸಗಳು ಕಣ್ಣ ಮುಂದಿವೆ. ಅವರ ಕೆಲಸವನ್ನು ಮೆಚ್ಚಿ ಜನರು ಭರತ್ ಅವರಿಗೆ ಹೆಚ್ಚು ಮತ ಹಾಕಿದ್ದಾರೆ. ಬಿಜೆಪಿ ಗೆಲ್ಲಲಿದೆ.-ಸಂಜೀವಕುಮಾರ ನೀರಲಗಿ, ಕಾಂಗ್ರೇಸ್ ಜಿಲ್ಲಾ ಘಟಕದ ಅಧ್ಯಕ್ಷಶಿಗ್ಗಾಂವಿ ಕ್ಷೇತ್ರದಲ್ಲಿ ಬದಲಾವಣೆ ಬಯಸುತ್ತಿರುವ ಜನರು ಹೆಚ್ಚಿನ ಪ್ರಮಾಣದಲ್ಲಿ ಕಾಂಗ್ರೇಸ್‌ಗೆ ಮತ ಹಾಕಿದ್ದಾರೆ. ಕೈ ಅಭ್ಯರ್ಥಿ ಗೆಲುವು ನಿಶ್ಚಿತ.

ಮಿನಿ ನ್ಯೂಸ್

ಅನಧಿಕೃತ ಸಾಗುವಳಿ ಸಕ್ರಮಕ್ಕೆ ಪದೇ ಪದೆ ಗಡುವು ಉಪಯೋಗವಿಲ್ಲ

• ಉದಯವಾಹಿನಿ, ಚಿಂಚೋಳಿ

ರಾಜ್ಯದಲ್ಲಿನ ರೈತರ ಅನಾಧಿಕೃತ ಸಾಗುವಳಿ ಸಕ್ರಮಕ್ಕೆ ಪದೇ ಪದೇ ಗಡುವು ನೀಡುತ್ತಿರುವ ಕಂದಾಯ ಸಚಿವರು ಚಿಂಚೋಳಿ ತಾಲ್ಲೂಕಾ ಮತ್ತು ಕಾಳಗಿ ತಾಲ್ಲೂಕಿನ ರೈತರಿಗೆ ಉಪಯೋಗಕ್ಕೆ ಬಾರದ ಸೂಚನೆಯಾಗಿದ್ದು ರೈತರು ಕಂಗಾಲಾಗುತ್ತಿದ್ದಾರೆ ಎಂದು ಕಲ್ಯಾಣ ಕರ್ನಾಟಕ ಸಮಾಜ ಜಾಗೃಣ ಮಂಚ್ ಸಂಚಾಲಕ ರಮೇಶ ಯಾಕಾಪೂರ ತಿಳಿಸಿದ್ದಾರೆ. ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು,ಕ್ಷೇತ್ರದಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ನಡೆಯುವ ಬಗರ್ ಹುಕುಂ ಸಮಿತಿ ಕೂಡ ಸರ್ಕಾರ ರಚನೆ ಮಾಡಿಲ್ಲ ಅಂದಾಗ ಕಂದಾಯ ಸಚಿವರು ನೀಡುವ ಗಡುವು ಸೂಚನೆಗೆ ಯಾವ ಅರ್ಥದಲ್ಲಿ ನೀಡುತ್ತಿದ್ದಾರೆ.

ಡಿಸೆಂಬರ್ ಮೊದಲ ವಾರದಲ್ಲಿ ಶಾಸಕರ ಅಧ್ಯಕ್ಷತೆಯ ಸಮಿತಿಗಳ ಸಭೆ ನಡೆಸಿ ಅರ್ಹರಿಗೆ ಡಿಜಿಟಲ್ ಭೂ ಸಾಗುವಳಿ ಚೀಟಿ ನಿಡಬೇಕೆಂದು ಕಟ್ಟುನಿಟ್ಟಿನ ಸೂಚನೆ ನೀಡಿದ್ದು ಆದರೆ ಈ ಸೂಚನೆ ಚಿಂಚೋಳಿ ಕ್ಷೇತ್ರದ ವ್ಯಾಪ್ತಿಯ ಅನಾಧಿಕೃತ ಸಾಗುವಳಿ ಮಾಡಿದ ರೈತರಿಗೆ ಉಪಯೋಗವಾಗದು ಎಂದು ತಿಳಿಸಿದ್ದಾರೆ.

ನವಜಾತ ಶಿಶುಗಳ ಸಂಜೀವಿನಿ 'ಜೀವಾಮೃತ'

• ಉದಯವಾಹಿನಿ ಹುಬ್ಬಳ್ಳಿ

ನವಜಾತ ಶಿಶುಗಳ ಅನುಕೂಲಕ್ಕಾಗಿ ನಗರದ ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದಲ್ಲಿ (ಕೆಎಂಸಿ-ಆರ್‌ಐ) ಸ್ಥಾಪಿಸಲಾಗಿರುವ 'ಜೀವಾಮೃತ' ತಾಯಿಯ ಎದೆಹಾಲು ಸಂಗ್ರಹ ಕೇಂದ್ರಕ್ಕೆ ಈವರೆಗೆ 1,027 ತಾಯಂದಿರು ಎದೆಹಾಲು ನೀಡಿದ್ದಾರೆ. ರೋಟರಿ ಕ್ಲಬ್ ಆಫ್ ಹುಬ್ಬಳ್ಳಿ ಮಿಡ್ ಟೌನ್, ರೋಟರಿ ಕ್ಲಬ್ ಆಫ್ ಕೊಪೆಲ್ (ಯುಎಸ್‌ಎ), ರೋಟರಿ ಇಂಟರ್‌ನ್ಯಾಷನಲ್ ವತಿಯಿಂದ ಕೆಎಂಸಿ-ಆರ್‌ಐನ ಚಿಕ್ಕ ಮಕ್ಕಳ ವಿಭಾಗದಲ್ಲಿ ಈ ಕೇಂದ್ರವನ್ನು ಸ್ಥಾಪಿಸಲಾಗಿದೆ.

ಪ್ರಸಕ್ತ ವರ್ಷ ಏಪ್ರಿಲ್ 12ರಂದು ಕೇಂದ್ರ ಉದ್ಘಾಟನೆಯಾಗಿದ್ದು, ಏಪ್ರಿಲ್ 20ರಿಂದ ಎದೆ ಹಾಲು ಸಂಗ್ರಹ ಆರಂಭಿಸಲಾಗಿದೆ.

ಈವರೆಗೆ ಒಟ್ಟು 228.305 ಲೀಟರ್ ಎದೆಹಾಲು ಸಂಗ್ರಹವಾಗಿದ್ದು, ಅದರಲ್ಲಿ 201.42 ಲೀಟರ್ ಹಾಲನ್ನು ಪಾಶ್ಚರೈಸ್ ಮಾಡಿ, ಅವಧಿಪೂರ್ವ ಜನಿಸಿದ ಶಿಶುಗಳು ಸೇರಿದಂತೆ, ಒಟ್ಟು 136 ಶಿಶುಗಳಿಗೆ (191.13 ಲೀಟರ್) ನೀಡಲಾಗಿದೆ. ಪ್ರತಿ ಮಗುವಿಗೆ ಪ್ರತಿ ದಿನಕ್ಕೆ 100ರಿಂದ 120 ಮಿಲಿ ಲೀಟರ್ ಹಾಲು ನೀಡಲಾಗುತ್ತದೆ. ದಿನಕ್ಕೆ 2-3 ಲೀಟರ್ ಹಾಲು ಬೇಕಾಗುತ್ತದೆ. ಕೆಎಂಸಿ-ಆರ್‌ಐನಲ್ಲಿ ಪ್ರತಿ ದಿನ 20ಕ್ಕೂ ಹೆಚ್ಚು ಶಿಶುಗಳು ಜನಿಸುತ್ತವೆ. ಅವಧಿಪೂರ್ವ ಜನಿಸಿದ ಕಾರಣಕ್ಕೆ ಶಿಶುಗಳಿಗೆ ಉಸಿರಾಟದ ತೊಂದರೆ, ಸೇರಿದಂತೆ ಇನ್ನಿತರ ಆರೋಗ್ಯ ಸಮಸ್ಯೆ ಕಂಡುಬರುತ್ತದೆ. ಅಂತಹ ಶಿಶುಗಳಿಗೆ ನೇರವಾಗಿ 3-7 ದಿನಗಳವರೆಗೆ ತಾಯಿಯ ಎದೆಹಾಲು ಕುಡಿಯಲು ಸಾಧ್ಯವಾಗುವುದಿಲ್ಲ. ಅಂತಹ ತಾಯಂದಿರಿಂದ ಎದೆಹಾಲು ಸಂಗ್ರಹಿಸಲಾಗುತ್ತದೆ' ಎಂದು ಜೀವಾಮೃತ ಯೋಜನೆಯ ಸಂಚಾಲಕ ಪ್ರೊ. ಪ್ರಕಾಶ ವಾರಿ ತಿಳಿಸಿದರು.

'ಚುಟುಕು ಭೂಷಣ' ಗೌರವ ಪ್ರಶಸ್ತಿಗೆ ಆಯ್ಕೆ

• ಉದಯವಾಹಿನಿ ಹುಬ್ಬಳ್ಳಿ

ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತು ನೀಡುವ 'ಚುಟುಕು ಭೂಷಣ' ಗೌರವ ಪ್ರಶಸ್ತಿ-2024ಕ್ಕೆ ಚುಟುಕು ಸಾಹಿತ್ಯದಲ್ಲಿ ಸಾಧನೆ ಮಾಡಿದ ನಾಡಿನ ನಾಲ್ವರು ಶ್ರೀಗಳು ಸೇರಿ ಆರು ಜನರನ್ನು ಆಯ್ಕೆ ಮಾಡಲಾಗಿದೆ' ಎಂದು ಪರಿಷತ್‌ನ ಸಂಚಾಲಕ ಕೃಷ್ಣಮೂರ್ತಿ ಕುಲಕರ್ಣಿ ತಿಳಿಸಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯ ಹರಿಹರ ಪುರ ಶಂಕರಮಠದ ಸ್ವಯಂಪ್ರಕಾಶ ಸಚ್ಚಿದಾನಂದ ಭಾರತೀ ಸ್ವಾಮೀಜಿ, ಗದಗ ಜಿಲ್ಲೆಯ ಮುಂಡರಗಿ ಅನ್ನದಾನೀಶ್ವರ ಮಠದ ಅನ್ನದಾನೀಶ್ವರ ಶಿವಯೋಗಿ ಸ್ವಾಮೀಜಿ, ಬಸವಕಲ್ಯಾಣದ ರಂಭಾಪುರಿ ಶಾಖಾಮಠದ ಅಭಿನವ ಘನಲಿಂಗ ರುದ್ರಮುನಿ ಸ್ವಾಮೀಜಿ, ಕಲಬುರಗಿ ಜಿಲ್ಲೆಯ ನಾಲವಾರ ಕೋರಿಸಿದ್ದೇಶ್ವರ ಸಂಸ್ಥಾನಮಠದ ಸಿದ್ಧತೋಟೇಂದ್ರ ಶಿವಾಚಾರ್ಯ ಸ್ವಾಮೀಜಿ, ಉತ್ತರ ಕನ್ನಡ ಜಿಲ್ಲೆಯ ಅಂಕೋಲಾದ ನಿವೃತ್ತ ಪ್ರಾಧ್ಯಾಪಕ ಪ್ರೊ.ಜಿ.ಯು.ನಾಯಕ, ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ಶಾಲಾ ಶಿಕ್ಷಕಿ ಶಾಂತಾ ಪುತ್ತೂರು ಅವರನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಪ್ರಶಸ್ತಿ ಪ್ರದಾನ ಡಿಸೆಂಬರ್‌ನಲ್ಲಿ ನಡೆಯಲಿದೆ.

ಕಾರ್ಕಳದಲ್ಲಿ ಸಂಭ್ರಮದ ಮಕ್ಕಳ ಹಬ್ಬ

ಉದಯವಾಹಿನಿ ಚಿತ್ರ

• ಉದಯವಾಹಿನಿ ಕಾರ್ಕಳ

ಇಲ್ಲಿನ ಗಾಂಧಿ ಮೈದಾನದ ಸಮೀಪದ ಕ್ರೈಸ್ಟ್ ಕಿಂಗ್ ಶಿಕ್ಷಣ ಸಂಸ್ಥೆಯಲ್ಲಿ ಸಂಸ್ಥೆಯ ಶಿಕ್ಷಕ-ರಕ್ಷಕ ಸಂಘದ ಆಶ್ರಯದಲ್ಲಿ ಮಕ್ಕಳ ದಿನಾಚರಣೆ ಮಕ್ಕಳ ಹಬ್ಬವು ಗಾಂಧಿ ಮೈದಾನದಲ್ಲಿ ನಡೆಯಿತು.

ಹಬ್ಬಕ್ಕೆ ಚಾಲನೆ ನೀಡಿದ ತಹಶೀಲ್ದಾರ್ ಪ್ರದೀಪ್ ಆರ್ ಮಾತನಾಡಿ, ಮಕ್ಕಳಲ್ಲಿ ಜೀವನೋತ್ಸಾಹ ಮೂಡಿಸುವುದು ಮಕ್ಕಳ ದಿನಾಚರಣೆಯ ಉದ್ದೇಶ. ಮಕ್ಕಳ ಭವಿಷ್ಯ ಉತ್ತಮವಾಗಲು ಸರಿಯಾದ ಮಾರ್ಗದರ್ಶನ ಅಗತ್ಯ. ಮಕ್ಕಳು ಭವಿಷ್ಯದಲ್ಲಿ ಉತ್ತಮ ಸಾಧನೆ ಮಾಡಿ ಸಮಾಜದಲ್ಲಿ ಗುರುತಿಸಿಕೊಳ್ಳಬೇಕು ಎಂದರು.

ಕಾರ್ಕಳ ಪರ್ಪಲೆ ಸಿಎಸ್‌ಐ ಬೆಥನಿಯಾ ಚರ್ಚ್‌ನ ಧರ್ಮಗುರು ಸೊಲೊಮನ್ ಮಾತನಾಡಿ, ಮಕ್ಕಳು ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ಮತ್ತು ಸನ್ನಡತೆ ರೂಢಿಸಿಕೊಳ್ಳಬೇಕು. ಮಕ್ಕಳನ್ನು ಶ್ರೇಷ್ಠ ವ್ಯಕ್ತಿಗಳಾಗಿ ರೂಪಿಸಿ ಸಮಾಜಕ್ಕೆ ಅರ್ಪಿಸುವ ಕಾರ್ಯದಲ್ಲಿ ಪೋಷಕರು ಮತ್ತು ಶಿಕ್ಷಕರು ಬದ್ಧತೆಯನ್ನು ಹೊಂದಿರಬೇಕು ಎಂದರು.

ತಾಲ್ಲೂಕು ಎಂಜಿನಿಯರ್ಸ್ ಸಂಘದ ಅಧ್ಯಕ್ಷ ವಿಜಯರಾಜ್ ಶೆಟ್ಟಿ ಮಾತನಾಡಿದರು. ಶಿಕ್ಷಕ-ರಕ್ಷಕ ಸಂಘದ ಮಾಜಿ ಅಧ್ಯಕ್ಷ ವಿವೇಕಾನಂದ ಶೆಣೈ ಮಾತನಾಡಿ, ಪ್ರತಿಭೆಗಳ ಅನಾವರಣಗೊಳಿಸುವ ಇಂತಹ ಕಾರ್ಯಕ್ರಮ ಅಗತ್ಯ ಎಮದರು. ಸತತ ಐದು ಬಾರಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ಚೆಸ್ ಆಟಗಾರ್ತಿ, ಸಂಸ್ಥೆಯ ವಿದ್ಯಾರ್ಥಿನಿ ಶಾನ್ವಿ ಎಸ್ ಬಲ್ಲಾಳ್ ಅಧ್ಯಕ್ಷತೆ ವಹಿಸಿದ್ದರು. ಮಕ್ಕಳು ಸಿದ್ಧಪಡಿಸಿದ ವಿವಿಧ ವಿಜ್ಞಾನ ಮಾದರಿಗಳ ಪ್ರದರ್ಶನ, ಚಿತ್ರಕಲೆ ಹಾಗೂ ಕರಕುಶಲ, ಆಹಾರ ಮಳಿಗೆಗಳು, ಮನರಂಜನಾ ಆಟಗಳ ಮಳಿಗೆಗಳು ಗಮನ ಸೆಳೆದವು.

ಬಸರಿಹಾಳ ಗ್ರಾ.ಪಂ ವತಿಯಿಂದ ಯಶಸ್ವಿ ಗ್ರಾಮಸಭೆ

• ಉದಯವಾಹಿನಿ ಕನಕಗಿರಿ

ಉದಯವಾಹಿನಿ ಚಿತ್ರ

ಮನರೇಗಾ ಯೋಜನೆಯಡಿ ಸಮುದಾಯ ಹಾಗೂ ವೈಯಕ್ತಿಕ ಕಾಮಗಾರಿಗಳ ಸದುಪಯೋಗ ಪಡೆಯಲು ಗ್ರಾಮಸ್ಥರಿಗೆ ಬಸರಿಹಾಳ ಗ್ರಾ.ಪಂ ಯ ಪಿಡಿಓ ಬಸವರಾಜ್ ಸಂಕನಾಳ ಅವರು ಹೇಳಿದರು.

ತಾಲ್ಲೂಕಿನ ಬಸರಿಹಾಳ ಗ್ರಾಮ ಪಂಚಾಯತಿಯಲ್ಲಿ 2025-26 ನೇ ಸಾಲಿನ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಕ್ರಿಯಾ ಯೋಜನೆ ತಯಾರಿಸಲು ಶುಕ್ರವಾರ ಹಮ್ಮಿಕೊಂಡಿದ್ದ ಗ್ರಾಮಸಭೆಯಲ್ಲಿ ಅವರು ಮಾತನಾಡಿದರು. ಗ್ರಾಮದ ಜನರು ನರೇಗಾ ಯೋಜನೆಯ ಮೂಲಕ ಹಲವಾರು ವೈಯಕ್ತಿಕ ಮತ್ತು ಸಮುದಾಯ ಕಾಮಗಾರಿಗಳನ್ನು ಅನುಷ್ಠಾನ ಮಾಡಿಕೊಳ್ಳಬಹುದು. ಗ್ರಾಮ ಪಂಚಾಯತಿಯ ಚುನಾಯಿತ ಜನಪ್ರತಿನಿಧಿಗಳು ಜನರ ಆಶೋತ್ತರಗಳಿಗೆ ಸ್ಪಂದಿಸಿ ಗ್ರಾಮದ ಗ್ರಾಮೀಣಾಭಿವೃದ್ಧಿ ಕನಸನ್ನ ನನಸಾಗಿಸಬೇಕು ಎಂದರು.

ನಂತರ ಅರಣ್ಯ, ಕೃಷಿ, ತೋಟಗಾರಿಕೆ ಇಲಾಖೆಯ ತಾಂತ್ರಿಕ ಸಿಬ್ಬಂದಿಗಳಾದ ಮಹಾಂತೇಶ್, ಕನಕಪ್ಪ ಹಾಗೂ ರಿಯಾಜ್ ಅವರು ಮಾತನಾಡಿ, ತಮ್ಮ ಇಲಾಖೆಯಡಿ ನರೇಗಾ ಯೋಜನೆಯಡಿ ಸಿಗುವ ಸೌಲಭ್ಯಗಳ ಕುರಿತು ಮಾಹಿತಿಯನ್ನು ನೀಡಿದರು. ಬಳಿಕ ಗ್ರಾಮ ಸಭೆಯಲ್ಲಿ 4 ಗ್ರಾಮಗಳಿಂದ ಮನೆ ಮನೆ ಭೇಟಿ ಹಾಗೂ ವಾರ್ಡ್ ಸಭೆಯಲ್ಲಿ ಬಂದಂತಹ ಬೇಡಿಕೆಯ ಅರ್ಜಿಗಳನ್ನು ಓದಿ ಹೇಳಲಾಯಿತು.

ಈ ವೇಳೆ ಗ್ರಾಮ ಸಭೆಯಲ್ಲಿ ಗ್ರಾ.ಪಂ ಅಧ್ಯಕ್ಷರಾದ ಮಹೇಶ ಭೋಜಪ್ಪ, ಉಪಾಧ್ಯಕ್ಷೆ ನೀಲಮ್ಮ ಯಂಕಪ್ಪ ಸೇರಿದಂತೆ ಸರ್ವ ಸದಸ್ಯರು ಹಾಗೂ ತಾಲ್ಲೂಕು ಐಇಸಿ ಸಂಯೋಜಕರು, ತಾಂತ್ರಿಕ ಸಿಬ್ಬಂದಿಗಳು ಸೇರಿದಂತೆ ಗ್ರಾಮಸ್ಥರು ಹಾಗೂ ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.

> ನರೇಗಾ ಕಾಯಕ ಬಂಧುಗಳು ಕೂಲಿಕಾರರಿಗೆ 100 ದಿನಗಳ ಕೆಲಸವನ್ನು ಕೊಡಿಸುವಲ್ಲಿ ಶ್ರಮಿಸಬೇಕು. ಕಾಲ ಕಾಲಕ್ಕೆ ನಮೂನೆ-06 ಅನ್ನು ಗ್ರಾಮ ಪಂಚಾಯತಿಗೆ ತುಂಬಿ ಕೊಡಬೇಕು. ಬದುನಿರ್ಮಾಣ, ಕೃಷಿ ಹೊಂಡ, ದನದ ದೊಡ್ಡಿ, ಮೇಕೆ ಶೆಡ್, ಹಂದಿ ಶೆಡ್, ಕೋಳಿ ಶೆಡ್ ಸೇರಿದಂತೆ ತೋಟಗಾರಿಕೆ ಬೆಳೆಗಳು, ಕೃಷಿ ಇಲಾಖೆ, ಅರಣ್ಯ ಇಲಾಖೆ, ರೇಷ್ಮೆ ಇಲಾಖೆಯಿಂದ ಕಾಮಗಾರಿ ಮಾಡಲು ಅವಕಾಶವಿದೆ ಇದನ್ನು ಕೂಲಿಕಾರರು ಸದುಪಯೋಗ ಪಡಿಸಿಕೊಳ್ಳಬೇಕು
> -ಬಸವರಾಜ್ ಸಂಕನಾಳ, ಪಿಡಿಓ

ತಂಬಾಕು ಉತ್ಪನ್ನ ಮಾರಾಟ ಅಂಗಡಿಗಳ ಮೇಲೆ ದಾಳಿ

• ಉದಯವಾಹಿನಿ, ಮುದ್ದೇಬಿಹಾಳ

ಉದಯವಾಹಿನಿ ಚಿತ್ರ

ತಾಲ್ಲೂಕ ಆರೋಗ್ಯ ಅಧಿಕಾರಿ ಡಾ. ಸತೀಶ್ ತಿವಾರಿ ನೇತೃತ್ವದಲ್ಲಿ ಮುದ್ದೇಬಿಹಾಳ ಪಟ್ಟಣದಲ್ಲಿ ತಂಬಾಕು ನಿಯಂತ್ರಣ ಕೋಶ ಹಾಗೂ ತಾಲ್ಲೂಕು ತಂಬಾಕು ತನಿಖಾದಳ ಸದಸ್ಯರೊಂದಿಗೆ ಕೊಟ್ಪಾ 2003 ಕಾಯ್ದೆ ಅಡಿ ದಾಳಿ ನಡೆಸಲಾಯಿತು

ಪಟ್ಟಣದ ಬಸವೇಶ್ವರ ವೃತ್ತದಿಂದ ಆಲಮಟ್ಟಿ ರಸ್ತೆ ವರಗೆ ಹಾಗೂ ಮುಖ್ಯ ರಸ್ತೆ ಬಜಾರ್ ಸುತ್ತ ಮುತ್ತ ಮಾರ್ಗಮಧ್ಯದಲ್ಲಿ ಇರತಕ್ಕಂತ ಪಾನ್ ಶಾಪ

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	09:00 ರಿಂದ 10:30
ಗುಳಿಕ ಕಾಲ	ಬೆಳಿಗ್ಗೆ	06:00 ರಿಂದ 07:30
ಯಮಗಂಡ ಕಾಲ	ಮಧ್ಯಾಹ್ನ	01:30 ರಿಂದ 03:00

ಮೇಷ ಯಾರಾದರೂ ನಿಮಗೆ ಅಸಮಾಧಾನವುಂಟುಮಾಡಬಹುದಾದರೂ ಈ ಕಿರಿಕಿರಿಗಳು ನಿಮ್ಮನ್ನು ಆವರಿಸಲು ಬಿಡಬೇಡಿ. ಚಿಂತೆಗಳು ಮತ್ತು ಉದ್ವೇಗಗಳು ದೇಹದ ಮೇಲೆ ಖಿನ್ನತೆಯ ಪರಿಣಾಮ ಬೀರಬಹುದು.

ವೃಷಭ ನೀವು ಆರೋಗ್ಯ ಸಮಸ್ಯೆಯಿಂದಾಗಿ ಒಂದು ಪ್ರಮುಖ ಕೆಲಸಕ್ಕೆ ಹೋಗಲು ಸಾಧ್ಯವಾಗದಿರುವುದರಿಂದ ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಆದರೆ ನಿಮ್ಮನ್ನು ಮೇಲೆತ್ತಲು ನಿಮ್ಮ ತಾರ್ಕಿಕತೆಯನ್ನು ಬಳಸಿ.

ಮಿಥುನ ದೈಹಿಕ ಲಾಭಕ್ಕಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ಆಲೋಚಿಸದೆ ನೀವು ಯಾರಿಗೂ ತಮ್ಮ ಹಣವನ್ನು ಕೊಡಬಾರದು, ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ದೊಡ್ಡ ತೊದರೆಗೊಳಗಾಗಬಹುದು.

ಕರ್ಕಾಟಕ ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆಕ್ರಮಿಸಿಕೊಳ್ಳಲು ಬಿಡಬೇಡಿ. ಶಾಂತವಾಗಿ ಮತ್ತು ಒತ್ತಡ ಮುಕ್ತವಾಗಿ ಉಳಿಯಲು ಪ್ರಯತ್ನಿಸಿ ಹಾಗೂ ಅದು ನಿಮ್ಮ ಮಾನಸಿಕ ದೃಢತೆಯನ್ನು ಹೆಚ್ಚಿಸುತ್ತದೆ.

ಸಿಂಹ ನಿಮ್ಮ ವಿಚಿತ್ರ ವರ್ತನೆಯ ಹೊರತಾಗಿಯೂ ಸಂಗಾತಿ ಸಹಕಾರಿಯಾಗಿ ರುತ್ತಾರೆ. ಪ್ರತಿ ದಿನ ಪ್ರೀತಿಯಲ್ಲಿ ಬೀಳುವ ನಿಮ್ಮ ಸ್ವಭಾವವನ್ನು ಬದಲಾಯಿಸಿ. ಕಟ್ಟುಕತೆಗಳು ಮತ್ತು ವದಂತಿಗಳಿಂದ ದೂರವಿರಿ.

ಕನ್ಯಾ ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ನಕ್ಷತ್ರಪುಂಜಗಳ ಚಾಲನೆ ನಿಮಗಾಗಿ ಉತ್ತಮವಾಗಿಲ್ಲ. ಇಂದಿನ ದಿನ ನೀವು ನಿಮ್ಮ ಹಣವನ್ನು ತುಂಬಾ ಸುರಕ್ಷಿತವಾಗಿಡಬೇಕು.

ತುಲಾ ಕುಡಿಯುವ ಅಭ್ಯಾಸವನ್ನು ತೊಡೆದುಹಾಕಲು ಇದೊಂದು ಅತ್ಯಂತ ಪವಿತ್ರವಾದ ದಿನ. ನೀವು ವೈನ್ ಕುಡಿಯುವುದು ಆರೋಗ್ಯದ ಪ್ರಾಣಾಂತಿಕ ಶತ್ರು ಎಂದು ನೀವು ಅರ್ಥ ಮಾಡಿಕೊಳ್ಳಬೇಕು.

ವೃಶ್ಚಿಕ ಹತಾಶೆಯ ಭಾವನೆ ನಿಮ್ಮನ್ನುಅವರಿಸಲು ಬಿಡಬೇಡಿ. ನೀವು ವಿವಾಹಿತ ರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಏಕೆಂದರೆ ನೀವು ಅದನ್ನು ಮಾಡದಿದ್ದರೆ ಅವರ ಆರೋಗ್ಯವು ಹದಗೆಡಬಹುದು.

ಧನಸ್ಸು ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಬೇಕು. ಇಂದು, ಒಂದು ಪಾರ್ಟಿಯಲ್ಲಿ ನೀವು ಆರ್ಥಿಕ ಭಾಗವನ್ನು ಬಲಪಡಿಸಲು ಪ್ರಮುಖ ಸಲಹೆಯನ್ನು ನೀಡುವ ವ್ಯಕ್ತಿಯನ್ನು ಭೇಟಿ ಮಾಡಬಹುದು.

ಮಕರ ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ.

ಕುಂಭ ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಆಹ್ವಾನಿಸದ ಯಾವುದೇ ಅತಿಥಿ ಇಂದು ಮನೆಗೆ ಬರಬಹುದು.

ಮೀನ ನಿಮಗೇನು ಒಳ್ಳೆಯದೆಂದು ನಿಮಗೆ ಮಾತ್ರ ಗೊತ್ತು – ಆದ್ದರಿಂದ ಧೃಢವಾಗಿರಿ ಮತ್ತು ಧೈರ್ಯಶಾಲಿಗಳಾಗಿರಿ ಮತ್ತು ತಕ್ಷಣದ ನಿರ್ಧಾ ರಗಳನ್ನು ತೆಗೆದುಕೊಳ್ಳಿ ಹಾಗೂ ಫಲಿತಾಂಶಗಳಿಗೆ ಸಿದ್ಧವಾಗಿರಿ.

ಪ್ರಯತ್ನ, ಪ್ರಾರ್ಥನೆ, ಪ್ರಾಮಾಣಿಕತೆಯಿಂದ ದೇಶದ ಪ್ರಗತಿ

● ದೇಶ ಪ್ರೇಮದೊಂದಿಗೆ ಪ್ರಾಮಾಣಿಕತೆ, ಕಲೆ, ಸೌಂದರ್ಯವನ್ನು ಉಳಿಸಿ, ಬೆಳೆಸಬೇಕು: ಶಂಕರ ವಿಜಯೇಂದ್ರ ಸರಸ್ವತಿ

• ಉದಯವಾಹಿನಿ ಉಜಿರೆ

'ಪ್ರಯತ್ನ, ಪ್ರಾರ್ಥನೆ ಮತ್ತು ಪ್ರಾಮಾಣಿಕತೆ ಯಿಂದ ದೇಶದ ಸರ್ವತೋಮುಖ ಪ್ರಗತಿ ಸಾಧ್ಯ' ಎಂದು ಕಂಚಿ ಕಾಮಕೋಟಿ ಪೀಠಾಧಿಪತಿ ಶಂಕರ ವಿಜಯೇಂದ್ರ ಸರಸ್ವತಿ ಶಂಕರಾಚಾರ್ಯ ಸ್ವಾಮೀಜಿ ಹೇಳಿದರು. ಧರ್ಮಸ್ಥಳದಲ್ಲಿ ಗುರುವಾರ ಅನ್ನಪೂರ್ಣ ಭೋಜನಾಲಯದ ಮೇಲಂತಸ್ತಿನಲ್ಲಿ, ಆಸನ ಸೌಲಭ್ಯವುಳ್ಳ ವಿಸ್ತೃತ ಭೋಜನಾಲಯ ಉದ್ಘಾಟಿಸಿ ಅವರು ಮಾತನಾಡಿದರು.

ತಂದೆ-ತಾಯಿ, ಗುರು ಮತ್ತು ಅತಿಥಿಯನ್ನು ನಾವು ದೇವರಂತೆ ಗೌರವಿಸಿ, ಸತ್ಕರಿಸುವುದು ನಮ್ಮ ಸಂಸ್ಕೃತಿ ಮತ್ತು ಪರಂಪರೆ ಆಗಿದೆ. ದೇಶ ಪ್ರೇಮ ದೊಂದಿಗೆ ಪ್ರಾಮಾಣಿಕತೆ, ಕಲೆ, ಸೌಂದರ್ಯವನ್ನು ಉಳಿಸಿ, ಬೆಳೆಸಬೇಕು.

ಆಲಸ್ಯ, ಆಡಂಬರ, ಕಾಲಹರಣ ಸಲ್ಲದು. ಎಲ್ಲರೂ ಶ್ರಮಪಟ್ಟು ಕೆಲಸ ಮಾಡಬೇಕು. ಸತ್ಕಾರ್ಯ ಮಾಡುವವರನ್ನು ಪ್ರೋತ್ಸಾಹಿಸಿ ಗೌರವಿಸಬೇಕು. ಪರಸ್ಪರ ಪ್ರೀತಿ, ವಿಶ್ವಾಸ, ಗೌರವದಿಂದ ಉದಾರ ಹೃದಯಿಗಳಾಗಿ ಸಾರ್ಥಕ ಜೀವನ ನಡೆಸಿದರೆ ಸುಖ-ಶಾಂತಿ, ನೆಮ್ಮದಿ ಸಿಗುತ್ತದೆ' ಎಂದರು.

ಧರ್ಮಸ್ಥಳಕ್ಕೆ ಬರುವ ಭಕ್ತರು ಪ್ರಸಾದ ರೂಪದಲ್ಲಿ ಸ್ವೀಕರಿಸುವ ಅನ್ನದಾನವನ್ನು ತೃಪ್ತಿಕರವಾಗಿ, ಶಾಂತಿ ಮತ್ತು ನೆಮ್ಮದಿಯಿಂದ ಸ್ವೀಕರಿಸುವಂತೆ ಮಾಡಲು ಅನ್ನ ಛತ್ರದಲ್ಲಿ ಆಧುನಿಕ ಸೌಲಭ್ಯಗಳನ್ನು ಅಳವಡಿಸಲಾಗಿದೆ. ಅನ್ನದಾನಕ್ಕೆ ಭಕ್ತರು ಶ್ರದ್ಧಾ-ಭಕ್ತಿಯಿಂದ ಅಕ್ಕಿ, ತರಕಾರಿ, ಧಾನ್ಯಗಳನ್ನು ಉದಾರ ಕೊಡುಗೆಯಾಗಿ ಅರ್ಪಿಸುತ್ತಿದ್ದಾರೆ' ಎಂದು ಸಂತಸ ವ್ಯಕ್ತಪಡಿಸಿದರು. ಕಂಚಿ ಶ್ರೀಗಳು ಸನಾತನ ಧರ್ಮ, ಸಂಸ್ಕೃತಿ ಮತ್ತು ಪರಂಪರೆ ಉಳಿಸಿ ಬೆಳೆಸಲು ಮಾಡುತ್ತಿರುವ ನಿಸ್ವಾರ್ಥ ಸೇವೆ ಬಗ್ಗೆ ಹೆಗ್ಗಡೆಯವರು ಮೆಚ್ಚುಗೆ ವ್ಯಕ್ತಪಡಿಸಿದರು.

ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರಿಗೆ 'ಮಲೆನಾಡು ರತ್ನ' ಬಿರುದು ನೀಡಿ ಸ್ವಾಮೀಜಿ ಗೌರವಿಸಿದರು. ನ.25ರಂದು ನಡೆಯಲಿರುವ ಹೆಗ್ಗಡೆಯವರ ಜನ್ಮದಿನಾಚರಣೆಗೆ

ಉದಯವಾಹಿನಿ ಚಿತ್ರ

ಶುಭ ಕೋರಿದರು. ಭೋಜನಾಲಯವನ್ನು ಕಾರ್ತಿಕ ಮಾಸದ ಅಶ್ವಿನಿ ನಕ್ಷತ್ರದಲ್ಲಿ ಉದ್ಘಾಟಿಸುವ ಸಂದರ್ಭ ವರುಣ ಕೃಪೆಯೂ ಆಗಿರುವುದಕ್ಕೆ ಸ್ವಾಮೀಜಿ ಸಂತಸ ವ್ಯಕ್ತಪಡಿಸಿದರು.

ಕಾಸರಗೋಡು ಎಡನೀರು ಮಠದ ಸಚ್ಚಿದಾನಂದ ಸ್ವಾಮೀಜಿ ಮಾತನಾಡಿ, ಧರ್ಮಸ್ಥಳದಲ್ಲಿ ನಡೆಯುತ್ತಿರುವ ಅನ್ನದಾನ, ವಿದ್ಯಾದಾನ, ಔಷಧ ದಾನ ಮತ್ತು ಅಭಯದಾನ ಎಂಬ ಚತುರ್ವಿಧ ದಾನಗಳಲ್ಲಿ ಅನ್ನದಾನ ಶ್ರೇಷ್ಠ ಹಾಗೂ ಪವಿತ್ರ ದಾನ ವಾಗಿದೆ. ಇತರ ಎಲ್ಲಾ ಕ್ಷೇತ್ರಗಳಿಗೂ ಧರ್ಮಸ್ಥಳದ ವ್ಯವಸ್ಥಿತವಾದ ಮತ್ತು ಶಿಸ್ತುಬದ್ಧವಾದ ಅನ್ನದಾನ ಮಾದರಿಯಾಗಿದೆ' ಎಂದು ಶ್ಲಾಘಿಸಿದರು. ವಿಧಾನ ಪರಿಷತ್ ಸದಸ್ಯ ಕೆ. ಪ್ರತಾಪಸಿಂಹ ನಾಯಕ್, ಕೆ.ಪಿ.ಸಿ.ಸಿ ದಕ್ಷಿಣ ಕನ್ನಡ ಜಿಲ್ಲಾ ಘಟಕದ ಅಧ್ಯಕ್ಷ ಕೆ. ಹರೀಶ್ ಕುಮಾರ್, ಡಿ. ಸುರೇಂದ್ರ ಕುಮಾರ್

ಮಲೆನಾಡು ರತ್ನ ಬಿರುದು

ಧರ್ಮಸ್ಥಳದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಂಚಿ ಕಾಮಕೋಟಿ ಪೀಠಾಧಿಪತಿ ಶಂಕರ ವಿಜಯೇಂದ್ರ ಸರಸ್ವತಿ ಶಂಕರಾಚಾರ್ಯ ಸ್ವಾಮೀಜಿ ಅನ್ನಪೂರ್ಣ ಭೋಜನಾಲಯದ ಮೇಲಂತಸ್ತಿನಲ್ಲಿ ಆಸನ ಸೌಲಭ್ಯವುಳ್ಳ ವಿಸ್ತೃತ ಭೋಜನಾಲಯ ಉದ್ಘಾಟಿಸಿದರು ಧರ್ಮಸ್ಥಳದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಂಚಿ ಕಾಮಕೋಟಿ ಪೀಠಾಧಿಪತಿ ಶಂಕರ ವಿಜಯೇಂದ್ರ ಸರಸ್ವತಿ ಶಂಕರಾಚಾರ್ಯ ಸ್ವಾಮೀಜಿ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರಿಗೆ 'ಮಲೆನಾಡು ರತ್ನ' ಬಿರುದು ನೀಡಿ ಗೌರವಿಸಿದರು

ಶಿಸ್ತುಬದ್ಧವಾದ ಅನ್ನದಾನ ಮಾದರಿ

ಇದ್ದರು. ಡಿ. ಹರ್ಷೇಂದ್ರ ಕುಮಾರ್ ಸ್ವಾಗತಿಸಿದರು. ಅನ್ನಪೂರ್ಣ ಭೋಜನಾಲಯದ ವ್ಯವಸ್ಥಾಪಕ ಸುಬ್ರಹ್ಮಣ್ಯ ಪ್ರಸಾದ್ ವಂದಿಸಿದರು. ಶ್ರೀಧರ ಭಟ್ ಮತ್ತು ಸುನಿಲ್ ಪಂಡಿತ್ ನಿರೂಪಿಸಿದರು.

ಧರ್ಮಸ್ಥಳದ ಅನ್ನದಾನ ಮತ್ತು ನ್ಯಾಯದಾನ ಪದ್ಧತಿಯನ್ನು ಕಂಚಿ ಶ್ರೀಗಳು ಶ್ಲಾಘಿಸಿದರು. ಆರ್ಥಿಕ ದಾರಿದ್ರ್ಯ ಮತ್ತು ಮನೋ ದಾರಿದ್ರ್ಯ ನಿರ್ಮೂಲನೆಯಾಗಿ ರಾಜಕೀಯ ರಹಿತವಾದ ಸಾಮಾಜಿಕ ನೇತೃತ್ವ ದಿಂದ ಲೋಕ ಕಲ್ಯಾಣವಾಗುತ್ತದೆ.

ಎಲ್ಲರೂ ಸತ್ಯ, ಧರ್ಮ ಮತ್ತು ನ್ಯಾಯ ಮಾರ್ಗದಲ್ಲಿ ನಡೆದು ಅಧಿಕಾರ ಮಂತ್ರ ಶಕ್ತಿ ಮತ್ತು ಆರ್ಥಿಕ ಶಕ್ತಿಯ ಸದುಪಯೋಗವಾಗಬೇಕು. ಭಕ್ತಿ ಮತ್ತು ಧರ್ಮಕ್ಕಿಂತಲೂ ಪರಸ್ಪರ ಪ್ರೀತಿ ಮತ್ತು ವಿಶ್ವಾಸವೇ ಮುಖ್ಯ ಎಂದು ಸ್ವಾಮೀಜಿ ಅಭಿಪ್ರಾಯಪಟ್ಟರು.

ಕೇರಳದಲ್ಲಿ ಅಭಿಮಾನ ತಮಿಳುನಾಡಿನಲ್ಲಿ ಅಧ್ಯಯನ ಆಂಧ್ರದಲ್ಲಿ ಆಚಾರ ಮತ್ತು ಕರ್ನಾಟಕ ದಲ್ಲಿ ಅನ್ನದಾನ ಶ್ರೇಷ್ಠವಾಗಿದೆ ಎಂದರು.

ಮಕ್ಕಳು ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಜ್ಞಾನದ ಜೊತೆ ವ್ಯಕ್ತಿತ್ವ ವಿಕಾಸ: ಪಾಲಾಮೋರ್

• ಉದಯವಾಹಿನಿ, ಚಿಂಚೋಳಿ

ಶಾಲಾ ಕಾಲೇಜು ಮಕ್ಕಳು ಶಿಸ್ತು, ಸಮಯಪಾನೆ, ಚಾರಿತ್ರ್ಯವನ್ನು ಅಳವಡಿಸಿಕೊಳ್ಳಬೇಕು, ಹಾಗೂ ಮಕ್ಕಳು ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಂಡು ಪುಸ್ತಕ ಓದುವುದರಿಂದ ಜ್ಞಾನ ಬರುವುದರ ಜೊತೆಗೆ ವ್ಯಕ್ತಿತ್ವದ ವಿಕಾಸವಾಗುತ್ತದೆ ಎಂದು ಪ್ರಾಚಾರ್ಯ ಮಲ್ಲಿಕಾರ್ಜುನ ಪಾಲಾಮೂರ್ ಹೇಳಿದರು.

ಪಟ್ಟಣದ ಚಂದಾಪೂರದ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡ ಮಕ್ಕಳ ದಿನಾಚರಣೆಯ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಕ್ಕಳ ದಿನಾಚರಣೆ ನಿಮಿತ್ತ ಪ್ರತಿ ವರ್ಷದಂತೆ ಈ ವರ್ಷವು ಕೂಡ ಕಾಲೇಜಿನಲ್ಲಿ ವಿವಿಧ ಸ್ಪರ್ಧೆ ಮತ್ತು ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಏರ್ಪಡಿಸಿ ಬಹುಮಾನ ವಿತರಿ ಸಲಾಗುತ್ತಿದೆ. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿ ಗಳಾಗಿ ಭಾರತ ಜ್ಞಾನ ವಿಜ್ಞಾನ ಸಮಿತಿ ಅಧ್ಯಕ್ಷ ಬಸಯ್ಯಾ ಗುತ್ತೇದಾರ, ಪ್ರಭು ಜಾಣ ಆಗಮಿಸಿದ್ದರು.

ಉಪನ್ಯಾಸಕರಾದ ಹಣಮಂತ ಕೋರೆ, ಶಿವಕು ಮಾರ ಪಾಟೀಲ ಮಾತನಾಡಿದರು. ವಿಶೇಷವಾಗಿ

ಉದಯವಾಹಿನಿ ಚಿತ್ರ

ವಾಲಿಬಾಲ್ ಆಟದಲ್ಲಿ ಜಿಲ್ಲೆಗೆ ಪ್ರಥಮ, ರಾಜ್ಯಮಟ್ಟದಲ್ಲಿ ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸ ಲಾಯಿತು. ಕಿರುಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದ ಹಾಗೂ ನಿರಂತರ ಹಾಜರಾತಿ ಇರುವ ವಿದ್ಯಾರ್ಥಿಗಳಿಗೆ ಬಹುಮಾನ ಕೊಟ್ಟು ಪ್ರೋತ್ಸಾಹಿಸಲಾಯಿತು. ಉಪನ್ಯಾಸಕಿ ವಿಜಯಲಕ್ಷ್ಮಿ ಹಂಚನಾಳ ಸ್ವಾಗತಿಸಿದರು, ಚಕ್ಷವರ್ತಿ ನಿರೂಪಿಸಿದರು, ಡಾ. ಶಮಶೋದ್ದಿನ್ ವಂದಿಸಿದರು. ಶಾಲಾಕಾಲೇಜು ವಿದ್ಯಾರ್ಥಿನಿಯರು, ವಿದ್ಯಾರ್ಥಿಗಳು ಶಾಲಾಕಾಲೇಜು ಶಿಕ್ಷಕರು ಸಿಬ್ಬಂದಿಗಳು ಇದ್ದರು.

ಶಾಲಾಕಾಲೇಜು ವಿದ್ಯಾರ್ಥಿಗಳು ಒಳ್ಳೆಯ ಸಂಸ್ಕಾರ ಬೆಳೆಸಿಕೊಂಡು ದುಶ್ಚಟಗಳಿಂದ ದೂರವಿರಬೇಕು ಹಾಗೂ ಹಿರಿಯರ, ಶಿಕ್ಷಕರ, ತಂದೆ ತಾಯಂದಿರ ಮಾತುಗಳು ಕೇಳಿಕೊಂಡು ಬದುಕಿದರೆ ಉನ್ನತಮಟ್ಟಕ್ಕೆ ಬೆಳೆಯಲು ಸಾಧ್ಯವಾಗುತ್ತದೆ, ಮೊಬೈಲ್ ಗಿಳಿಗಳಾಗದೆ ಪುಸ್ತಕ ಗಿಳಿಗಳಾಗಿ ಉತ್ತಮ ವಿದ್ಯಾಭ್ಯಾಸ ಮಾಡಿ ಉನ್ನತಮಟ್ಟದ ಶಿಕ್ಷಣ ಪಡೆದುಕೊಂಡು ತಂದೆ ತಾಯಂದಿರ ಶಿಕ್ಷಕರ ಗ್ರಾಮದ ತಾಲ್ಲೂಕಿನ ಜಿಲ್ಲೆಯ ರಾಜ್ಯದ ದೇಶದ ಹೆಸರು ಉನ್ನತಮಟ್ಟಕ್ಕೆ ಕೊಂಡೊಯ್ಯಬೇಕು -ಪಾಲಾಮೋರ್

ಸಚಿವ ಜಮೀರ್ ವಜಾಗೊಳಿಸಿ: ಜೆಡಿಎಸ್ ಆಗ್ರಹ

• ಉದಯವಾಹಿನಿ, ಗದಗ

ಸಚಿವ ಜಮೀರ್ ಅಹ್ಮದ್ ಖಾನ್ ವಿರುದ್ಧ ಕಾನೂನು ಕ್ರಮ ಕೈಗೊಂಡು, ಸಚಿವ ಸಂಪುಟ ದಿಂದ ವಜಾ ಮಾಡಬೇಕು ಎಂದು ಆಗ್ರಹಿಸಿ ಗದಗ ಜಿಲ್ಲಾ ಜನತಾದಳ ಘಟಕದಿಂದ ಜಿಲ್ಲಾಧಿಕಾರಿ ಮೂಲಕ ಸಿಎಂಗೆ ಮನವಿ ಸಲ್ಲಿಸಲಾಯಿತು. ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಗದಗ ಜಿಲ್ಲಾ ಯುವ ಘಟಕದ ಅಧ್ಯಕ್ಷ ದೇವಪ್ಪ ಈ.

ಮಲ್ಲಸಮುದ್ರ, ಚನ್ನಪಟ್ಟಣದ ಉಪ ಚುನಾವಣೆ ಪ್ರಚಾರದ ಸಂದರ್ಭದಲ್ಲಿ ವಕ್ಫ್ ಮತ್ತು ವಸತಿ ಸಚಿವ ಜಮೀರ್ ಅಹ್ಮದ್ ಅವರು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರನ್ನು 'ಕಾಲಿಯಾ' (ಕರಿಯ) ಎಂದು ಸಂಬೋಧಿಸಿದ್ದಾರೆ. ವಕ್ಫ್ ಸಚಿವರ ಈ ಮಾತು ಕರ್ನಾಟಕದ ಸಮಸ್ತ ಕುಮಾರಣ್ಣ ಅಭಿಮಾನಿಗಳಿಗೆ


ಉದಯವಾಹಿನಿ ಚಿತ್ರ

ಮತ್ತು ಪಕ್ಷದ ನಿಷ್ಠಾವಂತ ಕಾರ್ಯಕರ್ತರ ಮನಸ್ಸಿಗೆ ನೋವು ತಂದಿದೆ ಎಂದರು.

ಉಪಾಧ್ಯಕ್ಷ ಗಿರೀಶ ಸಂಶಿ, ಜಿಲ್ಲಾ ಸಂಘ ಟನಾ ಕಾರ್ಯದರ್ಶಿ ಕೆ.ಎಫ್.ದೊಡ್ಡಮನಿ, ಗದಗ ಜಿಲ್ಲಾ ಮಾಧ್ಯಮ ವಕ್ತಾರ ಜಿ.ಕೆ.ಕೊಳ್ಳಿ ಮಠ, ಗದಗ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಆನಂದ ಹಂಡಿ, ಬಸವರಾಜ ಅಪ್ಪಣ್ಣವರ, ಪಕ್ಷದ ಹಿರಿಯರಾದ ಎಂ.ಎಸ್.ಪರ್ವತಗೌಡ್ರ, ರಮೇಶ ಅರಹುಣಸಿ, ತಿಪ್ಪಣ್ಣ ಹುಡೇದ, ಜೋಸೆಫ್ ಉದೋಜಿ, ಪಿ.ಬಿ.ಗಾಳಿ, ಡಾ. ಶರಣಪ್ಪ ಹೂಗಾರ ಇದ್ದರು.

ಅಧಿಕಾರಿಗಳ ಹೆಸರಿನಲ್ಲೇ ಮಹಾದೋಖಾ: ಇಬ್ಬರು ಅರೆಸ್ಟ್

• ಉದಯವಾಹಿನಿ, ಬೆಳಗಾವಿ

ಕರ್ನಾಟಕದ ಐಎಎಸ್, ಐಪಿಎಸ್ ಅಧಿಕಾರಿಗಳ ಹೆಸರು ಮತ್ತು ಭಾವಚಿತ್ರ ಬಳಸಿ ಫೇಸ್‌ಬುಕ್ ಮೂಲಕ ಹಣ ದೋಚುತ್ತಿದ್ದ ರಾಜಸ್ಥಾನ ಹಾಗೂ ಮಧ್ಯಪ್ರದೇಶ ಮೂಲದ ಇಬ್ಬರು ಸೈಬರ್ ವಂಚಕ ರನ್ನು ಬೆಳಗಾವಿ ಜಿಲ್ಲಾ ಪೊಲೀಸರು ಬಂಧಿಸಿದ್ದಾರೆ. ಮಧ್ಯಪ್ರದೇಶ ಚತರಪುರ ಜಿಲ್ಲೆಯ ಚಾಂದಲಾದ ವಿಜಯಕುಮಾರ ಕಿಶೋರಿಲಾಲ ತಿವಾರಿ (46) ಹಾಗೂ ರಾಜಸ್ಥಾನದ ಅಲವಾರಾ ಜಿಲ್ಲೆಯ ಕೋಟಾ ಖುರ್ದ ಗ್ರಾಮದ ಅರ್ಬಾಜ್ ಹಸಮಖಾನ್ (19) ಬಂಧಿತ ಆರೋಪಿಗಳು ಎಂದು ಗುರುತಿಸಲಾಗಿದೆ. ಆರೋಪಿಗಳನ್ನು ಮಾಹಿತಿ ತಂತ್ರಜ್ಞಾನ ಮತ್ತು ಬಿಎನ್‌ಎಸ್ ಕಾಯ್ದೆಗಳ ಅಡಿ ಬಂಧಿಸಲಾಗಿದೆ.

ವಿಜಯ ಕುಮಾರ ತಿವಾರಿ ಬೆಳಗಾವಿ ಎಸ್‌ಪಿ ಡಾ.ಭೀಮಾಶಂಕರ ಗುಳೇದ ಹೆಸರಿನಲ್ಲಿ ಫೇಸಬುಕ್ ಖಾತೆ ತೆರೆದು ಜನರನ್ನು ಹಣಕ್ಕಾಗಿ ವಂಚಿಸುತ್ತಿದ್ದರೆ ಇನ್ನೊಬ್ಬ ಆರೋಪಿ ಅರ್ಬಾಜ್ ಹಸಮಖಾನ್ ಎಂಬಾತ ಎಸ್‌ಪಿ ಡಾ. ಭೀಮಾಶಂಕರ ಗುಳೇದ, ಬಿ.ಎಸ್ ನೇಮಗೌಡ, ಬಾಲದಂಡಿ ಹಾಗೂ ಐಎಎಸ್ ಅಧಿಕಾರಿಗಳಾದ ಅನುಕುಮಾರಿ ಹಾಗೂ ಎಂ.

ಅಧಿಕಾರಿಗಳ ಹೆಸರಿನಲ್ಲಿ ಚಾಟಿಂಗ್

ಆರೋಪಿಗಳು ಅಧಿಕಾರಿಗಳ ಹೆಸರಿನಲ್ಲಿಯೇ ಸಾಮಾಜಿಕ ಜಾಲತಾಣದಲ್ಲಿ ಖಾತೆಗಳನ್ನು ತೆರೆದು ಜನರಿಗೆ ಫ್ರೆಂಡ್ ರಿಕ್ವೆಸ್ಟ್ ಕಳಿಸಿ ಮೊದಲು ಚಾಟಿಂಗ್ ಮಾಡಿ ನಂಬಿಸಿ ಹಣ ಲಪಟಾಯಿಸುತ್ತಿದ್ದರು. ಸದ್ಯ ಸೈಬರ್ ವಂಚಕರನ್ನು ಬಂಧಿಸಲಾಗಿದೆ ಎಂದು ಬೆಳಗಾವಿ ಎಸ್‌ಪಿ ಡಾ.ಭೀಮಾಶಂಕರ ಗುಳೇದ ಪ್ರಕರಣದ ಬಗ್ಗೆ ವಿವರಿಸಿದ್ದಾರೆ.

ಅರುಣಾ ಹೆಸರಿನಲ್ಲಿ ಫೇಸ್‌ಬುಕ್ ಖಾತೆ ತೆರೆದು ವಂಚಿಸುತ್ತಿದ್ದ ಎನ್ನಲಾಗಿದೆ. ಈ ಬಗ್ಗೆ ಬೆಳಗಾವಿ ಸಿಇಎನ್ ಠಾಣೆಯಲ್ಲಿ ಸಾಲು ಸಾಲು ಪ್ರಕರಣ ದಾಖಲಾಗಿತ್ತು. ಕೂಡಲೇ ಪ್ರಕರಣ ಕೈಗೆತ್ತಿಕೊಂಡ ಪೊಲೀಸರು ತೀವ್ರ ತನಿಖೆ ನಡೆಸಿ ಮಧ್ಯಪ್ರದೇಶ ಮೂಲದ ಇಬ್ಬರು ಸೈಬರ್ ವಂಚಕರನ್ನು ಬಂಧಿಸಿದ್ದಾರೆ. ಸದ್ಯ ಬಂಧಿತ ಆರೋಪಿಗಳ ವಿಚಾರಣೆ ನಡೆಯುತ್ತಿದ್ದು, ವಂಚನೆಯ ಹಣದ ಬಗ್ಗೆ ಮಾಹಿತಿ ಕಲೆ ಹಾಕಲಾಗುತ್ತಿದೆ.

ಮಕ್ಕಳು ದೇಶದ ಭವಿಷ್ಯದ ನಿಜವಾದ ಬೌದ್ಧಿಕ ಆಸ್ತಿ: ಆನಂದ್ ಕುಮಾರ್

• ಉದಯವಾಹಿನಿ, ಚಿತ್ರದುರ್ಗ

ಮಕ್ಕಳು ಈ ದೇಶದ ಭವಿಷ್ಯದ ನಿಜವಾದ ಬೌದ್ಧಿಕ ಆಸ್ತಿ. ಇವರನ್ನು ಪೋಷ

ಬಾಂಗ್ಲಾದೇಶವು ಶೀಘ್ರವೇ ಇಸ್ಲಾಮಿಕ್ ರಾಷ್ಟ್ರವಾಗುವ ಸಾಧ್ಯತೆ?

- ಬಾಂಗ್ಲಾದೇಶದಲ್ಲಿ ಶೇ. 90ರಷ್ಟು ಜನಸಂಖ್ಯೆ ಮುಸ್ಲಿಮರಿದ್ದಾರೆ, ಹಾಗಾಗಿ ಸಂವಿಧಾನದಿಂದ ಜಾತ್ಯತೀತ ಎಂಬ ಪದ ತೆಗೆದು ಹಾಕಿರಿ

ಹೊಸ ವಿವಾದ ಸೃಷ್ಟಿ

ಢಾಕಾ: ಬಾಂಗ್ಲಾದೇಶದಲ್ಲಿ ಶೇ. 90ರಷ್ಟು ಜನಸಂಖ್ಯೆ ಮುಸ್ಲಿಮರಿದ್ದಾರೆ. ಹಾಗಾಗಿ ಸಂವಿಧಾನದಿಂದ ಜಾತ್ಯತೀತ ಎಂಬ ಪದ ತೆಗೆದು ಹಾಕಿರಿ. ಬಂಗಾಬಂಧು ಶೇಖ್ ಮುಜಿಬುರ್ ರೆಹಮಾನ್ ಅವರಿಗೆ ರಾಷ್ಟ್ರಪಿತ ಎಂದು ನೀಡಲಾಗಿರುವ ಗೌರವವನ್ನು ತೆಗೆದುಹಾಕಬೇಕು, ಎಂದು ಬಾಂಗ್ಲಾದೇಶದ ಅಟಾರ್ನಿ ಜನರಲ್ ಮೊಹಮ್ಮದ್ ಅಸಾದುಜ್ಜಾಮನ್ ಆಗ್ರಹಿಸಿದ್ದಾರೆ. ಕೋರ್ಟ್‌ನಲ್ಲಿ ಸಂವಿಧಾನಕ್ಕೆ 15ನೇ ತಿದ್ದುಪಡಿ ಸಂಬಂಧ ವಿಚಾರಣೆ ವೇಳೆ ಅಸಾದುಜ್ಜಾಮನ್ ತಮ್ಮ ಅಭಿಪ್ರಾಯ ಮಂಡಿಸಿದ್ದಾರೆ.

ಈ ಬಗ್ಗೆ ವರದಿ ಮಾಡಿರುವ ಸ್ಥಳೀಯ ಮಾಧ್ಯಮಗಳು ಹಾಗೂ ಅಂತಾರಾಷ್ಟ್ರೀಯ ಸುದ್ದಿ ವಾಹಿನಿಗಳು, ಬಾಂಗ್ಲಾದೇಶವು ಶೀಘ್ರವೇ ಇಸ್ಲಾಮಿಕ್ ರಾಷ್ಟ್ರವಾಗುವ ಸಾಧ್ಯತೆಯಿದೆ ಎಂದು ವಿಶ್ಲೇಷಿಸುತ್ತಿವೆ.

ಅಟಾರ್ನಿ ಜನರಲ್ ಮಂಡಿಸಿರುವ ಇಸ್ಲಾಮಿಕ್ ರಾಷ್ಟ್ರದ ಪರಿಕಲ್ಪನೆಗೆ ಮೊಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರಕಾರದ ಬೆಂಬಲವಿದೆ. ಜಮಾತ್-ಇ-ಇಸ್ಲಾಮಿ ಸಂಘಟನೆಯ ಅಜೆಂಡಾವನ್ನು ಸರಕಾರ ಜಾರಿಗೆ ತತರಲು ಯತ್ನಿಸುತ್ತಿದೆ ಎಂದು ಕೆಲವು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

ಸಂವಿಧಾನಾತ್ಮಕ ತಿದ್ದುಪಡಿಗಳು ಪ್ರಜಾಪ್ರಭುತ್ವವನ್ನು ಪ್ರತಿಫಲಿಸಬೇಕು ಮತ್ತು ನಿರಂಕುಶವಾದವನ್ನು ಪ್ರಚುರಪಡಿಸುವುದನ್ನು ತಡೆಯಬೇಕು ಎಂದು ಅಟಾರ್ನಿ ಜನರಲ್ ವಾದಿಸಿದ್ದಾರೆ.

ಪ್ರಜಾಪ್ರಭುತ್ವವನ್ನು 'ಬುಡಮೇಲು' ಮಾಡುವಂತಹ ಯಾವುದೇ ಬದಲಾವಣೆ ಅಥವಾ ತಿದ್ದುಪಡಿಯನ್ನು ನಿರ್ಬಂಧಿಸುವ 7ಎ ಮತ್ತು 7ಬಿ ಅನುಚ್ಛೇದಗಳಿಗೆ ಆಕ್ಷೇಪ ವ್ಯಕ್ತಪಡಿಸಿದ ಅವರು, ಇವು ಸುಧಾರಣೆಗಳು ಮತ್ತು ರಾಜಕೀಯ ಶಕ್ತಿಯನ್ನು ಕ್ರೋಢೀಕರಿಸುವುದನ್ನು ನಿರ್ಬಂಧಿಸುವ ಮೂಲಕ ಪ್ರಜಾಪ್ರಭುತ್ವವನ್ನು ಕಡೆಗಣಿಸುತ್ತಿವೆ. ಇದನ್ನು ದುರುದ್ದೇಶಗಳನ್ನು ಸಾಧಿಸಲು ಸರ್ವಾಧಿಕಾರವನ್ನು ವಿಸ್ತರಿಸುವ ಸಲುವಾಗಿ ಮಾಡಲಾಗಿದೆ. ಇದು ಕಾನೂನಿನ ನಿಯಮಾವಳಿಗಳಿಗೆ ವಿರುದ್ಧವಾಗಿದೆ ಎಂದು ಹೇಳಿದ್ದಾರೆ. ಈ ಹಿಂದೆ ಚುನಾವಣಾ ಪ್ರಕ್ರಿಯೆ ಮೇಲೆ ನಿಗಾವಣೆ ಇರಿಸಲು ಬಳಕೆಯಾಗುತ್ತಿದ್ದ ಉಸ್ತುವಾರಿ ಸರಕಾರಿ ವ್ಯವಸ್ಥೆಯನ್ನು ತೆಗೆದುಹಾಕಿದ್ದ ಕ್ರಮವನ್ನು ಅಸಾದುಜ್ಜಾಮನ್ ಖಂಡಿಸಿದ್ದಾರೆ.

ಈ ಕ್ರಮವು ಬಾಂಗ್ಲಾ ಪ್ರಜೆಗಳ ಮೂಲಭೂತ ಹಕ್ಕುಗಳನ್ನು ಸೀಮಿತಗೊಳಿಸಿದೆ, ಸಾರ್ವಜನಿಕ ವಿಶ್ವಾಸವನ್ನು ಅಳಿಸಿ ಹಾಕಿದೆ ಹಾಗೂ ದೇಶದ ಪ್ರಜಾಪ್ರಭುತ್ವ ಬುನಾದಿಯನ್ನು ದುರ್ಬಲಗೊಳಿಸಿದೆ ಎಂದು ಆರೋಪಿಸಿದ್ದಾರೆ.

ಸಂವಿಧಾನದಿಂದ ಜಾತ್ಯತೀತ ಅಳಿಸಲು ಪ್ರಸ್ತಾವ

ವ್ಯತಿರಿಕ್ತ ಪ್ರಸ್ತಾವನೆ

ಕೋರ್ಟ್‌ನಲ್ಲಿ ವಿಚಾರಣೆ ವೇಳೆ ಅಸಾದುಜ್ಜಾಮನ್ ಅವರು, '' ಈ ಹಿಂದೆ ದೇಶದ ಎಲ್ಲಾ ವಲಯಗಳಲ್ಲಿ ಅಲ್ಲಾಹು ಬಗ್ಗೆ ಸ್ಥಿರವಾದ ನಂಬಿಕೆ ಹಾಗೂ ವಿಶ್ವಾಸವಿತ್ತು. ಅದು ಮತ್ತೆ ಮರುಕಳಿಸಲಿ ಎಂದು ಬಯಸುವೆ. ಅನುಚ್ಛೇದ 2ಎನಲ್ಲಿ ಎಲ್ಲಾ ಧರ್ಮಗಳ ಆಚರಣೆಗೆ ಸಮಾನ ಹಕ್ಕುಗಳನ್ನು ನೀಡಲಾಗಿದೆ. ಮತ್ತೊಂದೆಡೆ, ಬಂಗಾಳಿ ರಾಷ್ಟ್ರೀಯತೆ ಬಗ್ಗೆ ಅನುಚ್ಛೇದ 9ರಲ್ಲಿ ಪ್ರಸ್ತಾಪಿಸಲಾಗಿದೆ. ಎರಡೂ ಕೂಡ ಇದು ವಿರೋಧಾಭಾಸವಾಗಿದೆ, ಎಂದು ಸಂವಿಧಾನದ 15ನೇ ತಿದ್ದುಪಡಿಯ ಕಾನೂನಾತ್ಮಕತೆಯ ಕುರಿತಾದ ವಿಚಾರಣೆ ವೇಳೆ ಕೋರ್ಟ್ ಮುಂದೆ ಅಭಿಪ್ರಾಯ ಮಂಡಿಸಿದ್ದಾರೆ.

- ಅಟಾರ್ನಿ ಜನರಲ್ ಮೊಹಮ್ಮದ್ ಅಸಾದುಜ್ಜಾಮನ್ ವಾದದಿಂದ ಹೊಸ ವಿವಾದ ಸೃಷ್ಟಿ
- ಬಾಂಗ್ಲಾದೇಶದಲ್ಲಿ ಶೇ. 90ರಷ್ಟು ಜನಸಂಖ್ಯೆ ಮುಸ್ಲಿಮರಿದ್ದಾರೆ ಎಂದು ಅಟಾರ್ನಿ ಹೇಳಿಕೆ
- ಇಸ್ಲಾಮಿಕ್ ರಾಷ್ಟ್ರದ ಪರಿಕಲ್ಪನೆಗೆ ಮೊಹಮ್ಮದ್ ಯೂನಸ್ ಮಧ್ಯಂತರ ಸರಕಾರದ ಬೆಂಬಲ

ಭಾರತದೊಂದಿಗಿನ ಉತ್ತಮ ಸಂಬಂಧ ಮುಂದುವರೆಸಲು ಟ್ರಂಪ್ ನಿರ್ಧಾರ

ವಾಷಿಂಗ್ಟನ್: ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಉತ್ತಮ ಬಾಂಧವ್ಯವನ್ನು ಹೊಂದಿರುವ ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ತಮ ಮೊದಲ ಅವಧಿಯಲ್ಲಿ ಸಾಧಿಸಿದ ಪ್ರಗತಿಯನ್ನು ಈ ಬಾರಿಯೂ ಮುಂದುವರೆಸುವ ನಿರೀಕ್ಷೆಯಿದೆ ಮತ್ತು ಅವರ ದಕ್ಷಿಣ ಏಷ್ಯಾದ ಪ್ರಮುಖ ವ್ಯಕ್ತಿಯಾದ ಭಾರತದೊಂದಿಗೆ ಬಾಂಧವ್ಯವನ್ನು ಬಲಪಡಿಸುವ ನಿರೀಕ್ಷೆಯಿದೆ.

ಪಿಟಿಐಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಲಿಸಾ ಕರ್ಟಿಸ್ ಅವರು , ಅಧ್ಯಕ್ಷ ಟ್ರಂಪ್‌ಗೆ ಉಪ ಸಹಾಯಕರಾಗಿ ಮತ್ತು 2017 ರಿಂದ 2021 ರವರೆಗೆ ದಕ್ಷಿಣ ಮತ್ತು ಮಧ್ಯ ಏಷ್ಯಾದ ರಾಷ್ಟ್ರೀಯ ಭದ್ರತಾ ಮಂಡಳಿಯ ಹಿರಿಯ ನಿರ್ದೇಶಕಿಯಾಗಿ ಸೇವೆ ಸಲ್ಲಿಸಿದ್ದಾರೆ, ಅವರು ಭಾರತ ಮತ್ತು ಯುಎಸ್ ನಡುವೆ ಹಿಂದಿನ ಸಂಬಂಧವನ್ನು ನಿರೀಕ್ಷಿಸಿದ್ದಾರೆ ಎಂದು ಹೇಳಿದರು. ಸುಂಕ, ಶಸ್ತ್ರಾಸ್ತ್ರ ಪೂರೈಕೆ ಮತ್ತು ಇರಾನ್‌ನಿಂದ ತೈಲ ಖರೀದಿಯ ಮೇಲೆ ರಷ್ಯಾದ ಮೇಲೆ ಅವಲಂಬನೆ ಸೇರಿದಂತೆ ಟ್ರಂಪ್ ಅವರ ಮೊದಲ ಅವಧಿಯಲ್ಲಿ ಭಾರತದೊಂದಿಗೆ ಯಶಸ್ವಿ ಮಾತುಕತೆ ನಡೆಸಲಾಗಿತ್ತು.

ಟ್ರಂಪ್ ಅವರ ಮೊದಲ ಅವಧಿಯಲ್ಲಿ (2017-2021), ಭಾರತದ ಪ್ರಾಮುಖ್ಯತೆ ಮತ್ತು ಚೀನಾದ ಸವಾಲುಗಳನ್ನು ಎದುರಿಸುವಲ್ಲಿ ಅದರ ಪಾತ್ರದಿಂದಾಗಿ ಯುಎಸ್-ಭಾರತದ ಸಂಬಂಧದ ಉನ್ನತಿ ಕಂಡುಬಂದಿದೆ ಎಂದು ಅವರು ಹೇಳಿದರು.

ಟ್ರಂಪ್ ಮತ್ತು ಪ್ರಧಾನಿ ಮೋದಿ ನಡುವೆ ಗಮನಾರ್ಹವಾದ ಪರಸ್ಪರ ಗೌರವ ಮತ್ತು ವೈಯಕ್ತಿಕ ಸಂಪರ್ಕವೂ ಇದೆ ಎಂದು ಕರ್ಟಿಸ್ ಗಮನಸೆಳೆದರು. ಹ್ಯೂಸ್ಟನ್‌ನ ಆಸ್ಟ್ರೋಡೋಮ್‌ನಲ್ಲಿ ಪ್ರಧಾನಿ ಮೋದಿ ಅವರು 50,000 ಅಮೆರಿಕನ್ನರನ್ನು ಉದ್ದೇಶಿಸಿ ಮಾತನಾಡಿದ ಕಾರ್ಯಕ್ರಮದ ಸಂದರ್ಭದಲ್ಲಿ ನಾವು ನೋಡಿದ್ದೇವೆ. ಅಧ್ಯಕ್ಷ ಟ್ರಂಪ್ ಅಹಮದಾಬಾದ್‌ನ ಕ್ರೀಡಾಂಗಣದಲ್ಲಿ 100,000 ಭಾರತೀಯರನ್ನು ಉದ್ದೇಶಿಸಿ ಮಾತನಾಡಿದಾಗ ನಾವು ನೋಡಿದ್ದೇವೆ. ಆ ಸಂಬಂಧವು ನಿಜವಾಗಿಯೂ ಪ್ರಗತಿಯನ್ನು ಸಾಧಿಸಲು ಸಹಾಯ ಮಾಡಿತು. ಕರ್ಟಿಸ್ ಅವರು ಪ್ರಸ್ತುತ ಹಿರಿಯ ಫೆಲೋ ಮತ್ತು ಸೆಂಟರ್ ಫಾರ್ ಎ ನ್ಯೂ ಅಮೇರಿಕನ್ ಸೆಕ್ಯುರಿಟಿಯಲ್ಲಿ ಇಂಡೋ-ಪೆಸಿಫಿಕ್ ಸೆಕ್ಯುರಿಟಿ ಪ್ರೋಗ್ರಾಂನ ನಿರ್ದೇಶಕರಾಗಿದ್ದಾರೆ.

ಟ್ರಂಪ್ ಅವರು ಭಾರತವನ್ನು ಎಲ್ಲಿ ನಿಲ್ಲಿಸಿದರು ಎಂದು ನಾನು ಭಾವಿಸುತ್ತೇನೆ. ಅವರು ಸ್ಪಷ್ಟವಾಗಿ ಭಾರತದ ಬಗ್ಗೆ ಒಳ್ಳೆಯ ಭಾವನೆಗಳನ್ನು ಹೊಂದಿದ್ದಾರೆ, ಒಳ್ಳೆಯತನವನ್ನು ಹೊಂದಿದ್ದಾರೆ ಮತ್ತು ಸಂಬಂಧವನ್ನು ನಿರ್ಮಿಸಲು ಮತ್ತು ಆ ಪಾಲುದಾರಿಕೆಯನ್ನು ನಿಜವಾಗಿಯೂ ಗಟ್ಟಿಗೊಳಿಸುವುದನ್ನು ಮುಂದುವರಿಸಲು ನಾನು ಇದನ್ನು ನಿಜವಾಗಿಯೂ ಒಂದು ಅವಕಾಶವಾಗಿ ನೋಡುತ್ತೇನೆ -ಕರ್ಟಿಸ್

ದೆಹಲಿಯಲ್ಲಿ ವಿಪರೀತ ವಾಯುಮಾಲಿನ್ಯ

ನವದೆಹಲಿ: ರಾಷ್ಟ್ರರಾಜಧಾನಿ ದೆಹಲಿಯಲ್ಲಿ ವಾಯು ಮಾಲಿನ್ಯ ನಿಯಂತ್ರಣಕ್ಕೆ ಸರ್ಕಾರದಿಂದ ಮೂರನೇ ಹಂತದ ಕ್ರಮ ಜಾರಿಯಾಗಿದೆ. ಪ್ರಾಥಮಿಕ ಶಾಲಾ ಮಕ್ಕಳಿಗೆ ಆನ್‌ಲೈನ್ ಮೂಲಕ ತರಗತಿ ನಡೆಸಲು ಸರ್ಕಾರ ಸೂಚಿಸಿದೆ.

ಬಿಎಸ್ 3 ಪೆಟ್ರೋಲ್, ಡೀಸೇಲ್ ವಾಹನಗಳ ಸಂಚಾರಕ್ಕೆ ತಡೆ ನೀಡಲಾಗಿದೆ. ಸಿಎನ್‌ಜಿ, ಇವಿ ಸೇರಿದಂತೆ ಅಂತರರಾಜ್ಯಗಳ ಬಿಎಸ್4 ಡಿಸೇಲ್ ಬಸ್‌ಗಳಿಗೆ ಮಾತ್ರ ದೆಹಲಿ ಪ್ರವೇಶ ಕಲ್ಪಿಸಿದೆ. ತುರ್ತು ಅಲ್ಲದ ನಿರ್ಮಾಣ ಮತ್ತು ಕಟ್ಟಡ ತೆರವು ಕಾರ್ಯಕ್ಕೆ ತಡೆ ನೀಡಲಾಗಿದೆ. ಸರ್ಕಾರ ಕಾಮಗಾರಿ, ಆರೋಗ್ಯ ಮತ್ತು ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದ ಕಟ್ಟಡಗಳ ಕಾಮಗಾರಿಗೆ ಮಾತ್ರ ಅನುಮತಿ ನೀಡಲಾಗಿದೆ.

ಏನೇನು ಕ್ರಮ: ಜಿಆರೆಪಿ-3 ಜಾರಿಯಲ್ಲಿರುವ ವರೆಗೆ ಪ್ರಾಥಮಿಕ ಶಾಲಾ ಮಕ್ಕಳಿಗೆ ಶಾಲೆಯಿಂದ ವಿನಾಯಿತಿ ನೀಡಲಾಗುತ್ತಿದ್ದು, ಆನ್‌ಲೈನ್ ಮೂಲಕ ತರಗತಿ ನಡೆಸಲು ಸೂಚನೆ ನೀಡಲಾಗಿದೆ.

ಬಿಎಸ್-3 ಪೆಟ್ರೋಲ್ ಡಿಸೇಲ್ ವಾಹನಗಳ ಸಂಚಾರಕ್ಕೆ ತಡೆ ನೀಡಲಾಗುತ್ತದೆ. ಸಿಎನ್‌ಜಿ, ಇವಿ ಸೇರಿದಂತೆ ಅಂತರರಾಜ್ಯಗಳ ಬಿಎಸ್4 ಡಿಸೇಲ್ ಬಸ್‌ಗಳಿಗೆ ಮಾತ್ರ ದೆಹಲಿ ಪ್ರವೇಶಕ್ಕೆ ಅವಕಾಶ ನೀಡಲಾಗುತ್ತದೆ. ತುರ್ತು ಅಲ್ಲದ ನಿರ್ಮಾಣ ಮತ್ತು ಕಟ್ಟಡ ತೆರವು ಕಾರ್ಯಕ್ಕೆ ತಡೆ ನೀಡಲಾಗಿದ್ದು, ಸರ್ಕಾರಿ ಕಾಮಗಾರಿ, ಆರೋಗ್ಯ ಮತ್ತು ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದ ಕಟ್ಟಡಗಳ ಕಾಮಗಾರಿಗೆ ಮಾತ್ರ ಅನುಮತಿ ನೀಡಲಾಗಿದೆ. ಜೊತೆಗೆ ರಸ್ತೆಗಳಲ್ಲಿ ನೀರು ಚಿಮುಕಿಸುವುದನ್ನು ಹೆಚ್ಚಿಸುವಂತೆ ಸೂಚನೆ ನೀಡಲಾಗಿದೆ. ದೆಹಲಿ ಎನ್‌ಸಿಎಆರ್‌ನಲ್ಲಿ 5ನೇ ತರಗತಿವರೆಗಿನ ಶಾಲೆಗಳನ್ನು ಮುಚ್ಚಲು ಆದೇಶ ನೀಡಲಾಗಿದೆ. ಮುಖ್ಯವಾಗಿ ದೆಹಲಿ ನಿವಾಸಿಗಳು ಸಾಧ್ಯವಾದಷ್ಟು ಸಾರ್ವಜನಿಕ ಸಾರಿಗೆ ಬಳಕೆಗೆ ಆದ್ಯತೆ ನೀಡಬೇಕು ಎಂದು ಸರ್ಕಾರ ಕಟ್ಟುನಿಟ್ಟಾಗಿ ಹೇಳಿದೆ.

ಬಿರ್ಸಾ ಮುಂಡಾಗೆ ಮೋದಿ, ಸೋರೆನ್ ನಮನ

ರಾಂಚಿ: ಬುಡಕಟ್ಟು ಜನಾಂಗದ ಬಿರ್ಸಾ ಮುಂಡಾ ಅವರ ತ್ಯಾಗಗಳಿಂದ ತುಂಬಿದ ಜೀವನವೂ ರಾಷ್ಟ್ರ ಸೇವೆಗೆ ಅಪ್ರತಿಮ ಉದಾಹರಣೆಯಾಗಿದೆ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಮುಂಡಾ ಅವರ ಜನ್ಮ ವಾರ್ಷಿಕೋತ್ಸವದ ಶುಭಾಷಯ ಕೋರಿದ್ದಾರೆ.

ಇಂದಿನ ಜಾರ್ಖಂಡ್‌ನಲ್ಲಿ 1875ರಲ್ಲಿ ಜನಿಸಿದ ಮುಂಡಾ, ಬ್ರಿಟಿಷರ ವಿರುದ್ಧ ಬುಡ ಕಟ್ಟು ದಂಗೆಯನ್ನು ಮುನ್ನಡೆಸಿದರು. ಬಂಧನದಲ್ಲಿದ್ದಾಗ ಅವರು 25 ನೇ ವಯಸ್ಸಿನಲ್ಲಿ ನಿಧನರಾದರು.

ಭಗವಾನ್ ಬಿರ್ಸಾ ಮುಂಡಾ ಜಿ ಅವರು ಮಾತೃಭೂಮಿಯ ಹೆಮೆ ಮತ್ತು ಘನತೆಯನ್ನು ರಕ್ಷಿಸಲು ಎಲ್ಲವನ್ನೂ ತ್ಯಾಗ ಮಾಡಿದ್ದಾರೆ. ಅವರ ಜನ ವಾರ್ಷಿಕೋತ್ಸವದ ಶುಭ ಸಂದರ್ಭದಲ್ಲಿ ನಾನು ಅವರಿಗೆ ನನ್ನ ಹತ್ಪೂರ್ವಕ ಗೌರವವನ್ನು ಸಲ್ಲಿಸುತ್ತೇನೆ ಎಂದು ಪ್ರಧಾನಿ ಮೋದಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ರಾಜ್ಯಪಾಲ ಸಂತೋಷ್ ಕುಮಾರ್ ಗಂಗ್ವಾರ್ ಅವರು ಇಲ್ಲಿನ ರಾಜ ಭವನ, ಬಿರ್ಸಾ ಚೌಕ್ ಮತ್ತು ಕೋಕರ್ ಸಾರಕದಲ್ಲಿರುವ ಬುಡಕಟ್ಟು ಯೋಧನ ಪ್ರತಿಮೆಗಳಿಗೆ ಪುಷ್ಪ ನಮನ ಸಲ್ಲಿಸಿದರು. ಈ ದಿನವು ಬುಡಕಟ್ಟು ಸಮುದಾಯದ ಅಪ್ರತಿಮ ಕೊಡುಗೆ ಮತ್ತು ಅವರ ಶೌರ್ಯವನ್ನು ಪ್ರತಿಬಿಂಬಿಸುತ್ತದೆ ಎಂದು ರಾಜ್ಯಪಾಲರು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಈ ದಿನವು ಜಾರ್ಖಂಡ್‌ಗೆ ವಿಶೇಷವಾಗಿದೆ ಎಂದು ಮುಖ್ಯಮಂತ್ರಿ ಹೇಮಂತ್ ಸೊರೆನ್ ಹೇಳಿದ್ದಾರೆ, ಇದು ಬುಡಕಟ್ಟು ದಂತಕಥೆಯ ಜನದಿನ ಮತ್ತು ರಾಜ್ಯದ ಸಂಸ್ಥಾಪನಾ ದಿನವಾಗಿದೆ ಎಂದು ಹೇಳಿದ್ದಾರೆ.

ರಾಷ್ಟ್ರ ಸೇವೆಗೆ ಅಪ್ರತಿಮ ಉದಾಹರಣೆ

ಇಸ್ರೇಲ್ ವೈಮಾನಿಕ ದಾಳಿಗೆ ಲೆಬನಾನ್‌ನಲ್ಲಿ 12 ಮಂದಿ ಬಲಿ

ಬೈರುತ್: ಇಸ್ರೇಲಿ ನಡೆಸಿದ ವೈಮಾನಿಕ ದಾಳಿಯಲ್ಲಿ ಕನಿಷ್ಠ 12 ಲೆಬನಾನಿನ ರಕ್ಷಣಾ ಕಾರ್ಯಕರ್ತರು ಪೂರ್ವ ನಗರದ ಬಾಲ್ಬೆಕ್‌ನಲ್ಲಿರುವ ನಾಗರಿಕ ರಕ್ಷಣಾ ಕೇಂದ್ರದೊಳಗೆ ಸಾವನ್ನಪ್ಪಿದ್ದಾರೆ ಎಂದು ಆರೋಗ್ಯ ಮತ್ತು ರಕ್ಷಣಾ ಅಧಿಕಾರಿಗಳು ತಿಳಿಸಿದ್ದಾರೆ.

ನಾಶವಾದ ರಕ್ಷಣಾ ಕೇಂದ್ರದ ಅಡಿಯಲ್ಲಿ ಇನ್ನೂ ಸಿಕ್ಕಿಬಿದ್ದಿರುವ ತಮ ಸಹೋದ್ಯೋಗಿಗಳನ್ನು ಹುಡುಕಲು ಲೆಬನಾನಿನ ತುರ್ತು ಕಾರ್ಯಕರ್ತರು ನಿನ್ನೆ ಸಂಜೆಯಿಂದ ಕಾರ್ಯಚರಣೆ ನಡೆಸುತ್ತಿದ್ದು ಘಟನೆಯಲ್ಲಿ ಗಾಯಗೊಂಡಿರುವ ಮೂವರು ನಾಗರಿಕರನ್ನು ರಕ್ಷಿಸಿದ್ದಾರೆ. ಈ ಕುರಿತಂತೆ ಇಸ್ರೇಲಿ ಸೇನೆಯಿಂದ ಯಾವುದೇ ತಕ್ಷಣದ ಪ್ರತಿಕ್ರಿಯೆ ಬಂದಿಲ್ಲ. ಲೆಬನಾನ್‌ನ ಸಿವಿಲ್ ಡಿಫೆನ್ಸ ಪಡೆಗಳು ಉಗ್ರಗಾಮಿ ಗುಂಪು ಹೆಜ್ಬೊಲ್ಲಾಹ್‌ನೊಂದಿಗೆ ಯಾವುದೇ ಸಂಬಂಧವನ್ನು ಹೊಂದಿಲ್ಲ ಮತ್ತು ಅವರು ವಿಶ್ವದ ಅತ್ಯಂತ ಯುದ್ಧ-ಹಾನಿಗೊಳಗಾದ ರಾಷ್ಟ್ರಗಳಲ್ಲಿ ನಿರ್ಣಾಯಕ ಪಾರುಗಾಣಿಕಾ ಮತ್ತು ವೈದ್ಯಕೀಯ ಸೇವೆಗಳನ್ನು ಒದಗಿಸುತ್ತಿದ್ದಾರೆ. ಆರೋಗ್ಯ ಸಚಿವಾಲಯವು ಲೆಬನಾನಿನ ಸರ್ಕಾರಿ ಸ್ವಾಮ್ಯದ ಆರೋಗ್ಯ ಕೇಂದ್ರದ ಮೇಲೆ ಅನಾಗರಿಕ ದಾಳಿ ಎಂದು ಖಂಡಿಸಿದೆ, ಇದು ಎರಡು ಗಂಟೆಗಳಿಗಿಂತ ಕಡಿಮೆ ಅವಧಿಯಲ್ಲಿ ಆರೋಗ್ಯ ತುರ್ತು ಸೌಲಭ್ಯದ ಮೇಲೆ ಇಸ್ರೇಲಿ ನಡೆಸಿದ ಎರಡನೇ ದಾಳಿಯಾಗಿದೆ. ದಕ್ಷಿಣ ಲೆಬನಾನ್‌ನಲ್ಲಿ, ಅರಬ್ಸಲಿಮ್ ಗ್ರಾಮದ ಮೇಲೆ ಇಸ್ರೇಲಿ ನಡೆಸಿದ ಮುಷ್ಕರವು ಹೆಜ್ಬೊಲ್ಲಾಹ್‌ಗೆ ಸಂಬಂಧಿಸಿದ ನಾಗರಿಕ ರಕ್ಷಣಾ ಮತ್ತು ಪಾರುಗಾಣಿಕಾ ಗುಂಪು ಹೆಲ್ತ್ ಅಥಾರಿಟಿ ಅಸೋಸಿಯೇಷನ್ ಅನ್ನು ಗುರಿಯಾಗಿಸಿಕೊಂಡಿದೆ, ನಾಲ್ಕು ಆರೆವೈದ್ಯರು ಸೇರಿದಂತೆ ಆರು ಜನರನ್ನು ಕೊಂದಿದೆ ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ.

ಇಸ್ರೇಲ್ ಡಮಾಸ್ಕನ್ ಪಶ್ಚಿಮ ಮಜ್ಜೆ ನೆರೆಹೊರೆಯಲ್ಲಿ ಕನಿಷ್ಠ ಎರಡು ವೈಮಾನಿಕ ದಾಳಿಗಳನ್ನು ನಡೆಸಿತು ಮತ್ತು ಸಿರಿಯಾದ ರಾಜಧಾನಿ ಕುದ್ಸಯಾ ಉಪನಗರಗಳಲ್ಲಿ ಒಂದರಲ್ಲಿ ಕನಿಷ್ಠ 15 ಮಂದಿ ಸಾವನ್ನಪ್ಪಿದರು ಮತ್ತು 16 ಮಂದಿ ಗಾಯಗೊಂಡಿದ್ದಾರೆ ಎಂದು ಸಿರಿಯಾದ ರಾಜ್ಯ ಸುದ್ದಿ ಸಂಸ್ಥೆ ತಿಳಿಸಿದೆ.

ತುರ್ತು ಸೌಲಭ್ಯದ ಮೇಲೆ ದಾಳಿ

ನೆಲಮಾಳಿಗೆಗೆ ಅಪ್ಪಳಿಸಿದ ಕ್ಷಿಪಣಿಯಿಂದ ಐದು ಅಂತಸ್ತಿನ ಕಟ್ಟಡಕ್ಕೆ ಹಾನಿಯಾಗಿದೆ ಎಂದು ಮಜ್ಜೆಯಲ್ಲಿ ಅಸೋಸಿಯೇಟೆಡ್ ಪ್ರೆಸ್ ಪತ್ರಕರ್ತರೊಬ್ಬರು ತಿಳಿಸಿದ್ದಾರೆ.ಇದು ಇಸ್ಲಾಮಿಕ್ ಜಿಹಾದ್ ಉಗ್ರಗಾಮಿ ಗುಂಪಿನ ಮೂಲಸೌಕರ್ಯ ತಾಣಗಳು ಮತ್ತು ಕಮಾಂಡ್ ಸೆಂಟರ್‌ಗಳನ್ನು ಹೊಡೆದಿದೆ ಎಂದು ಇಸ್ರೇಲಿ ಮಿಲಿಟರಿ ಹೇಳಿದೆ.

ಹವಾಮಾನ ಬದಲಾವಣೆ: ದುರ್ಬಲರಾಗುತ್ತಿದ್ದಾರಂತೆ ಭಾರತೀಯರು

ಬಾಕು: ಹವಾಮಾನ ಬದಲಾವಣೆಯ ಪರಿಣಾಮಗಳಿಂದಾಗಿ ಭಾರತದಲ್ಲಿ ಬಹುತೇಕ ಎಲ್ಲರೂ ಈಗ ದುರ್ಬಲರಾಗಿದ್ದಾರೆ ಎಂದು ವಿಶ್ವ ಆರೋಗ್ಯ ಸಂಸ್ಥೆಯ ಮಾಜಿ ಮುಖ್ಯ ವಿಜ್ಞಾನಿ ಡಾ.ಸೌಮ್ಯ ಸ್ವಾಮಿನಾಥನ್ ಹೇಳಿದ್ದಾರೆ.

ದೇಶದಲ್ಲಿ ಆರೋಗ್ಯ, ಲಿಂಗ ಮತ್ತು ಆರ್ಥಿಕ ಸ್ಥಿತಿಯ ಪರಿಣಾಮಗಳನ್ನು ಪರಿಹರಿಸಲು ಕ್ರಾಸ್-ಮಿನಿಸ್ಟ್ರಿ ಮತ್ತು ಅಂತರಾಷ್ಟ್ರೀಯ ಸಹಯೋಗದ ತುರ್ತು ಅಗತ್ಯವನ್ನು ಅವರು ಒತ್ತಿಹೇಳಿದ್ದಾರೆ. ಸ್ವಾಮಿನಾಥನ್ ಮಹಿಳೆಯರು ಮತ್ತು ಮಕ್ಕಳು ವಿಶೇಷವಾಗಿ ಈ ಹವಾಮಾನ-ಚಾಲಿತ ಆರೋಗ್ಯ ಅಪಾಯಗಳಿಗೆ ಗುರಿಯಾಗುತ್ತಾರೆ ಎಂದು ಎಚ್ಚರಿಸಿದ್ದಾರೆ.

ಅಜೆರ್‌ಬೈಜಾನ್‌ನ ರಾಜಧಾನಿಯಲ್ಲಿ ಕಾಪ್ 29 ಜಾಗತಿಕ ಹವಾಮಾನ ಮಾತುಕತೆಯ ಬದಿಯಲ್ಲಿ ಮಾಧ್ಯಮಕ್ಕೆ ನೀಡಿದ ಸಂದರ್ಶನದಲ್ಲಿ, ಸ್ವಾಮಿನಾಥನ್ ಅವರು ಒಂದು ವಿಕೀಕತ ವಿಧಾನಕ್ಕಾಗಿ ಕರೆ ನೀಡಿದರು. ಪ್ರಾಯೋಗಿಕವಾಗಿ ಭಾರತದಲ್ಲ

ಹೊಸ ಸಿನಿಮಾ ಅನೌನ್ಸ್ ಮಾಡಿದ ಹೊಂಬಾಳೆ ಫಿಲ್ಮ್ಸ್

'ಕೆಜಿಎಫ್', 'ಕಾಂತಾರ' ಸಿನಿಮಾಗಳನ್ನು ನಿರ್ಮಿಸಿ ಸೈ ಎನಿಸಿಕೊಂಡಿರುವ ಹೊಂಬಾಳೆ ಫಿಲ್ಮ್ಸ್ ಇದೀಗ ಹೊಸ ಸಿನಿಮಾವೊಂದನ್ನು ಘೋಷಿಸಿದ್ದಾರೆ. ಹೊಸ ಚಿತ್ರದ ಪೋಸ್ಟರ್ ಅನನು ಚಿತ್ರತಂಡ ಅನಾವರಣ ಮಾಡಿದೆ ಪ್ರಭಾಸ್ ಜೊತೆ ಬ್ಯಾಕ್ ಟು ಬ್ಯಾಕ್ 3 ಸಿನಿಮಾಗಳನ್ನು ಘೋಷಿಸಿದ ಬೆನ್ನಲ್ಲೇ ಹೊಸ ಸಿನಿಮಾದ ಪೋಸ್ಟರ್ ಅನ್ನು ಹೊಂಬಾಳೆ ಫಿಲ್ಮ್ಸ್ ಹಂಚಿಕೊಂಡಿದೆ. ಪೋಸ್ಟರ್‌ನಲ್ಲಿ ರಕ್ತ ಮೆತ್ತಿದ ಕೈ, ನರಸಿಂಹನ ಕೈ ರೀತಿ ಕಾಣುತ್ತಿದೆ. ಕೈ ತುಂಬಾ ಆಭರಣಗಳು ಇವೆ. ನಂಬಿಕೆಗೆ ಸವಾಲು ಬಂದಾಗ, ಅವನು ಕಾಣಿಸಿಕೊಳ್ಳುತ್ತಾನೆ ಎಂದು ಪೋಸ್ಟರ್‌ನಲ್ಲಿ ಬರೆಯಲಾಗಿದೆ. ಈ ಸಿನಿಮಾದ ಕುರಿತು ಸಂಪೂರ್ಣ ಮಾಹಿತಿಯನ್ನು ನವೆಂಬರ್ 16ರಂದು ಮಧ್ಯಾಹ್ನ 03:33ಕ್ಕೆ ರಿವೀಲ್ ಮಾಡೋದಾಗಿ ಹೊಂಬಾಳೆ ಫಿಲ್ಮ್ಸ್ ತಿಳಿಸಿದೆ. ಈ ಚಿತ್ರ ಹಿಂದಿ, ಕನ್ನಡ, ತೆಲುಗು ಮತ್ತು ತಮಿಳು, ಮಲಯಾಳಂನಲ್ಲಿ ಮೂಡಿ ಬರಲಿದೆ. ಈ ಚಿತ್ರಕ್ಕೆ ಅಶ್ವಿನ್ ಕುಮಾರ್ ನಿರ್ದೇಶನ ಮಾಡಲಿದ್ದಾರೆ. ಈ ಚಿತ್ರವನ್ನು ಹೊಂಬಾಳೆ ಸಂಸ್ಥೆ ಜೊತೆ ಕ್ಲೀನ್ ಪ್ರೊಡಕ್ಷನ್ಸ್ ಜಂಟಿಯಾಗಿ ನಿರ್ಮಾಣ ಮಾಡಲಿದೆ.

ಪಡ್ಡೆ ಹುಡುಗರ ನಿದ್ದೆಕದ್ದ ಶಾನ್ವಿ

ಕನ್ನಡದ 'ಮಾಸ್ಟರ್‌ಪೀಸ್' ನಟಿ ಶಾನ್ವಿ ಶ್ರೀವಾಸ್ತವ ಬಹುಭಾಷಾ ನಟಿಯಾಗಿ ಹಲವು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಮಾಲ್ಡೀವ್ಸ್ ತೆಗೆದ ಹಾಟ್ ಫೋಟೋವೊಂದನ್ನು ನಟಿ ಹಂಚಿಕೊಂಡಿದ್ದಾರೆ. ಸಿನಿಮಾಗೆ ಬ್ರೇಕ್ ಕೊಟ್ಟು ಮಾಲ್ಡೀವ್ಸ್‌ಗೆ ಶಾನ್ವಿ ತೆರಳಿದ್ದಾರೆ. ಕಡಲ ತೀರದಲ್ಲಿ ಹಾಟ್ ಆಗಿ ಪೋಸ್ಟ್ ನೀಡಿದ್ದಾರೆ. ವಿವಿಧ ಭಂಗಿಯಲ್ಲಿ ನಿಂತಿರುವ ಸುಂದರ ಫೋಟೋವನ್ನು ನಟಿ ಹಂಚಿಕೊಂಡಿದ್ದಾರೆ. ನಟಿಯ ಬೋಲ್ಡ್ ಅವತಾರಕ್ಕೆ ಫ್ಯಾನ್ಸ್ ಫಿದಾ ಆಗಿದ್ದಾರೆ. ಇನ್ನೂ 'ಚಂದ್ರಲೇಖ' ಸಿನಿಮಾ ಮೂಲಕ ಶಾನ್ವಿ ಕನ್ನಡ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟರು. ಚಿರಂಜೀವಿ ಸರ್ಜಾಗೆ ನಾಯಕಿಯಾಗಿ ನಟಿಸಿದರು.

ಈ ಚಿತ್ರವನ್ನು ಓಂ ಪ್ರಕಾಶ್ ರಾವ್ ನಿರ್ದೇಶನ ಮಾಡಿದರು. ಆ ನಂತರ ಯಶ್ ಜೊತೆ 'ಮಾಸ್ಟರ್‌ಪೀಸ್' ಸಿನಿಮಾದಲ್ಲಿ ಶಾನ್ವಿ ನಟಿಸಿದರು. ಭಲೇ ಜೋಡಿ, ಸುಂದರಾಂಗ ಜಾಣ, ಮಫ್ತಿ, ಗೀತಾ, ತಾರಕ್ ಸೇರಿದಂತೆ ಹಲವು ಸಿನಿಮಾಗಳಲ್ಲಿ ನಟಿಸಿದ್ದಾರೆ. ಕನ್ನಡದ ಜೊತೆ ತೆಲುಗು, ತಮಿಳು, ಮಲಯಾಳಂನಲ್ಲೂ ಶಾನ್ವಿ ಗುರುತಿಸಿಕೊಂಡಿದ್ದಾರೆ. ಪ್ರಸ್ತುತ ನಾಗತಿಹಳ್ಳಿ ಚಂದ್ರಶೇಖರ್ ನಿರ್ದೇಶನದ ಸಿನಿಮಾದಲ್ಲಿ ನಿರೂಪ್ ಭಂಡಾರಿ, ಪೃಥ್ವಿ ಅಂಬರ್ ಜೊತೆ ಶಾನ್ವಿ ನಟಿಸಿದ್ದಾರೆ.

ಸಾಯಿ ಪಲ್ಲವಿ ವಿರುದ್ಧ ಅಭಿಮಾನಿಗಳ ಅಸಮಾಧಾನ

ಸಾಯಿ ಪಲ್ಲವಿಗೆ ದೊಡ್ಡ ಸಂಖ್ಯೆಯ ಅಭಿಮಾನಿಗಳು ದಕ್ಷಿಣ ಭಾರತದಲ್ಲಿದ್ದಾರೆ. ಅವರ ನಟನೆ, ನೃತ್ಯ, ತೆರೆಯಾಚೆಗಿನ ವ್ಯಕ್ತಿತ್ವಕ್ಕೆ ಮಾರು ಹೋಗದವರು ಕಡಿಮೆ. ಆದರೆ ಇದೀಗ ಅವರ ನಟನೆಯ 'ಅಮರನ್' ಸಿನಿಮಾ ಬ್ಲಾಕ್ ಬಸ್ಟರ್ ಆಗಿದೆ. ಆದರೆ ಧನುಶ್ ಹಾಗೂ ಸೂರ್ಯ ಅಭಿಮಾನಿಗಳು ಸಾಯಿ ಪಲ್ಲವಿ ಮೇಲೆ ಅಸಮಾಧಾನ ಹೊರಹಾಕಿದ್ದಾರೆ. ಸಾಯಿ ಪಲ್ಲವಿ ದಕ್ಷಿಣದ ಸೂಪರ್ ಸ್ಟಾರ್ ನಟಿ. ಅವರ ನಟನೆ, ಡ್ಯಾನ್ಸ್, ತೆರೆಯಾಚೆಗಿನ ವ್ಯಕ್ತಿತ್ವಕ್ಕೆ ಪ್ರೇಕ್ಷಕರು ಫಿದಾ ಆಗಿದ್ದಾರೆ. ಸರಳ ಸುಂದರಿ ಸಾಯಿ ಪಲ್ಲವಿಯನ್ನು ಅಜಾತಶತ್ರು ಎಂದು ಸಹ ಕರೆಯಲಾಗುತ್ತಿತ್ತು. ಆದರೆ ಇನ್ನು ಮುಂದೆ ಹಾಗೆ ಕರೆಯುವಂತಿಲ್ಲ. ಸಾಯಿ ಪಲ್ಲವಿ ನಟಿಸಿರುವ ತಮಿಳು ಸಿನಿಮಾ 'ಅಮರನ್' ಇತ್ತೀಚೆಗೆ ಬಿಡುಗಡೆ ಆಗಿದ್ದು, ಸೂಪರ್-ಡೂಪರ್ ಹಿಟ್ ಆಗಿದೆ. ಸಿನಿಮಾದಲ್ಲಿ ರೆಬೆಕಾ ವರ್ಗೀಸ್ ಎಂಬ ನಿಜ ಮಹಿಳೆಯ ಪಾತ್ರದಲ್ಲಿ ಅವರು ನಟಿಸಿದ್ದಾರೆ. ಸಿನಿಮಾ ಏನೋ ಸೂಪರ್ ಹಿಟ್ ಆಗಿದೆ. ಆದರೆ ತಮಿಳಿನ ಸ್ಟಾರ್ ನಟರಾದ ಧನುಶ್ ಹಾಗೂ ಸೂರ್ಯ ಅಭಿಮಾನಿಗಳು ಸಾಯಿ ಪಲ್ಲವಿ ಮೇಲೆ ಬೇಸರ ವ್ಯಕ್ತಪಡಿಸಿದ್ದಾರೆ. 'ಅಮರನ್' ಸಿನಿಮಾ ಬ್ಲಾಕ್ ಬಸ್ಟರ್ ಆದ ಬಳಿಕ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಸಾಯಿ ಪಲ್ಲವಿ, 'ಇದು ನಮ್ಮ ಮೊದಲ ತಮಿಳು ಹಿಟ್ ಸಿನಿಮಾ' ಎಂದಿದ್ದರು. ಇದು ಧನುಶ್ ಹಾಗೂ ಸೂರ್ಯ ಅಭಿಮಾನಿಗಳಿಗೆ ಬೇಸರ ಮೂಡಿಸಿದೆ. ಏಕೆಂದರೆ ಈ ಹಿಂದೆ ಸಾಯಿ ಪಲ್ಲವಿ, ಧನುಶ್ ಹಾಗೂ ಸೂರ್ಯ ಜೊತೆಗೆ ತಮಿಳು ಸಿನಿಮಾಗಳಲ್ಲಿ ನಟಿಸಿದ್ದರು. ಆ ಸಿನಿಮಾಗಳನ್ನು ಫ್ಲಾಪ್ ಎಂದು ಪರೋಕ್ಷವಾಗಿ ಸಾಯಿ ಪಲ್ಲವಿ ಕರೆದಿರುವುದು ಧನುಶ್, ಸೂರ್ಯ ಅಭಿಮಾನಿಗಳ ಅಸಮಾಧಾನಕ್ಕೆ ಕಾರಣವಾಗಿದೆ.

ಅಸಲಿಗೆ 'ಅಮರನ್' ಸಾಯಿ ಪಲ್ಲವಿ ನಾಯಕಿಯಾಗಿ ನಟಿಸಿರುವ ಮೂರನೇ ಸಿನಿಮಾ. ಈ ಮೊದಲು ಸಾಯಿ ಪಲ್ಲವಿ ಪ್ರಧಾನ ಪಾತ್ರದಲ್ಲಿ ನಟಿಸಿದ್ದ 'ದಿವ್ಯಾ' ಹಾಗೂ 'ಗಾರ್ಗಿ' ಸಿನಿಮಾಗಳು ತಮಿಳಿನಲ್ಲಿಯೂ ಬಿಡುಗಡೆ ಆಗಿದ್ದವಾದರೂ ಇವನ್ನು ತೆಲುಗು ಸಿನಿಮಾಗಳು ಎಂದೇ ಪರಿಗಣಿಸಲಾಗುತ್ತಿದೆ.

ನ.28ಕ್ಕೆ ಚಂದನಾ ಅನಂತಕೃಷ್ಣ ಮದುವೆ

'ಬಿಗ್ ಬಾಸ್', 'ಲಕ್ಷ್ಮಿ ನಿವಾಸ' ಖ್ಯಾತಿಯ ಚಂದನಾ ಅನಂತಕೃಷ್ಣ ಅವರು ಅಭಿಮಾನಿಗಳಿಗೆ ಶುಭ ಸುದ್ದಿ ಕೊಟ್ಟಿದ್ದಾರೆ. ಉದ್ಯಮಿ ಪ್ರತ್ಯಕ್ಷ್ ಎಂಬುವವರ ಜೊತೆ ಇದೇ ನ.28ಕ್ಕೆ ಹಸೆಮಣೆ ಏರಲು ನಟಿ ಸಜ್ಜಾಗಿದ್ದಾರೆ. ಇದೀಗ ಭಾವಿ ಪತಿ ಪ್ರತ್ಯಕ್ಷ್ ಜೊತೆಗಿನ ಚಂದನಾ ಫೋಟೋ ರಿವೀಲ್ ಆಗಿದೆ. ಈ ಜೋಡಿಯನ್ನು ನೋಡಿ ನಟಿಯ ಫ್ಯಾನ್ಸ್ ಶುಭಕೋರುತ್ತಿದ್ದಾರೆ. ಕಿರುತೆರೆಯಲ್ಲಿ ಚಿನ್ನುಮರಿ ಅಲಿಯಾಸ್ ಜಾಹ್ನವಿ ಪಾತ್ರದಲ್ಲಿ ಮೋಡಿ ಮಾಡುತ್ತಿರುವ ಚಂದನಾ ಇದೀಗ ಹೊಸ ಬಾಳಿಗೆ ಕಾಲಿಡಲು ರೆಡಿಯಾಗಿದ್ದಾರೆ. ಕುಟುಂಬಸ್ಥರು ನಿಶ್ಚಯಿಸಿದ ಮದುವೆ ಇದಾಗಿದ್ದು, ಉದ್ಯಮಿ ಪ್ರತ್ಯಕ್ಷ್ ಜೊತೆ ಇದೇ ನವೆಂಬರ್ 28ಕ್ಕೆ ಬೆಂಗಳೂರಿನಲ್ಲಿ ಚಂದನಾ ಮದುವೆ ಜರುಗಲಿದೆ. ಈ ಮದುವೆಯಲ್ಲಿ ಕುಟುಂಬಸ್ಥರು, ಆಪ್ತರು, ಕಿರುತೆರೆಯ ಕಲಾವಿದರು ಭಾಗಿಯಾಗಲಿದ್ದಾರೆ. ಇನ್ನೂ ಪ್ರತ್ಯಕ್ಷ್ ಅವರು ಉದ್ಯಮಿಯಾಗಿದ್ದಾರೆ. ವಿಶೇಷ ಅಂದರೆ, ಪ್ರತ್ಯಕ್ಷ್ ಪೋಷಕರು ಕೂಡ ಚಿತ್ರರಂಗದಲ್ಲಿ ಗುರುತಿಸಿಕೊಂಡಿದ್ದಾರೆ. ದಿವಂಗತ ಉದಯ್ ಹುತ್ತಿನಗದ್ದೆ ಅವರು ಡಾ.ರಾಜ್‌ಕುಮಾರ್ ಜೊತೆ 'ದೇವತಾ ಮನುಷ್ಯ' ಚಿತ್ರದಲ್ಲಿ ನಟಿಸಿದ್ದರು. 'ಆರಂಭ', 'ಅಗ್ನಿಪರ್ವ', 'ಶುಭ ಮಿಲನ' ಸೇರಿದಂತೆ ಹಲವು ಸಿನಿಮಾಗಳಲ್ಲಿ ಅವರು ನಟಿಸಿದರು. ಅವರ ಪತ್ನಿ ಲಲಿತಾಂಜಲಿ ಉದಯ್ ಕೂಡ ಹಿರಿತೆರೆ, ಕಿರುತೆರೆಯಲ್ಲಿ ಸಕ್ರಿಯರಾಗಿದ್ದಾರೆ. ಇನ್ನೂ ರಾಜ ರಾಣಿ, ಹೂ ಮಳೆ, ಬಿಗ್ ಬಾಸ್ ಕನ್ನಡ ಸೀಸನ್ 7 ಶೋ ಸೇರಿದಂತೆ ಹಲವು ಪ್ರಾಜೆಕ್ಟ್‌ಗಳಲ್ಲಿ ಚಂದನಾ ಕಾಣಿಸಿಕೊಂಡಿದ್ದಾರೆ. ಪ್ರಸ್ತುತ 'ಲಕ್ಷ್ಮಿ ನಿವಾಸ' ಸೀರಿಯಲ್‌ನಲ್ಲಿ ಜಾಹ್ನವಿ ಪಾತ್ರದ ಮೂಲಕ ಅಭಿಮಾನಿಗಳ ಮನಗೆದ್ದಿದ್ದಾರೆ. ಜೊತೆಗೆ 'ಭಾವ ತೀರ ಯಾನ' ಸಿನಿಮಾದಲ್ಲಿ ಧೃತಿ ಪಾತ್ರಕ್ಕೆ ನಟಿ ಜೀವ ತುಂಬಿದ್ದಾರೆ.



ಅಲ್ಲು ಅರ್ಜುನ್ ನಟನೆಯ ಪುಷ್ಪ 2 ಟ್ರೈಲರ್ ಲಾಂಚ್

ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ ನಟನೆಯ 'ಪುಷ್ಪ 2' ಸಿನಿಮಾದ ಟ್ರೈಲರ್ ನವೆಂಬರ್ 17ರಂದು ರಿಲೀಸ್ ಆಗಲಿದೆ. ಆದರೆ ಡಿಜಿಟಲ್ ಲಾಂಚ್ ಮಾಡುವ ಬದಲು ಬಿಹಾರದ ಪಾಟ್ನಾದಲ್ಲಿ ಬೃಹತ್ ವೇದಿಕೆ ನಿರ್ಮಿಸಿ, ಸಾವಿರಾರು ಅಭಿಮಾನಿಗಳ ಸಮ್ಮುಖದಲ್ಲಿ ಟ್ರೈಲರ್ ರಿಲೀಸ್ ಮಾಡಲಿದೆ ಚಿತ್ರತಂಡ.

ಇದೇ ನವೆಂಬರ್ 17ರಂದು ಬಿಹಾರದ ಗಾಂಧಿ ಮೈದಾನ ಪಾಟ್ನಾದಲ್ಲಿ 'ಪುಷ್ಪ 2' ಟ್ರೈಲರ್ ಲಾಂಚ್ ಕಾರ್ಯಕ್ರಮ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ 'ಪುಷ್ಪ 2' ಟೀಮ್ ಕಲಾವಿದರು ಮತ್ತು ಇಡೀ ತಂಡ ಭಾಗವಹಿಸಲಿದೆ. ಬಹುಭಾಷೆಗಳಲ್ಲಿ ರಿಲೀಸ್ ಈ ಸಿನಿಮಾ ತೆರೆಕಾಣಲಿದೆ. ಹಾಗಾಗಿ ಅಭಿಮಾನಿಗಳ ಎದುರು ಟ್ರೈಲರ್ ರಿಲೀಸ್ ಮಾಡಿದ್ರೆ, ಮತ್ತಷ್ಟು ಜನರಿಗೆ ಕನೆಕ್ಟ್ ಆಗುಬಹುದು ಎಂಬ ಕಾರಣಕ್ಕೆ ತಂಡ ಮಾಸ್ಟರ್ ಪ್ಲ್ಯಾನ್ ಮಾಡಿದೆ. ಇನ್ನೂ ಇದೇ ಡಿ.5ರಂದು 'ಪುಷ್ಪ 2' ಸಿನಿಮಾ ರಿಲೀಸ್ ಆಗಲಿದೆ. ಅಲ್ಲು ಅರ್ಜುನ್, ರಶ್ಮಿಕಾ, ಡಾಲಿ, ಅನಸೂಯ ಸೇರಿದಂತೆ ಅನೇಕರು ನಟಿಸಿದ್ದಾರೆ. ಸಿನಿಮಾದಲ್ಲಿ ಐಟಂ ಡ್ಯಾನ್ಸ್‌ನಲ್ಲಿ ಶ್ರೀಲೀಲಾ ಹೆಜ್ಜೆ ಹಾಕಿದ್ದಾರೆ.

ಕ್ರಿಕೆಟ್‌ಗೆ ಮರಳಲು ಸಜ್ಜಾದ ಅಫ್ಘಾನ್ ಮಹಿಳೆಯರು

ತಾಲಿಬಾನ್ ನಿಷೇಧದ ಬಳಿಕ ಮೊದಲ ಬಾರಿಗೆ ಟಿ20 ಪಂದ್ಯ

ಜನವರಿ 30 ರಂದು ಮೆಲ್ಬೋರ್ನ್‌ನ ಜಂಕ್ಷನ್ ಓವಲ್‌ನಲ್ಲಿ ಅಫ್ಘಾನಿಸ್ತಾನ ಮಹಿಳಾ ಇಲೆವೆನ್ (ನಿರಾಶ್ರಿತರ ತಂಡ) ಮತ್ತು ಕ್ರಿಕೆಟ್ ವಿಥೌಟ್ ಬಾರ್ಡರ್ಸ್ ಇಲೆವೆನ್ ನಡುವೆ ಪ್ರದರ್ಶನ ಪಂದ್ಯ ನಡೆಯಲಿದೆ. ಈ ಪಂದ್ಯವು ಆಸ್ಟ್ರೇಲಿಯಾ ಮಹಿಳೆಯರ ಮತ್ತು ಇಂಗ್ಲೆಂಡ್ ಮಹಿಳೆಯರ ಮೊದಲ ಆಶಸ್ ಪಂದ್ಯದ ಹಿಂದಿನ ದಿನ ಆಯೋಜಿಸಲಾಗಿದೆ. ಪ್ರಸ್ತುತ ಆಸ್ಟ್ರೇಲಿಯಾದಲ್ಲಿ ಆಶ್ರಯ ಪಡೆದಿರುವ ಅಫ್ಘಾನಿಸ್ತಾನದ ಮಹಿಳಾ ಅಂತಾರಾಷ್ಟ್ರೀಯ ಕ್ರಿಕೆಟಿಗರು ಜನವರಿ 30 ರಂದು ಮೆಲ್ಬೋರ್ನ್‌ನ ಜಂಕ್ಷನ್ ಓವಲ್‌ನಲ್ಲಿ ಕ್ರಿಕೆಟ್ ವಿಥೌಟ್ ಬಾರ್ಡರ್ಸ್ 11 ವಿರುದ್ಧ ಟಿ20 ಪಂದ್ಯವನ್ನು ಆಡಲಿದ್ದಾರೆ. 2021 ರಲ್ಲಿ ತಾಲಿಬಾನ್ ಅಫ್ಘಾನಿಸ್ತಾನವನ್ನು ವಶಪಡಿಸಿಕೊಂಡ ನಂತರ ಇದು ಅವರ ಮೊದಲ ಪಂದ್ಯವಾಗಿದೆ. 2021 ರಲ್ಲಿ ತಾಲಿಬಾನ್ ಆಡಳಿತ ವಹಿಸಿಕೊಂಡ ನಂತರ ದೇಶದಿಂದ ಪಲಾಯನ ಮಾಡಿದ ಮಾಜಿ ಅಫ್ಘಾನಿಸ್ತಾನ ಮಹಿಳಾ ಕ್ರಿಕೆಟಿಗರ ಬಹು ದಿನಗಳ ಮನವಿ ಇಡೇರುತ್ತಿದೆ. ಜನವರಿ 30 ರಂದು ಮೆಲ್ಬೋರ್ನ್‌ನ ಜಂಕ್ಷನ್ ಓವಲ್‌ನಲ್ಲಿ ಅಫ್ಘಾನಿಸ್ತಾನ ಮಹಿಳಾ ಇಲೆವೆನ್ (ನಿರಾಶ್ರಿತರ ತಂಡ) ಮತ್ತು ಕ್ರಿಕೆಟ್ ವಿಥೌಟ್ ಬಾರ್ಡರ್ಸ್ ಇಲೆವೆನ್ ನಡುವೆ ಪ್ರದರ್ಶನ ಪಂದ್ಯ ನಡೆಯಲಿದೆ.

ಈ ಪಂದ್ಯವು ಆಸ್ಟ್ರೇಲಿಯಾ ಮಹಿಳೆಯರ ಮತ್ತು ಇಂಗ್ಲೆಂಡ್ ಮಹಿಳೆಯರ ಮೊದಲ ಆಶಸ್ ಪಂದ್ಯದ ಹಿಂದಿನ ದಿನ ಆಯೋಜಿಸಲಾಗಿದೆ. ಮಹಿಳೆಯರ ಟೆಸ್ಟ್ ಕ್ರಿಕೆಟ್‌ನ 90 ನೇ ವಾರ್ಷಿಕೋತ್ಸವವನ್ನು ಒಂದೇ ಬಾರಿಗೆ ಕೆಂಪು-ಚೆಂಡಿನ ಆಡಿಯಲ್ಲಿ ಸಂಭ್ರಮಿಸಲು ಆಸೀಸ್ ಮುಂದಾಗಿದೆ ಎನ್ನಬಹುದು.

ತಾಲಿಬಾನ್ ಅಧಿಕಾರ ವಹಿಸಿಕೊಂಡ ನಂತರ ಅಫ್ಘಾನಿಸ್ತಾನವನ್ನು ತೊರೆದು ಬಂದ ಮಹಿಳಾ ತಂಡವು ಮೈದಾನದಲ್ಲಿ ಒಟ್ಟಿಗೆ ಕಾಣಿಸಿಕೊಳ್ಳುತ್ತಿರುವುದು ಇದೇ ಮೊದಲು. ತಾಲಿಬಾನ್ ಸರ್ಕಾರವು ಸಂಪ್ರದಾಯವಾದಿ ಕಾನೂನುಗಳಿಗೆ ಬದ್ಧವಾಗಿದೆ, ಇದು ಮಹಿಳೆಯರು ಕ್ರೀಡೆಗೆ ಸಂಬಂಧಿಸಿದ ಚಟುವಟಿಕೆಗಳಲ್ಲಿ ಭಾಗವಹಿಸುವುದನ್ನು ನಿಷೇಧಿಸುತ್ತದೆ. ಇದು ಅನೇಕ ಕ್ರಿಕೆಟ್ ಮತ್ತು ಫುಟ್ಬಾಲ್ ಆಟಗಾರರ ಮೇಲೆ ತಮ್ಮ ಮಹತ್ವಾಕಾಂಕ್ಷೆಗಳನ್ನು ಜೀವಂತವಾಗಿಡಲು ದೇಶದಿಂದ ಪಲಾಯನ ಮಾಡಲು ಪ್ರಭಾವ ಬೀರಿತು.

ಈ ವರ್ಷದ ಜುಲೈನಲ್ಲಿ, 17 ಅಫ್ಘಾನಿಸ್ತಾನ ಮಹಿಳಾ ಆಟಗಾರರು ಅಂತರಾಷ್ಟ್ರೀಯ ಕ್ರಿಕೆಟ್ ಕೌನ್ಸಿಲ್‌ಗೆ ನಿರಾಶ್ರಿತರ ತಂಡವನ್ನು ಸ್ಥಾಪಿಸಲು ಸಹಾಯ ಮಾಡಲು ಪತ್ರ ಬರೆದಿದ್ದರು. ಅದು ಅಂತರರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಿಸಲು ಅವಕಾಶ ನೀಡುತ್ತದೆ.

ಸದ್ಯ ಕ್ರಿಕೆಟ್ ವಿಕ್ಟೋರಿಯಾ ಮತ್ತು ಕ್ರಿಕೆಟ್ ಎಸಿಟಿಯಿಂದ ಬೆಂಬಲಿತವಾಗಿರುವ ಕ್ರಿಕೆಟ್ ಆಸ್ಟ್ರೇಲಿಯಾದ ಈ ಕ್ರಮವು ಅಫ್ಘಾನಿಸ್ತಾನದ ಮಹಿಳಾ ಆಟಗಾರರಿಗೆ ದೊಡ್ಡ ಪರಿಹಾರವಾಗಿದೆ. ಅಫ್ಘಾನಿಸ್ತಾನ ಮಹಿಳಾ ತಂಡದ ಆಟಗಾರ್ತಿಯರಿಗೆ ಅವಕಾಶ ಕಲ್ಪಿಸುವಲ್ಲಿ ಆಸ್ಟ್ರೇಲಿಯಾ ಸರ್ಕಾರ ತೊಡಗಿದೆ. 2021 ರಲ್ಲಿ ತಾಲಿಬಾನ್ ಅಧಿಕಾರಕ್ಕೆ ಬಂದಾಗಿನಿಂದ ಅಫ್ಘಾನಿಸ್ತಾನ ಮಹಿಳಾ ಕ್ರಿಕೆಟ್ ತಂಡದ ಆಟಗಾರರು ಕ್ಯಾನ್‌ಬೆರಾ ಮತ್ತು ಮೆಲ್ಬೋರ್ನ್‌ನಲ್ಲಿ ವಾಸಿಸುತ್ತಿದ್ದಾರೆ. ''ಆಸ್ಟ್ರೇಲಿಯಾಕ್ಕೆ ಸ್ಥಳಾಂತರಗೊಂಡ ನಂತರ ಅಫ್ಘಾನಿಸ್ತಾನ ಮಹಿಳಾ ಕ್ರಿಕೆಟ್ ತಂಡದ ಸದಸ್ಯರಿಗೆ ಬೆಂಬಲ ನೀಡಲು ಕ್ರಿಕೆಟ್ ಸಮುದಾಯದಾದ್ಯಂತ ಅನೇಕ ಜನರು ಒಗ್ಗೂಡಿದ್ದಾರೆ ಮತ್ತು ಈ ಪಂದ್ಯವು ಆ ಕೆಲಸದ ಆಚರಣೆಯಾಗಿದೆ. ಈ ಪಂದ್ಯದಲ್ಲಿ ಒಟ್ಟಿಗೆ ಆಡುವ ಅವರ ಮಹತ್ವಾಕಾಂಕ್ಷೆಯನ್ನು ಸಾಧಿಸಲಾಗುವುದು ಎಂದು ನಾನು ಸಂತೋಷಪಡುತ್ತೇನೆ, ಇದು ಹಗಲು-ರಾತ್ರಿ ಮಹಿಳೆಯರ ಆಶಸ್ ಟೆಸ್ಟ್‌ನ ಸುತ್ತಲಿನ ಅನೇಕ ಘಟನೆಗಳಿಗೆ ಅದ್ಭುತ ಸೇರ್ಪಡೆಯಾಗಿದೆ'' ಎಂದು ಕ್ರಿಕೆಟ್ ಆಸ್ಟ್ರೇಲಿಯಾದ ಮುಖ್ಯ ಕಾರ್ಯನಿರ್ವಾಹಕ ನಿಕ್ ಹಾಕ್ಲೆ ತಿಳಿಸಿದ್ದಾರೆ.

ಟ್ರೋಫಿಯನ್ನು ಕೊಂಡೊಯ್ಯುವಂತಿಲ್ಲ

ಪಾಕಿಸ್ತಾನಕ್ಕೆ ಖಡಕ್ ಸೂಚನೆ ನೀಡಿದ ಐಸಿಸಿ2025ರಲ್ಲಿ ನಡೆಯಲಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿಗೆ ನಾನಾ ಅಡೆತಡೆಗಳು ಎದುರಾಗುತ್ತಿವೆ. ಈ ಐಸಿಸಿ ಟೂರ್ನಿಯನ್ನು ಆಡಲು ಪಾಕಿಸ್ತಾನಕ್ಕೆ ಹೋಗಲು ಭಾರತ ತಂಡಕ್ಕೆ ಅನುಮತಿ ಸಿಕ್ಕಿಲ್ಲ. ಇತ್ತ ಪಾಕಿಸ್ತಾನ ಕೂಡ ಹೈಬ್ರಿಡ್ ಮಾದರಿಯಲ್ಲಿ ಟೂರ್ನಿ ಆಯೋಜಿಸಲು ಒಪ್ಪುತ್ತಿಲ್ಲ. ಈ ನಡುವೆ ಭಾರತವನ್ನು ಕೆರಳಿಸುವ ಕೆಲಸಕ್ಕೆ ಮುಂದಾಗಿದ್ದ ಪಾಕಿಸ್ತಾನಕ್ಕೆ, ಐಸಿಸಿ ಖಡಕ್ ಎಚ್ಚರಿಕೆ ನೀಡಿದೆ. ಅದರಂತೆ ಐಸಿಸಿ ಚಾಂಪಿಯನ್ಸ್ ಟ್ರೋಫಿಯನ್ನು ವಿವಾದಿತ ಪ್ರದೇಶವಾದ ಪಾಕ್ ಆಕ್ರಮಿತ ಕಾಶ್ಮೀರಕ್ಕೆ ಕೊಂಡೊಯ್ಯುವಂತಿಲ್ಲ ಎಂದು ಐಸಿಸಿ, ಪಾಕಿಸ್ತಾನಕ್ಕೆ ಸೂಚನೆ ನೀಡಿದೆ ಎಂದು ವರದಿಯಾಗಿದೆ.

ವಾಸ್ತವವಾಗಿ, ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿಯು ಐಸಿಸಿ ಚಾಂಪಿಯನ್ಸ್ ಟ್ರೋಫಿಯನ್ನು ದುಬೈನಿಂದ ಇಸ್ಲಾಮಾಬಾದ್‌ಗೆ ಕಳುಹಿಸಿದೆ. ಇದೀಗ ಈ ಟ್ರೋಫಿಯನ್ನು ದೇಶದಾದ್ಯಂತ ಕೊಂಡೊಯ್ಯಲು ಪಾಕಿಸ್ತಾನ ಕ್ರಿಕೆಟ್ ಮಂಡಳಿ ಸಿದ್ಧವಾಗಿದೆ. ಅಂದರೆ ಪಾಕಿಸ್ತಾನದ ವಿವಿಧ ಸ್ಥಳಗಳಲ್ಲಿ ಚಾಂಪಿಯನ್ಸ್ ಟ್ರೋಫಿಯ ಪ್ರದರ್ಶನವನ್ನು ನಡೆಸಲಾಗುತ್ತದೆ. ಇದಕ್ಕಾಗಿ ಪಾಕಿಸ್ತಾನ, ಯಾವ್ಯಾವ ಸ್ಥಳಗಳಲ್ಲಿ ಚಾಂಪಿಯನ್ಸ್ ಟ್ರೋಫಿಯ ಪ್ರದರ್ಶನವನ್ನು ಏರ್ಪಡಿಸಬೇಕು ಎಂಬುದರ ಪಟ್ಟಿ ಮಾಡಿ, ಐಸಿಸಿಗೆ ಸಲ್ಲಿಸಿತ್ತು. ಆದರೆ ಪಾಕ್ ಸಲ್ಲಿಸಿದ ಪಟ್ಟಿಯಲ್ಲಿ ವಿವಾದಿತ ಜಾಗದ ಹೆಸರಿರುವುದನ್ನು ಮನಗಂಡಿರುವ ಐಸಿಸಿ, ಆ ಪ್ರದೇಶಕ್ಕೆ ಚಾಂಪಿಯನ್ಸ್ ಟ್ರೋಫಿಯನ್ನು ಕೊಂಡೊಯ್ಯದಂತೆ ಪಾಕ್ ಮಂಡಳಿಗೆ ತಾಕೀತು ಮಾಡಿದೆ.